ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: **ರಮೇಶರೆಡ್ಡಿ** | **9448 604450**

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 114 ಸಂಚಿಕೆ- 114 | PAGE-8 ಪುಟ-8 | ಗುರುವಾರ 12.06.2025 | RS.2/- ಬೆಲೆ 2/-

## ಜನಸಂಖ್ಯೆಗೆ ಸಂಬಂಧಿಸಿದಂತೆ ಮಾತ್ರ ಮರು ಸಮೀಕ್ಷೆ:ಸಿಎಂ



ಮಲ್ಲಮ್ಮ ನುಡಿ ವಾರ್ತೆ
ಚಿಕ್ಕಬಳ್ಳಾಪುರ:ಜೂ.11: ಕಾಂಗ್ರೆಸ್ ಹೈಕಮಾಂಡ್ ನಿರ್ದೇಶನದ ಮೇರೆಗೆ ನಮ್ಮ ಸರ್ಕಾರ ಸುಮಾರು 60 ರಿಂದ 70 ದಿನಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಜಾತಿಗಣತಿ ಕಾರ್ಯವನ್ನು ನಡೆಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಹೇಳಿದ್ದಾರೆ.

"2015-16ರಲ್ಲಿ ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ನಡೆಸಿದ ಶೈಕ್ಷಣಿಕ ಹಾಗೂ ಸಾಮಾಜಿಕ ಸಮೀಕ್ಷೆ(ಜಾತಿ ಗಣತಿ)ಯ ವರದಿಯನ್ನು ಪ್ರಾಥಮಿಕವಾಗಿ ಅಂಗೀಕರಿಸಲಾಗಿದೆ. ಇದನ್ನು ಸಂಪೂರ್ಣವಾಗಿ ತಿರಸ್ಕರಿಸುತ್ತಿಲ್ಲ. ಜನಸಂಖ್ಯೆಗೆ ಸಂಬಂಧಪಟ್ಟಂತಹ ಮಾಹಿತಿಯನ್ನು ಮಾತ್ರ ಮರು ಸಮೀಕ್ಷೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಜಾತಿ ಸಮೀಕ್ಷೆ ನಡೆದು ಸುಮಾರು ಒಂಬತ್ತು-ಹತ್ತು ವರ್ಷಗಳು ಕಳೆದಿರುವುದರಿಂದ ಕೆಲವು ದೂರುಗಳು ಬಂದಿವೆ ಎಂದು ಹೈಕಮಾಂಡ್ ಹೇಳಿದೆ. ಆದ್ದರಿಂದ ಕಡಿಮೆ ಅವಧಿಯಲ್ಲಿ, ಸುಮಾರು 60-70 ದಿನಗಳಲ್ಲಿ ಮರು ಸಮೀಕ್ಷೆ ಮಾಡಲಾಗುತ್ತದೆ. ಹಿಂದುಳಿದ ವರ್ಗಗಳ ಆಯೋಗ ನೀಡಿದ ಸಂಪೂರ್ಣ ವರದಿಯನ್ನು ನಾವು ತಿರಸ್ಕರಿಸುತ್ತಿಲ್ಲ. ಮುಖ್ಯವಾಗಿ ವರದಿಯನ್ನು ಅಂಗೀಕರಿಸಲಾಗಿದೆ, ಮರು ಸಮೀಕ್ಷೆ ಮಾತ್ರ ಮಾಡಲಾಗುತ್ತದೆ" ಎಂದು ಸಿದ್ದರಾಮಯ್ಯ ಸುದ್ದಿಗಾರರಿಗೆ ತಿಳಿಸಿದರು.

ಹೈಕಮಾಂಡ್ ಸೂಚನೆಯಿಂದ ಸಿದ್ದರಾಮಯ್ಯನವರಿಗೆ ನಿರಾಶೆಯಾಗಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ, ವರದಿಯ ವಿಚಾರದಲ್ಲಿ ನನ್ನ ನಿರ್ಧಾರ ಮುಖ್ಯ ಅಲ್ಲ. ಹೈಕಮಾಂಡ್ ಹೇಳಿದಂತೆ ಮರು ಸಮೀಕ್ಷೆ ನಡೆಸುತ್ತೇವೆ ಎಂದು ಹೇಳಿದರು.

ಇನ್ನು ಶೈಕ್ಷಣಿಕ ಸಂಸ್ಥೆಗಳಲ್ಲಿ ಅಗತ್ಯವಿರುವ ಕಡೆ ಅತಿಥಿ ಉಪನ್ಯಾಸಕರನ್ನು ನೇಮಿಸಲಾಗುತ್ತಿದೆ. ಅವರ ಸಂಖ್ಯೆಯನ್ನು ಹೆಚ್ಚಿಸಲಿದೆ. ಈಗಾಗಲೇ ಅವರ ಗೌರವಧನ ಹೆಚ್ಚಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ. ಪ್ರಾಥಮಿಕದಿಂದ ಹಿಡಿದು ಉನ್ನತ ಶಿಕ್ಷಣದವರೆಗೂ ಹೆಚ್ಚಿನ ಆದ್ಯತೆ ನೀಡಿದ್ದೇವೆ ಎಂದರು.

ಇದೇ ವೇಳೆ ಕಾಂಗ್ರೆಸ್ ಶಾಸಕರ ಮತ್ತು ಸಂಸದರ ಮನೆ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳ ದಾಳಿ ಬಗ್ಗೆ ಪ್ರತ್ರಿಯಿಸಿದ ಸಿಎಂ, ಕಾನೂನು ಪ್ರಕಾರ ಯಾವುದೇ ಕ್ರಮಗಳನ್ನು ಕೈಗೊಂಡರೂ ನಮ ವಿರೋಧ ಇಲ್ಲ. ಆದರೆ ಕಾನೂನು ಉಲ್ಲಂಘನೆಗೆ ನಾವು ಬೆಂಬಲಿಸುವುದಿಲ್ಲ ಎಂದು ಹೇಳಿದರು.

## ರಾಜ್ಯದಲ್ಲಿ ಸದ್ಯಕ್ಕೆ ಸಚಿವ ಸಂಪುಟ ಪುನಾರಚನೆ ಇಲ್ಲ: ಮಲ್ಲಿಕಾರ್ಜುನ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜೂ.11: ರಾಜ್ಯದಲ್ಲಿ ಸದ್ಯಕ್ಕೆ ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಎಐಸಿಸಿ ಮುಂದೆ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಹೇಳಿದರು.

ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ನಿರ್ಧರಿಸಿದಾಗ ತಿಳಿಸುತ್ತೇವೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಂಗಳವಾರ ನವದೆಹಲಿಯಲ್ಲಿ ತಮ್ಮನ್ನು ಹಾಗೂ ಎಐಸಿಸಿ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರನ್ನು ಭೇಟಿಯಾದಾಗ ಕರ್ನಾಟಕದಲ್ಲಿನ ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಕುರಿತು ಯಾವುದೇ ಮಾತುಕತೆ ನಡೆಸಿಲ್ಲ ಎಂದು ಸ್ಪಷ್ಟಪಡಿಸಿದರು.

ಬೆಂಗಳೂರು ಕಾಲ್ತುಳಿತ, ಜಾತಿ ಸಮೀಕ್ಷೆ ಬಗ್ಗೆ ಚರ್ಚೆ:

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಹಾಗೂ ಜಾತಿ ಸಮೀಕ್ಷೆ ಕುರಿತು ಸಭೆಯಲ್ಲಿ ಚರ್ಚಿಸಿದೆವು. ಕಾಲ್ತುಳಿತದ ಘಟನೆ ಕಾಂಗ್ರೆಸ್ ಸೇರಿದಂತೆ ಎಲ್ಲರನ್ನೂ ಆಘಾತಕ್ಕೀಡುಮಾಡಿದೆ. ಹೀಗಾಗಬಾರದಿತ್ತು. ಇಂತಹ ಘಟನೆಗಳು ನಡೆಯದಂತೆ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಸೂಚಿಸಿದ್ದೇವೆ. ಪೊಲೀಸ್ ಅಧಿಕಾರಿಗಳ ಅಮಾನತು, ಮ್ಯಾಜಿಸ್ಟ್ರೇಟ್ ತನಿಖೆ ಮತ್ತು ನ್ಯಾಯಾಂಗ ತನಿಖೆಗೆ ಆದೇಶ ಮತ್ತು ನೊಂದವರಿಗೆ ಪರಿಹಾರ ಮತ್ತಿತರ ಕ್ರಮಗಳ ಬಗ್ಗೆ ಸಿಎಂ ಮತ್ತು ಉಪ ಮುಖ್ಯಮಂತ್ರಿ ವಿವರಿಸಿದ್ದಾರೆ ಎಂದು ಹೇಳಿದರು.

ಯೋಗಿ ಆದಿತ್ಯನಾಥ್ ರಾಜೀನಾಮೆ ನೀಡಿದ್ರಾ? ಕಾಲ್ತುಳಿತದ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ

(2ನೇ ಪುಟ ನೋಡಿ)

## ಬಾಗಲಕೋಟೆ ತಾಲೂಕಿನಲ್ಲಿ ಸಂಭ್ರಮದ ಕಾರಹುಣ್ಣಿಮೆ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಜೂ.11- ಬಾಗಲಕೋಟೆ ಕೇಂದ್ರ ಸ್ಥಾನ ಹಾಗೂ ತಾಲೂಕಿನ ಗ್ರಾಮೀಣ ಭಾಗದ ಹಳ್ಳಿಗಳಲ್ಲಿ ಬುಧವಾರ ಕಾರಹುಣ್ಣಿಮೆಯ ನಿಮಿತ್ತ ಎತ್ತುಗಳನ್ನು ಕರಿ ಹರಿಯಲಾಯಿತು.

ಗ್ರಾಮಗಳಲ್ಲಿ ಬೆಳಿಗ್ಗೆ ರೈತರು ಎತ್ತುಗಳ ಕೋಡುಗಳನ್ನು ಸುಚಿಗೊಳಿಸಿ, ಮೈತೊಳೆದು, ಬಣ್ಣ ಹಚ್ಚಿ, ಬಲೂನ ಕಟ್ಟಿ ಶೃಂಗಾರಗೊಳಿಸಿದರು. ಮಧ್ಯಾಹ್ನ

(2ನೇ ಪುಟ ನೋಡಿ)

## ಎಸಿ ಬಳಕೆಗೆ ಹೊಸ ನಿಯಮ : ದೇಶಕ್ಕೆ 18,000 ಕೋಟಿ ಉಳಿತಾಯ

ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಜೂ.11: ದೇಶದಲ್ಲಿ ಏರ್ ಕಂಡೀಷನ್ ಯಂತ್ರಗಳಿಗೆ ಹೊಸ ನಿಯಮವನ್ನು ಜಾರಿ ಮಾಡಲು ಕೇಂದ್ರ ಸರ್ಕಾರ ಮುಂದಾಗಿದೆ.

ಇನ್ನು ಮುಂದೆ ಹೊಸ ಹವಾನಿಯಂತ್ರಣ ಯಂತ್ರಗಳ ಕನಿಷ್ಠ ತಾಪಮಾನ 16 ಅಥವಾ 18 ಡಿಗ್ರಿಗಳ ಬದಲಿಗೆ 20 ಡಿಗ್ರಿ ಸೆಲ್ಸಿಯಸ್ ಮತ್ತು ಪ್ರಸ್ತುತ ಗರಿಷ್ಠ ಇರುವ 30 ಡಿಗ್ರಿಗಳ ಬದಲಿಗೆ ಗರಿಷ್ಠ 28 ಡಿಗ್ರಿಯೊಂದಿಗೆ ಬರಲಿದೆ.

ಈ ಆದೇಶ ಜಾರಿಗೆ ಬಂದ ನಂತರ ಮೂರು ವರ್ಷಗಳಲ್ಲಿ 18,000-20,000 ಕೋಟಿ ರೂ. ಉಳಿತಾಯವಾಗಬಹುದು ಎಂದು ಅಂದಾಜಿಸಲಾಗಿದೆ.ಪ್ರಸ್ತುತ ಎಸಿ ಕನಿಷ್ಠ ತಾಪಮಾನವು 18ಲಿಅ ??(ಕೆಲವು ಸಂದರ್ಭಗಳಲ್ಲಿ

(2ನೇ ಪುಟ ನೋಡಿ)



ಬಸವಕಲ್ಯಾಣ :- ತಾಲೂಕಿನ ಹಾರಕೂಡ ಶ್ರೀಮಠದ ಆವರಣದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾಕ್ಟರ್ ಚನ್ನವೀರ ಶಿವಾಚಾರ್ಯರ ಸಾನಿಧ್ಯದಲ್ಲಿ ಕಾರ ಹುಣ್ಣಿಮೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಪಂಡಿತ ಡಾವರೆ, ನಾಗೇಂದ್ರ ಬೆಳಮಗೆ, ವೆಂಕಟ ಚೌದರಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಕರ್ನಾಟಕ, ಆಂಧ್ರ, ಜಾರ್ಖಂಡ್‌ನಲ್ಲಿ 6,405 ಕೋಟಿರೂ. ಮೌಲ್ಯದ ರೈಲ್ವೆ ಯೋಜನೆಗಳಿಗೆ ಕೇಂದ್ರ ಅನುಮೋದನೆ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಜೂ.11: ಆಂಧ್ರಪ್ರದೇಶ, ಕರ್ನಾಟಕ ಮತ್ತು ಜಾರ್ಖಂಡ್‌ನಲ್ಲಿ ರೈಲ್ವೆ ಹಳಿಗಳ ಡಬಲಿಂಗ್ ಗಾಗಿ 6,405 ಕೋಟಿ ರೂ.ಗಳ ಎರಡು ಪ್ರಮುಖ ರೈಲ್ವೆ ಯೋಜನೆಗಳಿಗೆ ಕೇಂದ್ರ ಸರ್ಕಾರ ಬುಧವಾರ ಅನುಮೋದನೆ ನೀಡಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅವರು ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಇಂದು ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿ(ಸಿಸಿಇಎ) ಸಭೆಯಲ್ಲಿ ಈ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ.

ರೈಲ್ವೆ ಖಾತೆಯನ್ನೂ ಹೊಂದಿರುವ ವೈಷ್ಣವ್ ಅವರ ಪ್ರಕಾರ, ಈ ಯೋಜನೆಯು ಜಾರ್ಖಂಡ್‌ನ ಪ್ರಮುಖ ಕಲ್ಲಿದ್ದಲು ಉತ್ಪಾದಿಸುವ ಪ್ರದೇಶದ ಮೂಲಕ ಹಾದುಹೋಗುವ ಕೊಡೆರ್ಮಾ-ಬರ್ಕಾಕಾನ (133 ಕಿಮೀ) ಡಬಲಿಂಗ್ ಯೋಜನೆ ಒಳಗೊಂಡಿದೆ.

ಇದು ಬಿಹಾರದ ರಾಜಧಾನಿ ಪಾಟ್ನಾ ಮತ್ತು ಜಾರ್ಖಂಡ್ ರಾಜಧಾನಿ ರಾಂಚಿ ನಡುವೆ ಅತ್ಯಂತ ಪರಿಣಾಮಕಾರಿ ರೈಲು ಸಂಪರ್ಕವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ಹೇಳಿದ್ದಾರೆ. ಇನ್ನು ಕರ್ನಾಟಕದ ಬಳ್ಳಾರಿ ಮತ್ತು ಚಿತ್ರದುರ್ಗ ಜಿಲ್ಲೆ ಹಾಗೂ ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಮೂಲಕ ಹಾದುಹೋಗುವ ಬಳ್ಳಾರಿ - ಚಿಕ್ಕಜಾಜೂರ್ ದ್ವಿಮುಖ ಮಾರ್ಗ (185 ಕಿ.ಮೀ.)ಕ್ಕೆ ಅನುಮೋದಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಒಟ್ಟು 6,405 ಕೋಟಿ ರೂ. ಗಳಲ್ಲಿ 318 ಕಿ.ಮೀ. ಉದ್ದದ ರೈಲ್ವೆ ಯೋಜನೆಗಳಿಗೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದ್ದು, ಸರಕು ಸಾಗಣೆಯನ್ನು ಹೆಚ್ಚಿಸುವುದು, ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡುವುದು ಮತ್ತು ಕಾರ್ಯಾಚರಣೆಯ ದಕ್ಷತೆಯನ್ನು ಸುಧಾರಿಸುವುದು ಈ ಯೋಜನೆಗಳ ಗುರಿಯಾಗಿದೆ.

(2ನೇ ಪುಟ ನೋಡಿ)

## ವಾಲ್ಮೀಕಿ ನಿಗಮ ಹಗರಣ: ಬಳ್ಳಾರಿ ಕಾಂಗ್ರೆಸ್ ಸಂಸದ ಹಾಗೂ 4 ಶಾಸಕರ ಮನೆ ಮೇಲೆ ಇಡಿ ದಾಳಿ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು: ಜೂ.11:ಮಹರ್ಷಿ ವಾಲ್ಮೀಕಿ ಬುಡಕಟ್ಟು ಕಲ್ಯಾಣ ಮಂಡಳಿ ಹಗರಣಕ್ಕೆ ಸಂಬಂಧಿಸಿದಂತೆ ಇಂದು ಜಾರಿ ನಿರ್ದೇಶನಾಲಯದ 60 ಅಧಿಕಾರಿಗಳ ತಂಡ ಬಳ್ಳಾರಿ ಜಿಲ್ಲೆ ಮತ್ತು ಬೆಂಗಳೂರಿನಲ್ಲಿ ನಾಲ್ವರು ಕಾಂಗ್ರೆಸ್ ಶಾಸಕರು ಹಾಗೂ ಓರ್ವ ಸಂಸದನ ಮನೆ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿದೆ. ಇಂದು ಬೆಳಗ್ಗೆಯೆ ಬಳ್ಳಾರಿಯಲ್ಲಿ ಐದು ಮತ್ತು ಬೆಂಗಳೂರು ನಗರದಲ್ಲಿ ಮೂರು ಸೇರಿ ಎಂಟು ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದ್ದು ಪರಿಶೀಲನೆ ನಡೆಸುತ್ತಿದೆ.

ಇಡಿ ಮೂಲಗಳ ಪ್ರಕಾರ, ಪ್ರಸ್ತುತ ಕಾಂಗ್ರೆಸ್ ಬಳ್ಳಾರಿ ಸಂಸದ ಇ. ತುಕಾರಾಂ ಮತ್ತು ಕಾಂಗ್ರೆಸ್ ಶಾಸಕರಾದ ನಾ. ರಾ. ಭರತ್ ರೆಡ್ಡಿ, ಜೆ.ಎನ್. ಗಣೇಶ್ ಅಕಾ ಕಂಪ್ಲಿ ಗಣೇಶ್ ಮತ್ತು ಎನ್.ಟಿ. ಶ್ರೀನಿವಾಸ್ ಅವರ ನಿವಾಸಗಳು ಮತ್ತು ಕಚೇರಿಗಳ ಮೇಲೆ ದಾಳಿ ನಡೆಯುತ್ತಿದೆ. ಇದೇ ವೇಳೆ ಮಾಜಿ ಸಚಿವ ಮತ್ತು ಕಾಂಗ್ರೆಸ್ ಶಾಸಕ ನಾಗೇಂದ್ರ ಅವರ ಬೆಂಗಳೂರಿನ

(2ನೇ ಪುಟ ನೋಡಿ)

## ಆರ್‌ಸಿಬಿ ಅಭಿಮಾನಿಗಳ ಸಾವು ಪ್ರಕರಣ ಮರೆಮಾಚಲು ಮರು ಜಾತಿ ಗಣತಿ:ಶಾಸಕ ಯಶಪಾಲ್ ಸುವರ್ಣ




ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಜೂ.11-ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ವಿಜಯೋತ್ಸವದಲ್ಲಿ ಹನ್ನೊಂದು ಜನ ಅಭಿಮಾನಿಗಳ ಸಾವಿನ ಪ್ರಕರಣವನ್ನು ಮರೆಮಾಚಲು ರಾಜ್ಯ ಸರ್ಕಾರವು ಮರು ಜಾತಿಗಣತಿಗೆ ಆದೇಶ ನೀಡಿದ್ದು, ಕೂಡಲೇ ಆರ್‌ಸಿಬಿ ಅಭಿಮಾನಿಗಳ ದುರ್ಮರಣದ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜೀನಾಮೆ ಕೊಡಬೇಕು ಎಂದು ಉಡುಪಿ ಶಾಸಕ ಹಾಗೂ ಬಿಜೆಪಿ ಓಬಿಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಯಶಪಾಲ್ ಸುವರ್ಣ ಅವರು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 4ರಂದು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಹನ್ನೊಂದು ಜನರ ಸಾವಿನ ಪ್ರಕರಣವು ಕಾಂಗ್ರೆಸ್ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಆ ಇಕ್ಕಟ್ಟಿನಿಂದ ಪಾರಾಗಲು ಮತ್ತೊಮ್ಮೆ ಜಾತಿ ಗಣತಿಯನ್ನು ಮುನ್ನಲೆಗೆ ತರಲಾಗಿದೆ. ಜನರಿಗೆ ಮೂರ್ಖ ಮಾಡುವುದನ್ನು ಬಿಟ್ಟು ನೈತಿಕ ಹೊಣೆ ಹೊತ್ತು ಕೂಡಲೇ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳು ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು.

ಆರ್‌ಸಿಬಿ ವಿಜಯೋತ್ಸವದ ಲಾಭ ಪಡೆದು ಪುಕ್ಕಟ್ಟೆ ಪ್ರಚಾರ ಗಿಟ್ಟಿಸಿಕೊಳ್ಳಲು ಪೋಲಿಸ್ ಅಧಿಕಾರಿಗಳ ಸಲಹೆಗಳನ್ನು ಧಿಕ್ಕರಿಸಿ ವಿಧಾನಸೌಧ ಮತ್ತು ಚಿನ್ನಸ್ವಾಮಿ ಕ್ರೀಡಾಂಗಣ ಎರಡೆರಡು ಕಡೆಗಳಲ್ಲಿ ಯಾವುದೇ ಪೂರ್ವ ಯೋಜನೆ ಕೈಗೊಳ್ಳದೇ ಕಾಲ್ತುಳಿತದಲ್ಲಿ ಹನ್ನೊಂದು ಜನರು ಮೃತಪಟ್ಟಿರುವುದು ಇಡೀ ರಾಜ್ಯದ ಜನರಿಗೆ ಆಘಾತಕಾರಿ ಸಂಗತಿಯಾಗಿದೆ. ಇದರಿಂದ ಧೃತಿಗೆಟ್ಟ ಸರ್ಕಾರ ಅಧಿಕಾರಿಗಳ ಸಲಹೆಗಳನ್ನು ಧಿಕ್ಕರಿಸಿ ಕಾರ್ಯಕ್ರಮ ಆಯೋಜನೆ ಮಾಡಿರುವ ಅವರೇ ಪೋಲಿಸ್ ಅಧಿಕಾರಿಗಳನ್ನು ಅಮಾನತ್ತು ಮಾಡಿದ್ದು ನಾಚಿಕೆಗೇಡಿತನದ್ದು ಎಂದು ಅವರು ಟೀಕಿಸಿದರು.

ಆತುರದಿಂದ ಕಾರ್ಯಕ್ರಮ ನಿಯೋಜನೆ ಮಾಡಿರುವ ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕಾಂಗ್ರೆಸ್ ಸರ್ಕಾರವೇ ಹನ್ನೊಂದು ಜನ ಅಮಾಯಕರ ಸಾವಿಗೆ ನೇರ ಹೊಣೆ. ಆದ್ದರಿಂದ ಅದನ್ನು ಮರೆಮಾಚಲು ಜಾತಿ ಜನಗಣತಿ ಜಾರಿಗೆ ತಂದಿದ್ದಾರೆ ಎಂದು ಅವರು ದೂರಿದರು.

ಕಳೆದ 2014-2015ನೇ ಸಾಲಿನಲ್ಲಿ ರಾಜ್ಯದಲ್ಲಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸಿ ಹಿಂದುಳಿದ ವರ್ಗಗಳ ಸಮುದಾಯದವರಿಗೆ ನ್ಯಾಯ ಒದಗಿಸುವ ದೃಷ್ಟಿಯಿಂದ ಕಾಂತರಾಜು ಅವರ ನೇತೃತ್ವದಲ್ಲಿ ವರದಿ ಸಿದ್ಧಪಡಿಸಲು ಸುಮಾರು 165 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದರು. ಆದಾಗ್ಯೂ, ತಮ್ಮ ರಾಜಕೀಯ ದುರುದ್ದೇಶದಿಂದ ದಲಿತರು, ಹಿಂದುಳಿದ ವರ್ಗದವರನ್ನು ಮತ್ತು

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಪುನಾರಚನೆ ಇಲ್ಲ: ಮಲ್ಲಿಕಾರ್ಜುನ ಖರ್ಗೆ

ಡಿ.ಕೆ.ಶಿವಕುಮಾರ್ ರಾಜೀನಾಮೆ ನೀಡಬೇಕು ಎಂಬ ಬಿಜೆಪಿಯ ಬೇಡಿಕೆಗೆ ಪ್ರತಿಕ್ರಿಯಿಸಿದ ಖರ್ಗೆ, ಪ್ರಯಾಗ್‌ರಾಜ್ ಕುಂಭಮೇಳದ ವೇಳೆ ಕಾಲ್ತುಳಿತ ಸಂಭವಿಸಿದಾಗ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ರಾಜೀನಾಮೆ ನೀಡಿದ್ರಾ? ಎಂದು ಪ್ರಶ್ನಿಸಿದರು. ಕುಂಭಮೇಳದಲ್ಲಿ ಕಾಲ್ತುಳಿತದ ಬಗ್ಗೆ ಪ್ರಶ್ನೆಗಳನ್ನು ಎತ್ತಿದಾಗ ಅವರು ನನ್ನ ಮೇಲೆ ಆಕ್ರೋಶ ವ್ಯಕ್ತಪಡಿಸಿದ್ದರು ಎಂದು ಖರ್ಗೆ ಹೇಳಿದರು.ಜಾತಿ ಗಣತಿ ಮರು ಸಮೀಕ್ಷೆ: ಜಾತಿ ಗಣತಿ ಮರು ಸಮೀಕ್ಷೆ ಕುರಿತು ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, 10 ವರ್ಷಗಳ ಹಿಂದೆ ಜಾತಿ ಸಮೀಕ್ಷೆ ನಡೆಸಲಾಗಿತ್ತು. ವಿವಿಧ ಸಮುದಾಯಗಳ ಅನೇಕ ಮುಖಂಡರು, ಪ್ರತಿನಿಧಿಗಳು ಮರು ಸಮೀಕ್ಷೆ ನಡೆಸಲು ಸರ್ಕಾರಕ್ಕೆ ಬೇಡಿಕೆ ಇಟ್ಟಿದ್ದರು. ಕಾಂತರಾಜ್ ಆಯೋಗ ನೀಡಿರುವ ಸಮೀಕ್ಷಾ ವರದಿಯನ್ನು ತಿರಸ್ಕರಿಸದೆ ಮರು ಸಮೀಕ್ಷೆ ನಡೆಸುವಂತೆ ಸಿಎಂ ಹಾಗೂ ಡಿಸಿಎಂಗೆ ಸೂಚಿಸಿದ್ದೇವೆ ಎಂದರು.ಒಬಿಸಿ ಸೇರಿದಂತೆ ಹಿಂದಿನ ಸಮೀಕ್ಷೆಯಲ್ಲಿ ಸೇರಿಸದ ಜಾತಿಗಳು ಮತ್ತು ಉಪ–ಜಾತಿಗಳನ್ನು ಸೇರಿಸಲು ಮರು ಸಮೀಕ್ಷೆ ಮಾಡಲಾಗುತ್ತದೆ. ಸಮೀಕ್ಷೆ ನಡೆಸುವ ಜನರು ಮನೆ ಮನೆಗೆ ಭೇಟಿ ನೀಡುತ್ತಾರೆ. ಹೊಸ ಮಾಹಿತಿಯನ್ನು ಸೇರಿಸಲಾಗುವುದು ಎಂದು ಎಐಸಿಸಿ ಅಧ್ಯಕ್ಷರು ಹೇಳಿದರು.ಕಾಂಗ್ರೆಸ್ ಶಾಸಕನ ಮೇಲೆ ಇಡಿ ದಾಳಿ: ಕೂಡ್ಲಿಗಿ ಶಾಸಕ ಡಾ.ಎನ್.ಟಿ. ಶ್ರೀನಿವಾಸ್ ಮನೆ ಮೇಲೆ ಇಡಿ ದಾಳಿ ಕುರಿತ ಪ್ರಶ್ನೆಗೆ ಉತ್ತರಿಸಿದ ಖರ್ಗೆ, ಹಲವು ವರ್ಷಗಳಿಂದ ಇಡಿ ಕಾಂಗ್ರೆಸ್ ಪಕ್ಷದ ನಾಯಕರ ವಿರುದ್ಧ ಕೆಲಸ ಮಾಡುತ್ತಿದೆ. ಇದು ಕಾಂಗ್ರೆಸ್ ಪಕ್ಷದ ಶಾಸಕರು ಮತ್ತು ಸಂಸದರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುತ್ತಿದೆ. ಕಾಂಗ್ರೆಸ್ ಪಕ್ಷದ ನಾಯಕರ ಮೇಲೆ ದಾಳಿ ನಡೆಸುವ ಮೂಲಕ ಕಾಂಗ್ರೆಸ್ ಪಕ್ಷ ಒಡೆಯುವುದು ಎನ್‌ಡಿಎಯ ಪ್ರಮುಖ ಉದ್ದೇಶವಾಗಿದೆ. ಆದರೆ ಕಾಂಗ್ರೆಸ್ ಪಕ್ಷ ಒಗ್ಗಟ್ಟಾಗಿರುವುದರಿಂದ ಅದು ಸಾಧ್ಯವಿಲ್ಲ. ಚುನಾವಣಾ ಸಮಯದಲ್ಲಿ ಇಡಿ ಹಲವು ರಾಜಕೀಯ ಪಕ್ಷಗಳ ಮುಖಂಡರ ಮೇಲೆ ದಾಳಿ ನಡೆಸಿದ್ದು, ದಾಳಿ ವೇಳೆ ವಶಪಡಿಸಿಕೊಂಡ ಹಣ ಎಲ್ಲಿ ಹೋಗಿದೆ ಎಂಬುದು ನಮಗೆ ತಿಳಿದಿಲ್ಲ ಎಂದರು

# ತಾಲೂಕಿನಲ್ಲಿ ಸಂಭ್ರಮದ ಕಾರಹುಣ್ಣಿಮೆ

ಅಗಸಿಗಳ ಮುಂದೆ ಯುಕವರು ಎತ್ತುಗಳನ್ನು ಓಡಿಸಿ ಸಂಭ್ರಮಿಸಿದರು. ಕೆಲವೆಡೆ ಚಿಕ್ಕಮಕ್ಕಳು ತಮ್ಮ ಮನೆಯ ಎತ್ತುಗಳಿಗೆ ಜೂಲ ಕಟ್ಟಿ ಹಿಡಿದುಕೊಂಡು ಬಂದು ಗಮನ ಸೆಳೆದರು. ಸಾಯಂಕಾಲ ನಡೆದ ಕರಿ ಹರಿಯುವ ಕಾರ್ಯಕ್ರಮದಲ್ಲಿ ಬಿಳಿ ಹಾಗೂ ಕೆಂದು ಬಣ್ಣದ ಎತ್ತುಗಳನ್ನು ಬಾಬುದಾದರ ಮನೆಗಳಲ್ಲಿ ಪೂಜೆ ಸಲ್ಲಿಸಿ ಮೆರವಣಿಗೆ ಮೂಲಕ ಅಗಸಿಯ ಬಳಿ ತಂದು, ನಂತರ ಅಲ್ಲಿ ಪೂಜೆ ಸಲ್ಲಿಸಿ ಎರಡೂ ಎತ್ತುಗಳನ್ನು ಜೊತೆಯಾಗಿ ಓಡಿಸಿ ತಮಗೆ ಇಷ್ಟವಾದ ಎತ್ತು ಮುಂದಾಗ ಕೇಕೆ ಹಾಕಿ ಸಂಭ್ರಮಿಸಿದರು. ಬಾಗಲಕೋಟೆಯಲ್ಲಿ ಜರುಗಿದ ಕರಿಯಲ್ಲಿ ಬಿಳಿ ಎತ್ತು ಹಾಗೂ ಬೇವೂರ ಗ್ರಾಮದ ಕಲಗುಡಿ ಮತ್ತು ಬಜಾರದಲ್ಲಿ ನಡೆದ ಕರಿಯಲ್ಲಿ ಬಿಳಿ ಎತ್ತುಗಳು ಕರಿ ಹರಿದವು. ಬೆನಕಟ್ಟಿಯಲ್ಲಿ ಕೆಂದು ಬಣ್ಣದ ಎತ್ತು, ಶಿರೂರಿನಲ್ಲಿ ಬಿಳಿ ಎತ್ತು, ಭಗವತಿಯಲ್ಲಿ ಬಿಳಿ ಎತ್ತು, ಮನ್ನಿಕಟ್ಟಿಯಲ್ಲಿ ಎರಡು ಬಾರಿ ಜರುಗಿದ ಕರಿಯಲ್ಲೂ ಕೆಂದು ಬಣ್ಣದ ಎತ್ತು ಕರಿ ಹರಿದವು.

# ಮೌಲ್ಯದ ರೈಲ್ವೆ ಯೋಜನೆಗಳಿಗೆ ಕೇಂದ್ರ ಅನುಮೋದನೆ

ಮುಂದಿನ ವರ್ಷಗಳಲ್ಲಿ ಈ ಯೋಜನೆ ಪೂರ್ಣಗೊಳ್ಳುವ ನಿರೀಕ್ಷೆಯಿದ್ದು, ಅವು ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸುತ್ತವೆ ಮತ್ತು ಆರ್ಥಿಕ ಬೆಳವಣಿಗೆಗೆ ಬೆಂಬಲ ನೀಡುತ್ತವೆ ಎಂದು ಸಚಿವರು ಹೇಳಿದ್ದಾರೆ.ಈ ಯೋಜನೆಗಳು ಜಾರ್ಖಂಡ್, ಕರ್ನಾಟಕ ಮತ್ತು ಆಂಧ್ರಪ್ರದೇಶದ 7 ಜಿಲ್ಲೆಗಳನ್ನು ಒಳಗೊಂಡಿರುತ್ತವೆ ಮತ್ತು ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು 318 ಕಿ.ಮೀ. ಹೆಚ್ಚಿಸುತ್ತವೆ ಎಂದು ಅಶ್ವಿನಿ ವೈಷ್ಣವ್ ಅವರು ತಿಳಿಸಿದ್ದಾರೆ.

# ಸಂಸದ ಹಾಗೂ 4 ಶಾಸಕರ ಮನೆ ಮೇಲೆ ಇಡಿ ದಾಳಿ

ಕಚೇರಿ ಹಾಗೂ ನಾಗೇಂದ್ರರ ಆಪ್ತ ಸಹಾಯಕ ಗೋವರ್ಧನ್ ನಿವಾಸದ ಮೇಲೂ ದಾಳಿ ನಡೆಸಲಾಗುತ್ತಿದೆ.

ಕರ್ನಾಟಕದಲ್ಲಿ 2024ರ ಲೋಕಸಭಾ ಚುನಾವಣೆಗೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಲಿಮಿಟೆಡ್ ಗೆ ಹಂಚಿಕೆ ಮಾಡಿದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ಈ ದಾಳಿ ನಡೆಸಲಾಗುತ್ತಿದೆ. ಅಷ್ಟೇ ಅಲ್ಲದೆ ಕಳೆದ ತೆಲಂಗಾಣ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಈ ಹಣವನ್ನು ಬಳಸಲಾಗಿದೆ ಎಂಬ ಆರೋಪವೂ ಇದೆ.

ವಿಧಾನಸೌಧದ ಬಳಿ ಇರುವ ಶಾಸಕರ ಭವನದ ಆವರಣದಲ್ಲಿರುವ ಮಾಜಿ ಸಚಿವ ಮತ್ತು ಬಳ್ಳಾರಿ ಗ್ರಾಮೀಣ ಶಾಸಕ ನಾಗೇಂದ್ರ ಅವರಿಗೆ ಸೇರಿದ ಕೋಣೆಯಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ. ಇಡಿ ದಾಳಿಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, "ತಪ್ಪಿತಸ್ಥರು ಯಾರೇ ಆಗಿರಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಿ. ಈ ವಿಷಯದಲ್ಲಿ ನಾನು ತಪ್ಪಿತಸ್ಥರನ್ನು ಬೆಂಬಲಿಸುವುದಿಲ್ಲ. ತನಿಖೆ ನಡೆಸಲಾಗುತ್ತಿದೆ ಮತ್ತು ಸತ್ಯ ಹೊರಬರಲಿ ಎಂದು ಹೇಳಿದರು. ಕಾಂಗ್ರೆಸ್ ನಾಯಕರನ್ನು ಮಾತ್ರ ಗುರಿಯಾಗಿಸಿಕೊಂಡು ದಾಳಿ ಮಾಡುತ್ತಿರುವುದು ಸರಿಯಲ್ಲ. ರಾಜ್ಯ ಸರ್ಕಾರವೇ ತನಿಖೆ ನಡೆಸುತ್ತಿದೆ. ಕಾಂಗ್ರೆಸ್ ನಾಯಕರು ಮತ್ತು ಜನಪ್ರತಿನಿಧಿಗಳಲ್ಲಿ ಭಯ ಹುಟ್ಟಿಸಲು ದಾಳಿ ನಡೆಸಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಬಿಜೆಪಿ ದ್ವೇಷದ ರಾಜಕೀಯ ಮಾಡುತ್ತಿದೆ ಎಂದು ಅವರು ಟೀಕಿಸಿದರು.

ತನಿಖೆ ನಡೆಸುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಕಾಂಗ್ರೆಸ್ ಒಐಆ ಬಿ.ಕೆ ಹರಿಪ್ರಸಾದ್ ವಾಗ್ದಾಳಿ ನಡೆಸಿದರು. ರಾಜಕೀಯ ವಿರೋಧಿಗಳನ್ನು ಎದುರಿಸಲು ಬಿಜೆಪಿ ಇಡಿಯನ್ನು ತನ್ನ ಸಾಧನವನ್ನಾಗಿ ಮಾಡಿಕೊಂಡಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಬಳ್ಳಾರಿ ನಗರದ ಶಾಸಕ ಭರತ್ ರೆಡ್ಡಿ ಅವರನ್ನು ಅವರ ನಿವಾಸದಲ್ಲಿ ಇಡಿ ಅಧಿಕಾರಿಗಳು ಪ್ರಶ್ನಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕಂಪ್ಲಿ ಪಟ್ಟಣದ ಹೊರವಲಯದಲ್ಲಿರುವ ಶಾಸಕ ಕಂಪ್ಲಿ ಗಣೇಶ್ ಅವರ ನಿವಾಸದ ಮೇಲೆ ದಾಳಿ ನಡೆಸಲಾಗುತ್ತಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಮತ್ತು ಶಾಸಕ ಬಿ. ನಾಗೇಂದ್ರ ಈ ಹಿಂದೆ ಜೈಲಿಗೂ ಹೋಗಬೇಕಾಯಿತು. ಹಗರಣ ಬೆಳಕಿಗೆ ಬಂದ ನಂತರ ಅವರು ರಾಜೀನಾಮೆ ನೀಡಬೇಕಾಯಿತು. ನಾಗೇಂದ್ರ ಅವರನ್ನು ಮತ್ತೆ ಸೇರಿಸಿಕೊಳ್ಳುವ ವಿಷಯವನ್ನು ಪರಿಶೀಲಿಸಲಾಗುವುದು ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಎಸ್‌ಟಿ ಕಲ್ಯಾಣ ಇಲಾಖೆಯ ಮಾಜಿ ಸಚಿವ ನಾಗೇಂದ್ರ ಅವರನ್ನು 2024ರ ಜುಲೈ 12ರಂದು ಜಾರಿ ನಿರ್ದೇಶನಾಲಯ (ಇಆ) ಬಂಧಿಸಿತು. ನಂತರ, ಅವರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಯಿತು. ಮೂರು ತಿಂಗಳು ಜೈಲಿನಲ್ಲಿ ಕಳೆದ ನಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಯಿತು. ಆದಾಗ್ಯೂ, ಕಾಂಗ್ರೆಸ್ ಸರ್ಕಾರ ರಚಿಸಿದ ವಿಶೇಷ ತನಿಖಾ ತಂಡ (ಎಸ್‌ಐಟಿ) ಹಗರಣದಲ್ಲಿ ನಾಗೇಂದ್ರ ಅವರಿಗೆ ಕ್ಲೀನ್ ಚಿಟ್ ನೀಡಿತ್ತು ಮತ್ತು ಚಾರ್ಜ್‌ಶೀಟ್‌ನಲ್ಲಿ ಅವರ ಹೆಸರನ್ನು ಉಲ್ಲೇಖಿಸಿರಲಿಲ್ಲ.

ಕರ್ನಾಟಕ ಪೊಲೀಸರು ಮತ್ತು ಸಿಬಿಐ ದಾಖಲಿಸಿದ ಎಫ್‌ಐಆರ್‌ಗಳ ಆಧಾರದ ಮೇಲೆ ಇಡಿ ತನಿಖೆಯನ್ನು ಪ್ರಾರಂಭಿಸಿತು. ಇದು ಆಂಧ್ರಪ್ರದೇಶ ಮತ್ತು ತೆಲಂಗಾಣದಾದ್ಯಂತ ನಿಗಮದ ಖಾತೆಗಳಿಂದ ಸುಮಾರು 89.62 ಕೋಟಿ ರೂ.ಗಳನ್ನು ಶೆಲ್ ಕಂಪನಿಗಳ ಮೂಲಕ ನಕಲಿ ಖಾತೆಗಳಿಗೆ ವರ್ಗಾಹಿಸಲಾಗಿದೆ ಎಂದು ಬಹಿರಂಗಪಡಿಸಿತು.

ಗಿರಿಜನ ಕಲ್ಯಾಣ ಮಂಡಳಿಗೆ ಸೇರಿದ ಲೆಕ್ಕಪತ್ರ ಸೂಪರಿಂಟೆಂಡೆಂಟ್ ಪಿ. ಚಂದ್ರಶೇಖರನ್ (52) ಅವರ ಆತ್ಮಹತ್ಯೆ ಪ್ರಕರಣವು ಬಹುಕೋಟಿ ಬುಡಕಟ್ಟು ಕಲ್ಯಾಣ ಮಂಡಳಿ ಪ್ರಕರಣವನ್ನು ಬೆಳಕಿಗೆ ತಂದಿತ್ತು. ಆತ್ಮಹತ್ಯೆ ಪತ್ರದಲ್ಲಿ, ಅಧಿಕಾರಿ ಹಗರಣದ ಬಗ್ಗೆ ಮತ್ತು ರಾಜಕಾರಣಿಗಳು ಮತ್ತು ಹಿರಿಯ ಅಧಿಕಾರಿಗಳ ತೀವ್ರ ಒತ್ತಡದ ಬಗ್ಗೆ ಉಲ್ಲೇಖಿಸಿದ್ದರು. ಈ ಸಂಬಂಧ ಸಿಐಡಿ ವಿಶೇಷ ವಿಭಾಗದ 300 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದ್ದು, ಆಡಳಿತಾರೂಢ ಕಾಂಗ್ರೆಸ್‌ನ ರಾಜಕಾರಣಿಗಳ ಹೆಸರುಗಳನ್ನು ಉಲ್ಲೇಖಿಸಲಾಗಿಲ್ಲ. ಆದಾಗ್ಯೂ, ಚಂದ್ರಶೇಖರನ್ ಅವರ ಡೆತ್ ನೋಟ್ ಬುಡಕಟ್ಟು ಕಲ್ಯಾಣ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರದ ಸಚಿವರೊಬ್ಬರು ಭಾಗಿಯಾಗಿರುವುದನ್ನು ಸೂಚಿಸಿದ್ದು, ಅವರ ಸಾವಿಗೆ ಅವರನ್ನು ಹೊಣೆಗಾರರನ್ನಾಗಿ ಮಾಡಿದೆ.

# ಮಲೇರಿಯಾ ಮುಕ್ತ ಸಮಾಜ ನಿರ್ಮಾಣಕ್ಕೆ ಸಹಕರಿಸಿ: ಮನೋಜ ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.11: ಸ್ವಚ್ಛ ಸ್ವಸ್ಥ ವಾತಾವರಣದ ಮೂಲಕ ಮಲೇರಿಯಾ ಮುಕ್ತ ಸಮಾಜ ನಿರ್ಮಿಸಲು ಆರೋಗ್ಯ ಇಲಾಖೆ ಜೊತೆಗೆ ವಿದ್ಯಾರ್ಥಿಗಳು,ಸಾರ್ವಜನಿಕರು ಸಹಕರಿಸಬೇಕು ಎಂದು ಮುಖ್ಯಶಿಕ್ಷಕಮನೋಜಕುಮಾರ ಹಿರೇಮಠ ಹೇಳಿದರು.

ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಸೋಮವಾರ ಹೊಳಸಮುದ್ರ ಪ್ರಾಥಮಿಕ ಆರೋಗ್ಯಕೇಂದ್ರಆಶ್ರಯದಲ್ಲಿ ವಿಶ್ವಮಲೇರಿಯಾಮಾಸಾಚರಣೆ ಕುರಿತುಹಮ್ಮಿಕೊಂಡಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆವಹಿಸಿ ಮಾತನಾಡಿದರು.

ಜಿಲ್ಲಾದ್ಯಂತ ಈಗಾಗಲೇ ಮಲೇರಿಯಾ,ಚಿಕೂನ್‌ಗುನ್ಯಾ, ಡೆಂಗೆ ನಿರ್ಮೂಲನೆಗೆ ವಿವಿಧ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪಿಎಚ್‌ಸಿಒ ನಂದಕುಮಾರಿ ಮಾತನಾಡಿ, ಜಿಲ್ಲೆಯ ಎಲ್ಲ ಸರ್ಕಾರಿಆಸ್ಪತ್ರೆಗಳಲ್ಲಿಮಲೇರಿಯಾ ಚಿಕಿತ್ಸೆ ಲಭ್ಯವಿದೆ. ಜಿಲ್ಲೆಯಲ್ಲಿ ವರ್ಷದಿಂದವರ್ಷಕ್ಕೆರೋಗಿಗಳ ಪ್ರಮಾಣ ಕ್ಷಿಣಿಸುತ್ತಿದೆ ಎಂದು ತಿಳಿಸಿದರು.

ಆರ್‌ಕೆಎಸ್‌ಕೆ ಕೌನ್ಸಿಲರ್ ಫರನಾಸ್,ಆಶಾ ಕಾರ್ಯಕರ್ತೆ ಮೀನಾಕ್ಷಿ, ಶಿಕ್ಷಕಿ ಸಿಬ್ಬಂದಿ ಶ್ರೀದೇವಿ,ಸಂಗೀತಾ,ದೀಪಮಾಲಾ, ಶೀತಲ, ಅಂಜಲಿ, ಅಶ್ವಿನಿ ಹಾಗೂ ಶಾಲೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಮರು ಜಾತಿ ಗಣತಿ:ಶಾಸಕ ಯಶಪಾಲ್ ಸುವರ್ಣ

ಅಲ್ಪಸಂಖ್ಯಾತರನ್ನು ದುರುಪಯೋಗ ಮಾಡಿಕೊಂಡಿರುವ ಸಿದ್ಧರಾಮಯ್ಯ ಅವರು ತೆಲಂಗಾಣ ಮತ್ತು ಬಿಹಾರ್ ಮಾದರಿಯಲ್ಲಿ ಕರ್ನಾಟಕದಲ್ಲಿಯೂ ಕೂಡ ಒಂದೇ ವರ್ಷದಲ್ಲಿ ವರದಿ ಜಾರಿಗೆ ತರಬಹುದಿತ್ತು. ಆದಾಗ್ಯೂ, ನಿನ್ನೆ ವರಿಷ್ಠರು ಸಭೆ ಸೇರಿ ಕರ್ನಾಟಕ ಸರ್ಕಾರದ ವಿವಾದಿತ ಕಾಂತರಾಜ್ ವರದಿಯನ್ನು ಕೈಬಿಡಲು ನಿರ್ಧರಿಸಿತು. ಈ ನಿರ್ಧಾರವನ್ನು ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರು ಘೋಷಿಸಿದ್ದು, ಗೊಂದಲಗಳನ್ನು ಹುಟ್ಟುಹಾಕಿದೆ. ಸಚಿವ ಸಂಪುಟದಲ್ಲಿ ಕೈಗೊಳ್ಳಬೇಕಾದ ನಿರ್ಧಾರವನ್ನು ವೇಣುಗೋಪಾಲ್ ಅವರು ಹೇಗೆ ಪ್ರಕಟಿಸಿದರು? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ತಮ್ಮ ರಾಜಕೀಯ ದುರುದ್ದೇಶಕ್ಕಾಗಿ ಯಾವ, ಯಾವ ಸಂದರ್ಭದಲ್ಲಿ ತಾನು ಮುಖ್ಯಮಂತ್ರಿಯಾಗಬೇಕು, ಯಾವಾಗ ತಮ್ಮ ಮುಖ್ಯಮಂತ್ರಿ ಸ್ಥಾನಕ್ಕೆ ಕುತ್ತು ಬರುತ್ತದೋ ಆ ಸಂದರ್ಭಗಳಲ್ಲಿ ಮಾತ್ರ ಹಿಂದುಳಿದ ವರ್ಗಗಳ ಜಾತಿ ಸಮೀಕ್ಷೆ ಮುನ್ನಲೆಗೆ ತರುವುದು ಅವರ ಕಪಟ ನೀತಿಯಾಗಿದೆ ಎಂದು ಅವರು ಆರೋಪಿಸಿದರು.

ಸುಮಾರು ಹತ್ತು ವರ್ಷಗಳಿಂದ ಜಾತಿ ಜಾತಿಗಳ ಮಧ್ಯೆ ಜಗಳ ಹಚ್ಚಿ ಯಾವುದೇ ವರದಿ ಜಾರಿಯಾಗದಂತೆ ನೋಡಿಕೊಂಡಿರುವ ಅವರು ಹಿಂದುಳಿದವರ್ಗಗಳ ಮುಖವಾಡ ಧರಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು 165 ಕೋಟಿ ರೂ.ಗಳನ್ನು ಖರ್ಚು ಮಾಡಿರುವುದೇಕೆ? ಈಗ ಮತ್ತೊಮ್ಮೆ ಜಾತಿ ಜನಗಣತಿ ಮಾಡುವುದಾದರೆ ಮತ್ತೆ 500 ಕೋಟಿ ರೂ.ಗಳನ್ನು ಕೊಡುವವರು ಯಾರು? ಸರ್ಕಾರದ ದುಡ್ಡು ಮನಬಂದಂತೆ ಖರ್ಚು ಮಾಡುವ ಅಧಿಕಾರ ಅವರಿಗಿದೆಯೇ? ಖಜಾನೆಗೆ ಆದ 165 ಕೋಟಿ ರೂ.ಗಳ ನಷ್ಟವನ್ನು ಯಾರು ಭರಿಸುತ್ತಾರೆ? ಕೂಡಲೇ ಆ ಹಣವನ್ನು ಸಿದ್ಧರಾಮಯ್ಯ ಅವರೇ ಭರಿಸಬೇಕು ಎಂದು ಅವರು ಒತ್ತಾಯಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳು ಮತ್ತು ಹಿಂದುಳಿದ ವರ್ಗಗಳವರ ಹೆಸರಿನ ಮೇಲೆ ಅಧಿಕಾರಕ್ಕೆ ಬಂದು ದಲಿತರಿಗಾಗಿ ಮೀಸಲಿಟ್ಟ 38,000 ಕೋಟಿ ರೂ.ಗಳನ್ನು ಉರ್ಬಳಕೆ ಮಾಡಿಕೊಂಡರು. ಪರಿಶಿಷ್ಟ ವರ್ಗದ ವಾಲ್ಮೀಕಿ ನಿಗಮದಲ್ಲಿರುವ 187 ಕೋಟಿ ರೂ.ಗಳನ್ನು ನುಂಗಿದರು. ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಇರುವ ವರದಿ ಜಾರಿಗಾಗಿ 165 ಕೋಟಿ ರೂ.ಗಳ ವ್ಯರ್ಥ ಖರ್ಚು ಮತ್ತು ಹಿಂದುಳಿದ ವರ್ಗಗಳ ನಿಗಮಗಳಿಗೆ ಇಲ್ಲಿಯವರೆಗೆ ಒಂದು ರೂ. ಕೂಡ ಬಿಡುಗಡೆಯಾಗಿಲ್ಲ. ಆದ್ದರಿಂದ ಮುಖ್ಯಮಂತ್ರಿಗಳಾಗಿ ಮುಂದುವರೆಯಲು ಸಿದ್ಧರಾಮಯ್ಯ ಅವರಿಗೆ ನೈತಿಕ ಹಕ್ಕಿಲ್ಲ ಎಂದು ಅವರು ಹೇಳಿದರು.ಕೇಂದ್ರದಲ್ಲಿ ನರೇಂದ್ರ ಮೋದಿ ಅವರು ದೇಶಾದ್ಯಂತ ಜನಗಣತಿ ಜೊತೆಗೆ ಜಾತಿ ಗಣತಿ ಮಾಡುವ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಇಂತಹ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ವರಿಷ್ಠರು ಮತ್ತು ರಾಜ್ಯ ಸರ್ಕಾರ ಹನ್ನೊಂದು ಜನ ಅಮಾಯಕರು ಸಾವನ್ನಪ್ಪಿರುವ ವಿಷಯ ದೇಶಾದ್ಯಂತ ಹರಡುತ್ತಿದೆ. ಹೀಗಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ಇಕ್ಕಟ್ಟಿಗೆ ಸಿಲುಕಿದೆ. ಅದನ್ನು ಮರೆಮಾಚಲು ಒಂದೇ ಕಲ್ಲಿಗೆ ಎರಡು ಹಣ್ಣುಗಳನ್ನು ಹೊಡೆಯುವ ದೃಷ್ಟಿಯಿಂದ ಜಾತಿ ಜನಗಣತಿ ಮಾಡಿ ನಾವು ಹಿಂದುಳಿದವರ ಪರ ಇದ್ದೇವೆ ಎಂದು ತೋರಿಸಿರುವುದು ಅಮಾಯಕರ ಸಾವಿನ ಕ್ಲಿಷ್ಟಕರ ವಾತಾವರಣ ತಿಳಿಗೊಳಿಸುವ ಪ್ರಯತ್ನವಾಗಿದೆ. ರಾಜ್ಯ ಸರ್ಕಾರಗಳಿಗೆ ಈ ರೀತಿ ಜಾತಿಗಣತಿ ನಡೆಸುವ ಅಧಿಕಾರ ಸಂವಿಧಾನದ ಕಲಂ– 246ರ ಪ್ರಕಾರ ಇಲ್ಲ. ಹೀಗಾಗಿ ಸಿದ್ಧರಾಮಯ್ಯ ಸರ್ಕಾರವು ಜಾತಿ ಜನಗಣತಿ ನಾಟಕವನ್ನು ನಿಲ್ಲಿಸಬೇಕು ಎಂದು ಅವರು ಒತ್ತಾಯಿಸಿದರು.ಜಾತಿಗಣತಿ ಮಾಡುವ ಅಧಿಕಾರ ಕೇಂದ್ರ ಸರ್ಕಾರಕ್ಕೆ ಮಾತ್ರ ಇದೆ. ಈಗಾಗಲೇ ಸಮೀಕ್ಷೆಗೆ ಕೇಂದ್ರವು ದಿನಾಂಕ ನಿಗದಿಪಡಿಸಿದೆ. ಇದೆಲ್ಲವನ್ನೂ ಅರಿತ ಕಾಂಗ್ರೆಸ್ಸಿಗರು ಜನರಿಗೆ ಮೂರ್ಖ ಮಾಡುತ್ತಿದ್ದಾರೆ. ಆದ್ದರಿಂದ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜೀನಾಮೆ ಕೊಡಬೇಕು ಎಂದು ಅವರು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಕಾಡಾ ಮಾಜಿ ಅಧ್ಯಕ್ಷ ಶರಣಪ್ಪ ತಳವಾರ್, ಓಬಿಸಿ ಮುಖಂಡರಾದ ಬಸವರಾಜ್ ಸಪ್ಪನಗೋಳ್, ದೇವಿಂದ್ರ ದೇಸಾಯಿ ಕಲ್ಲೂರ್, ಗಿರೀಶ್ ಭಜಂತ್ರಿ, ಈರಣ್ಣ ಕಲ್ಲೂರ್, ಶಶಿಧರ್ ಸುಗೂರ್, ಅವ್ವಣ್ಣ ಮ್ಯಾಕೇರಿ ಮುಂತಾದವರು ಉಪಸ್ಥಿತರಿದ್ದರು.

# ಹೊಸ ನಿಯಮ : ದೇಶಕ್ಕೆ 18,000 ಕೋಟಿ ಉಳಿತಾಯ

16ಲಿಅ) ವರೆಗೆ ಹೋದರೆ ಗರಿಷ್ಠ 30ಲಿಅ ವರೆಗೆ ಏರಿಸಬಹುದಾಗಿದೆ. ಸರ್ಕಾರದ ಈ ಆದೇಶ ಜಾ–ರಿಯಾದರೆ ಎಸಿ ತಾಪಮಾನ 20ಲಿಅ – 28ಲಿಅ ಗೆ ನಿರ್ಬಂಧಿಸುತ್ತದೆ. ಇದರರ್ಥ ಬಳಕೆದಾರರು ತಮ್ಮ ಎಸಿ ತಾಪಮಾನವನ್ನು 20ಲಿಅ ಗಿಂತ ಕಡಿಮೆ ಮತ್ತು 30ಲಿಅ ಗಿಂತ ಹೆಚ್ಚು ಹೊಂದಿಸಲು ಸಾಧ್ಯವಾಗುವುದಿಲ್ಲ.

ಕೇಂದ್ರ ವಿದ್ಯುತ್ ಸಚಿವ ಮನೋಹರ್ ಲಾಲ್ ಖಟ್ಟರ್ ಮಾತನಾಡಿ, ಇದೊಂದು ವಿಶಿಷ್ಟ ಪ್ರಯೋಗವಾಗಿದ್ದು, ಬೇಸಿಗೆಯಲ್ಲಿ ವಿದ್ಯುತ್ ಬೇಡಿಕೆ ಮತ್ತು ವಿದ್ಯುತ್ ಬಿಲ್‌ಗಳಲ್ಲಿನ ಏರಿಕೆಯನ್ನು ಕಡಿಮೆ ಮಾಡುತ್ತದೆ ಎಂದು ಹೇಳಿದ್ದಾರೆ.

ಈ ನಿಯಮ ಜಾರಿಯಾದ ನಂತರ ಗೃಹಬಳಕೆಯಿಂದ ಹಿಡಿದು ವಾಣಿಜ್ಯ ಸಂಸ್ಥೆಗಳಾದ ಕಚೇರಿ ಬ್ಲಾಕ್‌ಗಳು, ಮಾಲ್, ಹೋಟೆಲ್ ಮತ್ತು ಚಲನಚಿತ್ರ ಮಂದಿರಗಳ ಸೇರಿದಂತೆ ವಿವಿಧ ವಲಯಗಳಲ್ಲಿ ಬಳಸುವ ಎಸಿಗಳಿಗೆ ಅನ್ವಯವಾಗುತ್ತದೆ.

ಈಗಾಗಲೇ ಈ ಪ್ರಯೋಗ ಇಟಲಿ ಮತ್ತು ಜಪಾನ್‌ನಲ್ಲಿ ಜಾರಿಯಾಗಿದೆ. ರೋಮ್ ಸಾರ್ವಜನಿಕ ಕಟ್ಟಡಗಳಿಗೆ ಕನಿಷ್ಠ ತಾಪಮಾನವನ್ನು 23 ಡಿಗ್ರಿ ಸೆಲ್ಸಿಯಸ್‌ಗೆ ನಿಗದಿಪಡಿಸಿದರೆ, ಜಪಾನ್ 27 ಡಿಗ್ರಿ ಸೆಲ್ಸಿಯಸ್ ಫಿಕ್ಸ್ ಮಾಡಲಾಗಿದೆ.

ಪ್ರತಿ 1 ಡಿಗ್ರಿ ಸೆಲ್ಸಿಯಸ್ ಹೆಚ್ಚಳವು ವಿದ್ಯುತ್ ಬಳಕೆಯನ್ನು 6% ರಷ್ಟು ಕಡಿಮೆ ಮಾಡುತ್ತದೆ. 6 ಕೋಟಿ ನಗರ ಮನೆಗಳು ಮತ್ತು 12 ಲಕ್ಷ ವಾಣಿಜ್ಯ ಸಂಸ್ಥೆಗಳು ತಮ್ಮ ಎಸಿ ಸೆಟ್ಟಿಂಗ್ ಅನ್ನು 22 ರಿಂದ 24 ಡಿಗ್ರಿ ಸೆಲ್ಸಿಯಸ್ ನಡುವೆ ಇಟ್ಟುಕೊಂಡರೆ ವಾರ್ಷಿಕವಾಗಿ 12–15 ಬಿಲಿಯನ್ ಯೂನಿಟ್ ವಿದ್ಯುತ್ ಉಳಿಸುತ್ತದೆ ಮತ್ತು 4–5 ಕಲ್ಲಿದ್ದಲು ಆಧಾರಿತ ವಿದ್ಯುತ್ ಸ್ಥಾವರಗಳನ್ನು ನಿರ್ಮಿಸುವ ಅಗತ್ಯವನ್ನು ನಿವಾರಿಸುತ್ತದೆ. ಅಷ್ಟೇ ಅಲ್ಲದೇ ಇಂಗಾಲದ ಹೊರಸೂಸುವಿಕೆಯನ್ನು ಗಣನೀಯವಾಗಿ ಕಡಿಮೆ ಮಾಡುತ್ತದೆ.

# ಕಾರ ಹುಣ್ಣಿಮೆ ಪ್ರಯುಕ್ತ ಎತ್ತುಗಳ ಮೆರವಣಿಗೆ





ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.11: ಪ್ರತಿ ವರ್ಷದಂತೆ ಈ ವರ್ಷವೂ ಕಾರು ಹುಣ್ಣಿಮೆ ಹಬ್ಬದ ಪ್ರಯುಕ್ತ ಕುಸನೂರ ಗ್ರಾಮದ ಎಲ್ಲಾ ರೈತ ಭಾಂದವರು ಕೂಡಿ ತಮ್ಮ ತಮ್ಮ ಎಲ್ಲಾ ಎತ್ತುಗಳಿಗೆ ಸಿಂಗಾರ ಕಲರ್ ಮಾಡಿ ಕೊಂಡು ಕುಸನೂರ ಗ್ರಾಮ ಪಂಚಾಯತಿ ನಿಂದ ಅಗಸಿವರೆಗೆ ಡಿಜೆ ಮತ್ತು ವ್ಯಾದೆ ಮೇಳ ಗಳೊಂದಿಗೆ ಎಲ್ಲಾ ಎತ್ತುಗಳಿಗೆ ಶೃಂಗೇರಿಸಿ ಓಡಿಸಲಾಯಿತು.

ಬುಧವಾರ ಸಾಯಂಕಾಲ ಸಾರ್ವಜನಿಕರ ಕರಿ ಹರಿಯುವ ಕಾರ್ಯಕ್ರಮ, ವಿಜೆತ ಎತ್ತುಗಳಿಗೆ ಪ್ರಥಮ ಬಹುಮಾನ ಹಾಗೂ ದ್ವಿತಿಯ ಬಹುಮಾನ ಹಾಗೂ ಗುಂಡು ಎತುವ ವಿಜೇತರಿಗೆ ಗ್ರಾಮ ಪಂಚಾಯತಿ ಅಧ್ಯಕ್ಷ ಕುಪೇಂದ್ರ ಬರಗಾಲಿ ಅವರಿಂದ ಸ್ವಂತ ಖರ್ಚು ನಿಂದ ಬಹುಮಾನ ವಿತರಿಸಲಾಯಿತು.

ಗ್ರಾಮದ ಮುಖಂಡರಾದ ರೇವಣಸಿದ್ದಯ್ಯ ಮಠಪತಿ, ಮಂಜು ಮಠಪತಿ,ಮಲ್ಲಯ್ಯಸ್ವಾಮಿ ಮಠಪತಿ,ರೇವಣಸಿದ್ದಪ್ಪ ಎಂ. ಚೇಗಂಟಿ, ರಮೇಶ ಎಂ. ತೇಗಿನಮನಿ, ಶಿವುಕುಮಾರ ಮಾಕುಂಡಿ, ಅಶೋಕ ಬಬಲಾದಿ, ಬಸವರಾಜ ಡುರಕ್ಕಿ, ಸಿದ್ದಣ್ಣ ಶಾಹಬಾದಿ, ಚನ್ನು ಬರಗಾಲಿ, ಮಂಜು ಬರಗಾಲಿ, ಸಿದ್ದು ದುಂಡಾಣಿ, ರೇಣಸಿದ್ದಪ್ಪ ಗುಂರ್ಡತಿ, ಸಿದ್ದು ತಳವಾರ, ಭೀಮಾಶಂಕರ ಕರಗಾರ, ಶಾಂತಪ್ಪ ಬೆಣ್ಣೂರ್, ಅಪ್ಪು ಗೌಡ್ರು, ಶಿವಶರಣಪ್ಪ ಕರಗರ್, ಶಿವು ಕೂಳ್ಳುರು, ನಾಗಪ್ಪ ತಡಕಲ್ ಸೇರಿದಂತೆ ಗ್ರಾಮಸ್ಥರು ಇದ್ದರು.

# ಮುಂಗಾರು ರೈತರಲ್ಲಿ ಸಂತಸ ತರಲಿ:ಗುರುಬಸವ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.11: ಈ ವರ್ಷದ ಮುಂಗಾರಿನ ಹಂಗಾಮಿನಲ್ಲಿ ಉತ್ತಮ ಮಳೆಯಾಗಿ ರೈತರು ಸಮೃದ್ಧ ಬೆಳೆ ಬೆಳೆಯುವಂತಾಗಲಿ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಆಶಿಸಿದರು. ಪಟ್ಟಣದ ಹಿರೇಮಠ ಸಂಸ್ಥಾನದ ಆವರಣದಲ್ಲಿ ಕಾರ ಹುಣ್ಣಿಮೆ ನಿಮಿತ್ತ ಬುಧವಾರ ಎತ್ತುಗಳಿಗೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಮುಂಗಾರಿನ ಮೊದಲ ಹಬ್ಬ ಕಾರ ಹುಣ್ಣಿಮೆ ರೈತರು ಸಂಭ್ರಮದಿಂದ ಆಚರಿಸುತ್ತಾರೆ. ವರ್ಷಪೂರ್ತಿ ರೈತರೊಂದಿಗೆ ದುಡಿಯುವ ಎತ್ತುಗಳು, ರಾಸುಗಳಿಗೆ ಅಲಂಕರಿಸಿ ಪೂಜೆ ಸಲ್ಲಿಸುವುದು ಕಾರ ಹುಣ್ಣಿಮೆ ವಿಶೇಷ. ಆದರೆ ಇಂದಿನ ಯಾಂತ್ರೀಕರಣದ ಪ್ರಭಾವದಿಂದ ರಾಸುಗಳ ಸಂಖ್ಯೆ ಕಡಿಮೆಗೊಳ್ಳುತ್ತಿದೆ. ಹಬ್ಬದ ಸಂಭ್ರಮ ಮರೆಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ್ದರು.

ಪ್ರತಿವರ್ಷ ಸಕಾಲಕ್ಕೆ ಮಳೆಯಾಗದೇ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಆದರೆ ಈ ಬಾರಿ ಮುಂಗಾರಿನ ಆರಂಭದಿಂದಲೇ ಉತ್ತಮ ಮಳೆಯಾಗುತ್ತಿದೆ. ಇದು ರೈತರಲ್ಲಿ ಮೊಗದಲ್ಲಿ ಸಂತಸ ತರಿಸಿದೆ. ಈ ಬಾರಿ ಉತ್ತಮ ಮಳೆಯಾಗಿ ರೈತರು ಉತ್ತಮ ಬೆಳೆ ಬೆಳೆದು ಎಲ್ಲ ಸಂಕಷ್ಟದಿಂದ ಹೊರ ಬರುವಂತಾಗಲಿ ಎಂದು ತಿಳಿಸಿದರು.ಬಸವಲಿಂಗಸ್ವಾಮೀಜಿ ಸಮ್ಮುಖ ವಹಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ರೈತ ಸಂಘದ ಉಪಾಧ್ಯಕ್ಷ ಕಾಶಿನಾಥ ಭೂರೆ,ಪ್ರಮುಖರಾದ ಬಸವರಾಜ ಮರೆ, ಜಗನ್ನಾಥ ಜಮಾದಾರ,ಅಶೋಕ ಅಂಬಿಗಾರ, ಮಲ್ಲಮ್ಮ ನಾಗನಕೇರೆ ಸೇರಿದಂತೆ ಮುಂತಾದವರು ಇದ್ದರು.

ಮಳೆಯಾಗುತ್ತಿರುವುದು ರೈತರ ಮೊಗದಲ್ಲಿ ಮಂದಹಾಸ ತರಿಸಿದೆ. ರೈತರು ಸಕಾಲದಲ್ಲಿ ಬಿತ್ತನೆ ಕೈಗೊಂಡು ಉತ್ತಮ ಬೆಳೆ ಬೆಳೆದು ಆರ್ಥಿಕವಾಗಿ ಸದೃಢರಾಗಿ ಎಂದರು.

# ಮುಂಗಾರು ಹಂಗಾಮಿಗೆ ರೈತರು ಬೆಳೆವಿಮೆ ನೋಂದಣಿಗೆ ಜು. 31 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.11:2025ರ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಜಿಲ್ಲೆಯಲ್ಲಿ ಬೆಳೆದಿರುವ ಕೆಳಕಂಡ ಬೆಳೆಗಳಿಗೆ ರೈತರು ತಮ್ಮ ಹತ್ತಿರದ ಗ್ರಾಮ್–ಒನ್, ಸಿ.ಎಸ್.ಸಿ ಕೇಂದ್ರ, ಬ್ಯಾಂಕ್ ಅಥವಾ ಪೋಸ್ಟ್ ಆಫೀಸ್‌ಗಳಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕೆಂದು ಕಲಬುರಗಿ ಜಂಟಿ ನಿರ್ದೇಶಕರಾದ ಸಮದ್ ಪಟೇಲ್ ಅವರು ತಿಳಿಸಿದ್ದಾರೆ.

ಬೆಳೆವಾರು ರೈತರು ಪಾವತಿಸಬೇಕಾದ ವಂತಿಕೆ ವಿವರ ಇಂತಿದೆ. ಹೆಸರು (ಮಳೆಆಶ್ರಿತ) ಪ್ರತಿ ಎಕರೆಗೆ 269.13 ರೂ. ವಂತಿಕೆ, ಉದ್ದು (ಮಳೆಆಶ್ರಿತ) ಪ್ರತಿ ಎಕರೆಗೆ ರೂ. 265.08 ವಂತಿಕೆ, ತೊಗರಿ (ಮಳೆಆಶ್ರಿತ) ಪ್ರತಿ ಎಕರೆಗೆ 388.51 ರೂ. ವಂತಿಕೆ, ತೊಗರಿ (ನೀರಾವರಿ) ಪ್ರತಿ ಎಕರೆಗೆ ರೂ. 406.72 ವಂತಿಕೆ, ಹತ್ತಿ (ಮಳೆಆಶ್ರಿತ) ಪ್ರತಿ ಎಕರೆಗೆ ರೂ. 865.75 ವಂತಿಕೆ, ಹತ್ತಿ (ನೀರಾವರಿ) ಪ್ರತಿ ಎಕರೆಗೆ ರೂ. 1492.33 ವಂತಿಕೆ ಹಾಗೂ ಸೂರ್ಯಾಅವರೆ (ಮಳೆಆಶ್ರಿತ) ಪ್ರತಿ ಎಕರೆಗೆ ರೂ. 331.85 ವಂತಿಕೆಯನ್ನು ರೈತರು ಪಾವತಿಸಬೇಕು. ರೈತರು ನೋಂದಣಿ ಮಾಡಿಕೊಳ್ಳಲು 2025ರ ಜುಲೈ 31 ಕೊನೆಯ ದಿನವಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಮುಂಗಾರು ಬಿತ್ತನೆ ಭರದಿಂದ ಸಾಗಿದ್ದು, ಅತೀವೃಷ್ಟಿ, ಅನಾವೃಷ್ಟಿ, ಅಕಾಲೀಕ ಮಳೆಯಂತಹ ಪ್ರಕೃತಿ ವಿಕೋಪಗಳು ಹಾಗೂ ಯಾವುದೇ ಹಂತದಲ್ಲಿ ಬೆಳೆನಾಶವಾಗಬಹುದು. ಆದ್ದರಿಂದ ರೈತಭಾಂದವರು ಬಿತ್ತನೆಕಾರ್ಯ ಕೈಗೊಳ್ಳುವುದಷ್ಟೇ ಅಲ್ಲದೆ, ಬಿತ್ತಿದ ಬೆಳೆಯ ಕ್ಷೇತ್ರವನ್ನು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ವ್ಯಾಪ್ತಿಗೆ ನೊಂದಾಯಿಸುವುದು ಸಹ ಪ್ರಮುಖವಾಗಿದೆ.

ಕಳೆದ 3 ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ 561082 ಲಕ್ಷ ರೈತರು ಬೆಳೆವಿಮೆ ನೋಂದಣಿ ಮಾಡಿದ್ದು, 59.39 ಕೋಟಿ ರೈತರ ವಂತಿಕೆ ಪಾವತಿ ಮಾಡಿರುತ್ತಾರೆ ಹಾಗೂ 954.61 ಕೋಟಿ ಪರಿಹಾರಧನವನ್ನು ರೈತರ ಖಾತೆಗೆ ಪಾವತಿಸಲಾಗಿದೆ. ಕಳೆದ ಮೂರು ವರ್ಷದ ಮಾಹಿತಿ ನೊಡಿದಾಗ ರೈತರಿಗೆ ಬೆಳೆವಿಮೆ ಯೋಜನೆ ಬಹಳ ಅನುಕೂಲಕರವಾಗಿದೆ.ಕಲಬುರಗಿ ಜಿಲ್ಲೆಯಲ್ಲಿ ಶೇ 90 ರಷ್ಟು ಪ್ರದೇಶ ಮಳೆಯಾಶ್ರಿತವಾಗಿರುವುದರಿಂದ ಅತೀವೃಷ್ಟಿ ಹಾಗೂ ಅನಾವೃಷ್ಟಿಗೆ ಸತತವಾಗಿ ಬೆಳೆಗಳು ತುತ್ತಾಗಿರುತ್ತವೆ ಎಂದು ಅವರು ತಿಳಿಸಿದ್ದಾರೆ.

ರಾಯಚೂರಿನ ಹಟ್ಟಿಗೆ ಭೇಟಿ ನೀಡಿದ ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿ

# ಹಟ್ಟಿ ಗೋಲ್ಡ್ ಮೈನ್ ಕಂಪನಿಯ ನೌಕರರ ಸುರಕ್ಷತೆಗೆ ಗಮನ ಹರಿಸಿ: ಟಿ.ಎ.ಶರವಣ ನಿರ್ದೇಶನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜೂನ್ 11-: ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರಾದ ಟಿ.ಎ.ಶರವಣ ಹಾಗೂ ಸಮಿತಿಯ ಸದಸ್ಯರ ತಂಡವು ಜೂನ್ 11ರಂದು ಲಿಂಗಸೂರ ತಾಲೂಕಿನ ಹಟ್ಟಿಗೋಲ್ಡ್ ಮೈನ್ ಕಂಪನಿಗೆ ಭೇಟಿ ನೀಡಿತು.

ಪೂರ್ವ ನಿಗದಿಯಂತೆ ತಂಡವು ಮೊದಲಿಗೆ ಹಟ್ಟಿ ಚಿನ್ನದ ಗಣಿ ವೀಕ್ಷಣೆಯನ್ನು ನಡೆಸಿತು. ಬರೋಬ್ಬರಿ ಒಂದು ಕಿ.ಮೀ ಆಳದಷ್ಟು ಗಣಿಗಿಳಿದ ಶಾಸಕರು ಚಿನ್ನ ಉತ್ಪಾದನೆಯ ಪರಿಯ ಕಂಡು ಬೆರಗಾದರು. ಬಳಿಕ ಚಿನ್ನದ ಗಣಿಯ ಲೋಹ ವಿಭಾಗಕ್ಕೆ ತೆರಳಿ ಖುದ್ದು ವೀಕ್ಷಣೆ ನಡೆಸಿದರು. ಲೋಹ ವಿಭಾಗದ ಉಪಪ್ರಧಾನ ವ್ಯವಸ್ಥಾಪಕರಾದ ವಿಧಾತ್ರಿ ಅವರು, ಚಿನ್ನ ಸಂಸ್ಕರಣೆಯ ವಿಧಿವಿಧಾನಗಳ ಬಗ್ಗೆ ಶಾಸಕರಿಗೆ ಮಾಹಿತಿ ನೀಡಿದರು.

ಬಳಿಕ ಕಂಪನಿಯ ಸಭಾಂಗಣದಲ್ಲಿ ಸಭೆ ನಡೆಯಿತು. ಈ ವೇಳೆ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಭರವಸೆಗಳ ಸಂಖ್ಯೆ:7622 ಮತ್ತು 7387ಕ್ಕೆ ಸಂಬಂಧಿಸಿದಂತೆ ವಿವರಣೆ ಪಡೆದುಕೊಂಡರು. ಕಂಪನಿಯ ನೌಕರರೊಬ್ಬರು ಮೃತಪಟ್ಟ ವಿಷಯದ ಬಗ್ಗೆ ಅಧ್ಯಕ್ಷರು ವಿವರಣೆ ಕೇಳಿದರು. ಕಂಪನಿಯಲ್ಲಿ ಪ್ರಗತಿ ಕಾರ್ಯ ನಡೆಯುವ ವೇಳೆ ಮಸೀನದಲ್ಲಿದ್ದ ಒಬ್ಬ ವ್ಯಕ್ತಿಯು ಪ್ರಾಣ ಕಳೆದುಕೊಂಡರು. ಇವರ ಕುಟುಂಬದವರಿಗೆ ಈಗಾಗಲೇ 5 ಲಕ್ಷ ರೂ ಪರಿಹಾರ ನೀಡಿದೆ. ಮೃತನ ಪತ್ನಿಗೆ ಮ್ಯಾನೇಜರ್ ದರ್ಜೆಯ ಹುದ್ದೆಯ ಕೆಲಸ ಕೊಡಲು ಕ್ರಮವಹಿಸಲಾಗುತ್ತಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಈ ವೇಳೆ ಸಮಿತಿಯ ಅಧ್ಯಕ್ಷರಾದ ಟಿ.ಎ.ಶರವಣ ಅವರು ಮಾತನಾಡಿ, ಇನ್ಮುಂದೆ ಇಂತಹ ಕಹಿ ಘಟನೆಗಳು ಮರುಕಳಿಸದ ಹಾಗೆ ಹಟ್ಟಿಗೋಲ್ಡ್ ಮೈನ್ ಕಂಪನಿ ನಿಯಮಿತದ ನೌಕರರ ಜೀವ ಸುರಕ್ಷತೆಗೆ ಗಮನ ಹರಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. 25 ಲಕ್ಷಕ್ಕೆ ಏರಿಸಿ: ಕಂಪನಿಯಲ್ಲಿ ಕೆಲಸದ ವೇಳೆ ಪ್ರಾಣ ಕಳೆದುಕೊಂಡ ನೌಕರರ ಕುಟುಂಬದ ಸಂತ್ರಸ್ತರಿಗೆ ಇನ್ಮುಂದೆ ಕನಿಷ್ಠ 25 ಲಕ್ಷ ಪರಿಹಾರ ಧನ ನೀಡಲು ಕರ್ನಾಟಕ ವಿಧಾನ ಪರಿಷತ್ತಿನ ಭರವಸೆಗಳ ಸಮಿತಿ ಸೂಚನೆ ನೀಡುತ್ತಿದೆ. ಸಭೆಯಲ್ಲಿ ಚರ್ಚೆಯಾಗಿದೆ ಎಂದು ಉಲ್ಲೇಖಿಸಿ 25 ಲಕ್ಷ ರೂ ಕೊಡಲು ಬೋರ್ಡಗೆ ಶಿಫಾರಸ್ಸು ಮಾಡಲು ಕ್ರಮವಹಿಸಬೇಕು ಎಂದು ಸಮಿತಿಯ ಸದಸ್ಯರು ಇದೆ ವೇಳೆ ಸೂಚನೆ ನೀಡಿದರು. ಹಾಸ್ಪಿಟಲ್ ಮೇಲ್ದರ್ಜೇಗೇರಿಸಿ: ಕಂಪನಿಯ ಆವರಣದಲ್ಲಿನ ಹಾಸ್ಪಿಟಲನ ಸದ್ಯದ ಪರಿಸ್ಥಿತಿ ಸರಿಯಿಲ್ಲ. ಇದು ಬದಲಾಗಬೇಕು. ನೌಕರರಿಗೆ ಎಲ್ಲಾ ರೀತಿಯ ಚಿಕಿತ್ಸೆ ಸಿಗುವ ನಿಟ್ಟಿನಲ್ಲಿ ಈಗಿರುವ ಆಸ್ಪತ್ರೆಯನ್ನು ಮೇಲ್ದರ್ಗೇರಿಸಬೇಕು ಎಂದು ಅಧ್ಯಕ್ಷರು ಎಂಡಿ ಅವರಿಗೆ ನಿರ್ದೇಶನ ನೀಡಿದರು. ಮಕ್ಕಳಿಗೆ ಸೌಲಭ್ಯ ಕಲ್ಪಿಸಿ: ಕೆಳಗಿಳಿದರೆ ಹೊರ ಬರುತ್ತವೆಯೋ ಇಲ್ಲೊ ಅನ್ನುವಂತಹ ಮೈನಿಂಗ್ ಕಂಪನಿಯಲ್ಲಿ ಬೆಂಕಿ, ಬೃಹಧಾಕಾರದ ಮಸೀನ್ ಬಳಿ ಕೆಲಸ ಮಾಡುವ ನೌಕರರ ಕುಟುಂಬದವರ ಮಕ್ಕಳಿಗೆ ಇಲ್ಲಿಯೇ ಉನ್ನತ ದರ್ಜೆಯ ಶಿಕ್ಷಣ ಸಿಗುವ ನಿಟ್ಟಿನಲ್ಲಿ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಲು ಕ್ರಮವಹಿಸಬೇಕು ಎಂದು ಸಮಿತಿಯ ಸದಸ್ಯರು ಕಂಪನಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ವರದಿ ಕೊಡಿ: ಕಂಪನಿಯ ಹೊರಗುತ್ತಿಗೆ ನೌಕರರಿಗೆ ಮಾನವ ಸಂಪನ್ಮೂಲ ಸಂಸ್ಥೆಗಳಿಂದ ಸರಿಯಾಗಿ ವೇತನ ಪಾವತಿಯಾಗುವಂತೆ ಕಟ್ಟುನಿಟ್ಟಿನ ಕ್ರಮವಹಿಸಬೇಕು ಎಂದು ಸೂಚನೆ ನೀಡಿದ ಅಧ್ಯಕ್ಷರು, ಇದುವರೆಗೆ ಕಂಪನಿಯು ಹೊರಗುತ್ತಿಗೆ ನೌಕರರ ವೇತನಕ್ಕಾಗಿ ಮಾನವ ಸಂಪನ್ಮೂಲ ಸಂಸ್ಥೆಗಳಿಗೆ ಹಣ ಸಂದಾಯ ಮಾಡಿದ ಬಗ್ಗೆ ವಿವರವಾದ ಮಾಹಿತಿ ನೀಡಲು ಅಧಿಕಾರಿಗಳಿಗೆ ಅಧ್ಯಕ್ಷರು ಸೂಚನೆ ನೀಡಿದರು. ಮತ್ತೊಮ್ಮೆ ಪರಿಶೀಲಿಸಿ: ಈ ಕಂಪನಿಯಲ್ಲಿ ನೌಕರರು ಕಷ್ಟಕರ ಕೆಲಸ ಮಾಡುತ್ತಾರೆ. ನಾನಾ ಕಾರಣಕ್ಕೆ ನೌಕರಿ ಕಳೆದುಕೊಂಡ ಕಂಪನಿಯ ಕೆಲ ನೌಕರರನ್ನು ಮರಳಿ ಕೆಲಸಕ್ಕೆ ತೆಗೆದುಕೊಳ್ಳಲು ಪುನಃ ಪರಿಶೀಲಿಸಬೇಕು ಎಂದು ಅಧ್ಯಕ್ಷರು ಸೂಚನೆ ನೀಡಿದರು.

ನ್ಯೂಟೆಕ್ನಾಲಜಿ ಅಳವಡಿಸಿ: ಹಟ್ಟಿ ಗೋಲ್ಡ್ ಕಂಪನಿಯು ಜಿಂದಾಲ್ ಕಂಪನಿಗೆ ಸರಿಸಮವಾಗಿದೆ. ಮಸೀನಗಳು ಮಾಡಬೇಕಾದ ಎಷ್ಟೋ ಕಾರ್ಯವು ಇನ್ನು ಇಲ್ಲಿ ನೌಕರರೇ ಮಾಡುತ್ತಿದ್ದಾರೆ. ನೌಕರರ ಹಿತರಕ್ಷಣೆ ದೃಷ್ಟಿಯಿಂದ ಕಂಪನಿಯಲ್ಲಿ ಹೊಸ ಹೊಸ ತಂತ್ರಜ್ಞಾನ, ಸಲಕರಣೆ, ಮಸೀನಗಳನ್ನು ಅಳವಡಿಸುವತ್ತ ಅಧಿಕಾರಿಗಳು ಗಮನ ಹರಿಸಬೇಕು ಎಂದು ಸಮಿತಿಯ ಸದಸ್ಯರು ಸೂಚನೆ ನೀಡಿದರು. ಟೆಂಡರ್ ಪಾರದರ್ಶಕವಾಗಿ ನಡೆಸಿ: ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದಲ್ಲಿ ಪ್ರತಿ ವರ್ಷ ಅಂದಾಜು 1,600 ಕೆ.ಜಿ. ಬಂಗಾರದ ಉತ್ಪಾದನೆ ಆಗುತ್ತಿದೆ ಅನ್ನುವುದು ಗಮನಾರ್ಹ ಸಂಗತಿಯಾಗಿದೆ. ಇಲ್ಲಿ ಉತ್ಪಾದನೆಯಾದ ಚಿನ್ನದ ಮಾರಾಟವು ಪಾರದರ್ಶಕವಾಗಿ ನಡೆಯಬೇಕು. ಓಪನ್ ಮಾರ್ಕೆಟನಲ್ಲಿ ಟೆಂಡರ್ ಮಾಡಿ, ಟೆಂಡರ್ ವಿವರಗಳನ್ನು ಹೆಚ್ಚಿಗೆ ಪ್ರಚುರಪಡಿಸಿ. ನೈಜ ಚಿನ್ನದ ಎಜೇನ್ಸಿಗಳು, ಮಾರಾಟಗಾರರು ಭಾಗಿಯಾಗುವ ಹಾಗೆ ಟೆಂಡರ್ ಪ್ರಕ್ರಿಯೆ ಶಿಸ್ತು ಬದ್ಧವಾಗಿ ನಡೆಯಬೇಕು. ಇ-ಹರಾಜಿಗೆ ಕ್ರಮವಹಿಸಬೇಕು ಎಂದು ಅಧ್ಯಕ್ಷರು, ಕಂಪನಿಯ ಎಲ್ಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಕಳೆದ ಮೂರು ವರ್ಷದಲ್ಲಿ ಈ ಕಂಪನಿಯಲ್ಲಿ ಉತ್ಪಾದನೆಯಾದ ಚಿನ್ನದ ಪ್ರಮಾಣ ಎಷ್ಟು? ಯಾವ ಯಾವ ಏಜೆನ್ಸಿಗೆ? ಯಾವ ಯಾವ ದರಕ್ಕೆ ಮಾರಾಟ ಮಾಡಿದ್ದೀರಿ ಎಂಬುದರ ಬಗ್ಗೆ ಸವಿವರವಾದ ವರದಿ ನೀಡಲು ಅಧ್ಯಕ್ಷರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ವಿಧಾನ ಪರಿಷತ್ ಶಾಸಕರಾದ ನಿರಾಣಿ ಹನುಮಂತಪ್ಪ ರುದ್ರಪ್ಪ, ಪ್ರತಾಪ ಸಿಂಹ ನಾಯಕ ಕೆ., ಡಿ ಎಸ್ ಅರುಣ, ಕೆ.ಎಸ್.ನವೀಣ, ಮಂಜುನಾಥ ಭಂಡಾರಿ, ತಿಪ್ಪಣ್ಣಪ್ಪ ಕಮಕನೂರ, ಕರ್ನಾಟಕ ವಿಧಾನ ಪರಿಷತ್ ಕಾರ್ಯದರ್ಶಿ ಕೆ ಆರ್ ಮಹಾಲಕ್ಷ್ಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಕಂಪನಿಯ ವ್ಯವಸ್ಥಾಪಕ ನಿರ್ದೇಶಕಿ ಶಿಲ್ಪಾ, ಪೊಲೀಸ್ ಇಲಾಖೆಯ ಸಿಪಿಐ ಶ್ರೀಪಾದ ಜಲ್ದೆ ಸೇರಿದಂತೆ, ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು, ಹಟ್ಟಿ ಗೋಲ್ಡ್ ಮೈನಿಂಗ್ ಕಂಪನಿಯ ಇನ್ನಿತರ ಅಧಿಕಾರಿಗಳು ಇದ್ದರು.

# ಬಹುಜನ ಸಮಾಜ ಪಕ್ಷದ ವತಿಯಿಂದ ಗ್ರಾಮದ ಘಟಕ ರಚನೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಜೂ 11-ತಾಲೂಕಿನ ಹಂದ್ರೊಳ(ಖ) ಗ್ರಾಮದಲ್ಲಿ ಬಹುಜನ ಸಮಾಜ ಪಕ್ಷದ ವತಿಯಿಂದ ಗ್ರಾಮ ಘಟಕ ರಚನೆಯನ್ನು ತಾಲೂಕ ಅಧ್ಯಕ್ಷರಾದ ಶಂಕರ್ ಪುಲೆ ಯವರ ನೇತೃತ್ವದಲ್ಲಿ ಗ್ರಾಮ ಘಟಕದ ಪದಾಧಿಕಾರಿಗಳ ನೇಮಕ ಮಾಡಿ ಪಕ್ಷದ ಬಗ್ಗೆ ಮಾಹಿತಿ ನೀಡಿದರು. ಗ್ರಾಮ ಘಟಕದ ನೂತನ ಅಧ್ಯಕ್ಷರಾದ ಮಾರುತಿ ತಂದೆ ತುಕಾರಾಮ ಮೆಕಲೆ. ಉಪಾಧ್ಯಕ್ಷರಾದ ನಾಗನಾಥ್ ತಂದೆ ಜಗನ್ನಾಥ್ ಪಾಂಚಾಳ. ಸಂಯೋಜಕರಾದ ವಿಶ್ವನಾಥ್ ತಂದೆ ನಿಂಬಾಜಿ ಬಿರಾಜದಾರ್ ಬಿರಾದಾರ್. ಇನ್ನೊಬ್ಬರು ಸಂಯೋಜಕರಾದ ಸಿದ್ರಾಮ ತಂದೆ ಜಗನ್ನಾಥ ಪಾಂಚಳ. ಪ್ರಧಾನ ಕಾರ್ಯ ದರ್ಶಿಗಳಾದ ಲಖನ ತಂದೆ ನರಸೊಬಾ ಸೂರ್ಯವಂಶಿ. ಕಾರ್ಯದರ್ಶಿಗಳಾದ ಶಂಕರ ತಂದೆ ಭೀಮರಾವ್ ಮೆಕಾಲೆ. ಖಜಾಂಚಿ ಮೊಹನ ತಂದೆ ವಿಸಂಬರ ಪಾಂಚಾಳ. ಅಂಕುಶ ತಂದೆ ವೆಂಕಟ ಬಿರಾದರ. ಮಹಿಳಾ ಗ್ರಾಮ ಘಟಕ ಅಧ್ಯಕ್ಷರು ಅಂಬುಬಾಯಿ ಗಂಡ ದಿಲೀಪ ಬಿರಾದರ ಇವರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ತಾಲೂಕ ಉಪಾಧ್ಯಕ್ಷರು ಸಚಿನ್ ಕಾಂಬಳೆ ತಾಲೂಕ ಕಾರ್ಯದರ್ಶಿಗಳು ಮಹಾದೇವ ಗಾಯಕ್ವಾಡ್ ಇನ್ನೊಬ್ಬ ತಾಲೂಕ ಕಾರ್ಯದರ್ಶಿಗಳು ಚಂದ್ರಕಾಂತ ಲಂಗಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

18 ವರ್ಷದ ಒಳಗಿನ ಮಕ್ಕಳು ಬೈಕ್ ಚಲಾಯಿಸುವುದು

# ಅಪರಾಧ ಪಿಎಸ್ಐ ಸಿದ್ದೇಶ್ವರ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:- ಜೂ, 11- ಇಲ್ಲಿನ ಶಾಂತಿನಿಕೇತನ ಪ್ರೌಢ ಶಾಲೆಯಲ್ಲಿ ಸಂಚಾರಿ ಪೊಲೀಸ್ ಠಾಣೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತೆ ನಿಯಮಗಳ ಬಗ್ಗೆ ಪಿಎಸ್ಐ ಸಿದ್ದೇಶ್ವರರು ಮಾತನಾಡಿ 18 ವರ್ಷದ ಒಳಗಿನ ಮಕ್ಕಳು ವಾಹನ ಚಲಾಯಿಸುವುದು ಕಾನೂನಿನಲ್ಲಿ ಮಹಾ ಅಪರಾಧ ವಾಹನ ಚಲಾಯಿಸಿದ ಮಕ್ಕಳ ಪಾಲಕರಿಗೆ 25,000 ದಂಡ ಆರು ತಿಂಗಳ ಜೈಲು ಸಜೆ ನೀಡಲಾಗುವುದು ಎಂದು ಎಚ್ಚರಿಕೆ ನೀಡಿದರು. ಇಂದಿನ ದಿನಗಳಲ್ಲಿ ಚಿಕ್ಕ ಚಿಕ್ಕ ಮಕ್ಕಳು ಯಾವುದೇ ಸುರಕ್ಷತೆ ಇಲ್ಲದೆ ವಾಹನಗಳು ಚಲಾಯಿಸುತ್ತಿದ್ದು ಅಪಘಾತದಲ್ಲಿ ಮೃತ ಪಡುತ್ತಿರುವುದು ತಮಗೆಲ್ಲ ತಿಳಿದ ವಿಷಯ ಸುರಕ್ಷತೆ ದೃಷ್ಟಿಯಿಂದ ಹೆಲ್ಮೆಟ್ ಹಾಕಿಕೊಂಡು ವಾಹನ ಚಲಾಯಿಸಬೇಕೆಂದು ಹೇಳಿದರು. ವೇದಿಕೆ ಮೇಲೆ

ಎ.ಎಸ್.ಐ ಬಸವರಾಜ. ಮುಖ್ಯ ಗುರುಗಳಾದ ಚೆನ್ನವೀರ. ಕೆ.ಬಿರಾದಾರ. ಶಿಕ್ಷಕರಾದ ಮಲಕಣ್ಣಾ ಮಸೂತಿ. ಸಿದ್ರಾಮಪ್ಪ ರೇಕುಳಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪರಿಸರ ಜಾಗೃತಿ ಕಾರ್ಯಕ್ರಮಕ್ಕೆ ನಾಲ್ವರ ಶ್ರೀಗಳಿಗೆ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಚಿತ್ತಾಪುರ ತಾಲೂಕಿನ ನಾಲ್ವಾರ್ ಶ್ರೀ ಕೋರಿ ಸಿದ್ದೇಶ್ವರ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಸಿದ್ಧತೋಟೇಂದ್ರ ಶಿವಾಚಾರ್ಯರಿಗೆ ಬೀದರ್ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ರಾಜಶ್ರೀ ಸ್ವಾಮಿ ಹಾಗೂ ಶ್ರೀಕಾಂತ್ ಸ್ವಾಮಿ ಅವರು ಸನ್ಮಾನಿಸಿ ಆಶೀರ್ವಾದ ಪಡೆದರು. ಪರಿಸರವಾದಿ ಶೈಲೇಂದ್ರ ಕಾವಡಿ ನಾಲ್ವರ್ ಶ್ರೀಮಠದಲ್ಲಿ ಮಣ್ಣೆತ್ತಿನ ಅಮಾವಾಸ್ಯೆಯ ದಿನದಂದು ಪರಿಸರ ಸಂರಕ್ಷಣೆ ಜನಜಾಗೃತಿ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಆಗಮಿಸಲು ಪೂಜ್ಯರಿಗೆ ಸಸಿಕೊಟ್ಟು ಸನ್ಮಾನಿಸಿ ಆಮಂತ್ರಿಸಿದರು. ಮಹಾದೇವ ಗಂವಾರ ಇದ್ದರು.

**‘ಸಸಿ ಬೆಳೆಸಿ ದೇಶ ಉಳಿಸಿ’**

# ರಾಯಚೂರು ಇಂಡಸ್ಟ್ರಿಯಲ್ ಗ್ರೋತ್ ಸೆಂಟರಗೆ ಮೂಲಭೂತ ಸೌಕರ್ಯ ಕಲ್ಪಿಸಲು ಕಟ್ಟುನಿಟ್ಟಿನ ನಿರ್ದೇಶನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜೂನ್ 11-ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರಾದ

ಟಿ.ಎ.ಶರವಣ ಹಾಗೂ ಸಮಿತಿಯ ಸದಸ್ಯರ ತಂಡವು ಜೂನ್ 11ರಂದು ರಾಯಚೂರು ನಗರದಲ್ಲಿರುವ ಇಂಡಸ್ಟ್ರಿಯಲ್ ಗ್ರೋತ್ ಸೆಂಟರ್‌ಗೆ ಭೇಟಿ ನೀಡಿತು.

ಮಧ್ಯಾಹ್ನ ಬೋಜನ ವಿರಾಮದ ನಂತರ ಕೃಷಿ ವಿಜ್ಞಾನ ವಿವಿ ಆವರಣದಿಂದ ಹೊರಟು, ದೇವಸಗೂರ ರಸ್ತೆಯ ಮಾರ್ಗವಾಗಿ ಒಡ್ಲೂರ ರಸ್ತೆ ಬಳಿಯ ಕೆ-ಐಎಡಿಬಿ ಪ್ರದೇಶಕ್ಕೆ ಆಗಮಿಸಿದ ಶಾಸಕರು, ಅಲ್ಲಿನ ರಸ್ತೆಗಳು ಸರಿ ಇಲ್ಲದ್ದನ್ನು, ಮೂಲ ಸೌಲಭ್ಯಗಳು ಕಾಣದೇ ಇರುವುದನ್ನು ಕಂಡು ಅಸಮಧಾನವ್ಯಕ್ತಪಡಿಸಿದರು. 'ಇಲ್ಲಿನ ಕಾರ್ಖಾನೆಗಳ ವಾಸ್ತವ ಪರಿಸ್ಥಿತಿ ಏನಿದೆ ಎಂದು ಗೊತ್ತಿದೆಯಾ. ಇಲ್ಲಿಗೆ ಆಗಾಗ ಭೇಟಿ ಕೊಡ್ತೀರಾ' ಎಂದು ಕೆಐಎಡಿಬಿ ಎಂಜಿನಿಯರುಗಳಿಗೆ ಸಮಿತಿಯ ಅಧ್ಯಕ್ಷರು ಪ್ರಶ್ನಿಸಿದರು. ಈ ಪ್ರದೇಶದಲ್ಲಿನ ಸೌಲಭ್ಯಗಳು, ಕುಂದುಕೊರತೆಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಪರಿಶೀಲನೆ ಮಾಡಿದ ಸಮಿತಿಯ ಅಧ್ಯಕ್ಷರು, ಇಲ್ಲಿ ಯಾವ ಯಾವ ಸಮಸ್ಯೆಗಳಿವೆ. ಅದಕ್ಕೆ ಕೆಐಎಡಿಬಿ ಏನು ಮಾಡುತ್ತಿದೆ ಎಂಬುದರ ಕುರಿತು ಕ್ರಮ ವಹಿಸಿದ ಬಗ್ಗೆ ವರದಿ ನೀಡಬೇಕು ಎಂದು ಕೆಐಎಡಿಬಿ ಎಂಜಿನಿಯರುಗಳಿಗೆ

15 ದಿನಗಳ ಗಡುವು ವಿಧಿಸಿದರು.

ಈ ಪ್ರದೇಶದಲ್ಲಿ ಅತ್ಯಂತ ಅವಶ್ಯಕವಾಗಿರುವ ನೀರಿನ ಸಂಪನ್ಮೂಲ ಕಲ್ಪಿಸಬೇಕು. ಇದಕ್ಕೆ ಏನಾದರು ಅಡೆತಡೆ ಇದ್ದರೆ ತಿಳಿಸಿರಿ ಎಂದು ಅಧ್ಯಕ್ಷರು ಎಂಜಿನಿಯರುಗಳಿಗೆ ನಿರ್ದೇಶನ ನೀಡಿದರು.

ರಾಯಚೂರ ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಯಚೂರ ಗ್ರೋಥ್ ಸೆಂಟ-ರ್ ಕೈಗಾರಿಕಾ ಪ್ರದೇಶಗಳಲ್ಲಿ 150ಕ್ಕು ಹೆಚ್ಚು ಕೈಗಾರಿಕೆಗಳು ಕಾರ್ಯ ನಿರ್ವಹಿಸುತ್ತಿವೆ. ಕಾರ್ಮಿಕರು, ಸಾರ್ವಜನಿಕರಿಗೆ ನೀರು ಸರಬರಾಜು ಮತ್ತು ರಸ್ತೆ, ಬೀದಿ ದೀಪ, ಚರಂಡಿಯಂತಹ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ

ಹಾಗೂ ಕೆಮಿಕಲ್ ನಿರ್ವಹಣೆ ಸರಿಯಾಗಿ ಮಾಡುವ ಬಗ್ಗೆ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧ್ಯಕ್ಷರೊಂದಿಗೆ ಚರ್ಚಿಸಿದರು.

ಫಾರ್ಮಾ ಮತ್ತು ಕೆಮಿಕಲ್ ಕಂಪನಿಗಳಿಗೆ ಕೆಐಎಡಿಬಿ ನಲ್ಲಿ ಪ್ಲಾಟ್ ನೀಡಲಾಗಿದೆ ವಿನಃ ಇಲ್ಲಿ ಆರಂಭದಲ್ಲಿಯೇ ಆಗಬೇಕಾದ ಮೂಲಭೂತ ಸೌಕರ್ಯಗಳು ಕಳೆದ 19 ವರ್ಷಗಳಿಂದ ಆಗಿಲ್ಲ. ಇಲ್ಲಿ ರಸ್ತೆ ಸರಿ ಇಲ್ಲ. ಬೀದಿ ದೀಪ ಇಲ್ಲ. ಈ ಲೇಔಟ್ ನಿರ್ಮಾಣಕ್ಕೆ ಈ ಹಿಂದೆ 120 ಕೋಟಿ ಖರ್ಚಾಗಿದೆ. ಏನೂ ಪ್ರಯೋಜನವಾಗಿಲ್ಲ ಎಂದು ಜಿಲ್ಲಾ ವಾಣಿಜ್ಯೋದಮ ಮಂಡಳಿಯ ತ್ರಿವಿಕ್ರಮ ಜೋಶಿ ಹಾಗೂ ಇತರರು ತಿಳಿಸಿ, ನಾನಾ ಬೇಡಿಕೆಗಳ ಮನವಿಯನ್ನು ಅಧ್ಯಕ್ಷರಿಗೆ ಸಲ್ಲಿಸಿದರು.

**ಸಾರ್ವಜನಿಕರಿಂದ ಅಸಮಾಧಾನ:** ಇಲ್ಲಿನ 15 ಕೆಮಿಕಲ್ ಫ್ಯಾಕ್ಟರಿಗಳ ನೀರನ್ನು ಕೆರೆಗೆ ಬಿಡಲಾಗಿದೆ. ಈ ನೀರು ಬಿಟ್ಟು ಸುಮಾರು 2000 ಜಮೀನಿನ ಮಣ್ಣು ಹಾಳಾಗಿದೆ. ಪ್ರತಿ ದಿನ ನಾಲ್ಕಾರು ಎಮ್ಮೆಗಳು ಸಾಯುತ್ತಿವೆ. ಈ ಇಂಡಸ್ಟ್ರಿಗಳು ಪಕ್ಕದ ಜಮೀನುಗಳಿಗೆ ಸರ್ವಿಸ್ ರಸ್ತೆ ಬಿಡದ ಹಾಗೆ ಹದ್ದು ಬಸ್ತ್ ಮಾಡಿಕೊಂಡಿವೆ. ರಾತ್ರಿ ವೇಳೆ ಕೆಮಿಕಲ್ ತಂದು ಸುರುವುದರಿಂದ ವಿಪರೀತ ಕೆಟ್ಟ ವಾಸನೆ ಬರುತ್ತಿದೆ. ಮಕ್ಕಳು ಇಲ್ಲಿ ನಿದ್ದೆ ಮಾಡದಂತಹ ದುಸ್ಥಿತಿ ಎದುರಾಗಿದೆ ಎಂದು ಅಲ್ಲಿನ ಸ್ಥಳೀಯ ನಾಗರಿಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಇಲ್ಲಿನ ಸಮಸ್ಯೆಗಳ ಬಗ್ಗೆ ಗೊತ್ತಾಗಿದ್ದರಿಂದಲೇ ಸಮಿತಿಯು ರಾಯಚೂರಿಗೆ ಬಂದಿದೆ. ಇಲ್ಲಿನ ಸಮಸ್ಯೆಗಳನ್ನು ಹಂತಹಂತವಾಗಿ ಸರಿಪಡಿಸಲು ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಅಧ್ಯಕ್ಷರು ತಿಳಿಸಿದರು.

ಈ ವೇಳೆ ಸಮಿತಿಯ ಸದಸ್ಯರು ಆಗಿರುವ ವಿಧಾನ ಪರಿಷತ್ ಶಾಸಕರಾದ ನಿರಾಣಿ ಹನುಮಂತಪ್ಪ ರುದ್ರಪ್ಪ, ಪ್ರತಾಪ ಸಿಂಹ ನಾಯಕ ಕೆ., ಡಿ ಎಸ್ ಅರುಣ, ಕೆ.ಎಸ್.ನವೀಣ, ಮಂಜುನಾಥ ಭಂಡಾರಿ, ತಿಪ್ಪಣ್ಣಪ್ಪ ಕಮಕನೂರ, ರಾಯಚೂರಿನ ವಿಧಾನ ಪರಿಷತ್ ಶಾಸಕರಾದ ವಸಂತಕುಮಾರ, ವಿಧಾನ ಪರಿಷತ್ ಕಾರ್ಯದರ್ಶಿ ಕೆ ಆರ್ ಮಹಾಲಕ್ಷ್ಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಕೆಐಎಡಿಬಿಯ ಅಧಿಕಾರಿಗಳು ಇದ್ದರು.

ಪುರಸಭೆ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ

# ಪಾಟೀಲ್ ಹೇಳಿಕೆಗೆ ಪಾಟೀಲ್ ತಿರುಗೇಟು







ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ ಪುರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದ ಚುನಾವಣೆ ಬುಧವಾರ ತಾಲೂಕು ದಂಡಾಕಾರಿ ಹಾಗೂ ಚುನಾವಣಾಕಾರಿ ಮಂಜುನಾಥ ಪಂಚಾಳ ಅವರ ನೇತೃತ್ವದಲ್ಲಿ ಜರುಗಿತು. ಅಧ್ಯಕ್ಷ ಸ್ಥಾನಕ್ಕೆ ದೀಲೀಪಕುಮಾರ ಬಗದಲಕರ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ನಸೀರ ಖಾನಸಾಬ್ ತಲಾ ಒಂದೊಂದು ನಾಮ ಪತ್ರ ಸಲ್ಲಿಸಿರುವುದರಿಂದ ಅಧ್ಯಕ್ಷರಾಗಿ ದೀಲಿಪಕುಮಾರ ಬಗದಲಕರ ಮತ್ತು ಉಪಾಧ್ಯಕ್ಷರಾಗಿ ನಸೀರ ಖಾನಸಾಬ್ ಅವರು ಅವಿರೋಧವಾಗಿ ಆಯ್ಕೆಯಾದರು.

ಚಿಟಗುಪ್ಪ ಪುರಸಭೆಯ ಒಟ್ಟು 25 ಸದಸ್ಯ ಬಲವಿದ್ದು ಒಬ್ಬ ಸಂಸದ, ಮತ್ತು ಒಂದು ಶಾಸಕ ಸೇರಿ ಒಟ್ಟು 25 ಮತದಾರರಲ್ಲಿ. 13 ಕಾಂಗ್ರೇಸ, ಒಬ್ಬ ಬಿಎಸ್‌ಪಿ ( ಈ ಹಿಂದೆಯೆ ಕಾಂಗ್ರೇಸ ಸೇರ್ಪಡೆ), ಒಬ್ಬ ಬಿಜೆಪಿ ಸದಸ್ಯರ ಇವರು ಸಹ ಕಾಂಗ್ರೇಸ್ ಪಕ್ಷ-ಕ್ಕೆ ಸೇರ್ಪಡೆಗೊಂಡಿದ್ದು) 3 ಜೆಡಿಎಸ್ ಅಭ್ಯರ್ಥಿಗಳು ಸೇರಿ ಒಟ್ಟು 18 ಜನ ಸದಸ್ಯರು ಹಾಜರಿದ್ದರು. ಉಳಿದಂತೆ ಬಿಜೆಪಿಯ 5 ಜನ ಸದಸ್ಯರು, ಸಂಸದರು, ಶಾಸಕರು ಸೇರಿ ಒಟ್ಟು 7 ಜನ ಗೈರಾಗಿದ್ದಾರೆ.

ಕಾಂಗ್ರೇಸಪಕ್ಷದ ಕಟ್ಟಾಳು ಹಿರಿಯ ಧುರೀಣ ದೀಲೀಪಕುಮಾರ ಬಗದಲಕರ ಅವರು ಅಧ್ಯಕ್ಷರಾಗಿ ಮತ್ತು ನಸೀರ ಖಾನಸಾಬ್ ಅವರು ಉಪಾಧ್ಯಕ್ಷರಾಗಿ ಆಯ್ಕೆ ಘೋಷಣೆಯಾಗುತ್ತಿದಂತೆ ಹುಮಾನಾಬಾದನ ಮಾಜಿ ಶಾಸಕ ರಾಜಶೇಖರ ಪಾಟೀಲ ಅವರು ಚಿಟಗುಪ್ಪ ಪಟ್ಟಣಕ್ಕೆ ಆಗಮಿಸಿ ಇಬ್ಬರಿಗೂ ಸನ್ಮಾನಿಸಿ ಸಿಹಿ ಹಂಚಿ ಸಂಭ್ರಮಿಸಿದರು. ನಂತರ ಪತ್ರಕರ್ತರೊಂದಿಗೆ ಮಾತನಾಡಿ, ಹುಮನಾಬಾದ ಮಾದರಿಯಲ್ಲಿ ಚಿಟಗುಪ್ಪ ಪಟ್ಟಣದ ಅಭಿವೃದ್ಧಿಯಲ್ಲಿ ದಿವಂಗತ ಬಸವರಾಜ್ ಪಾಟೀಲ್ ಹಾಗೂ ಮಾಜಿ ಸಚಿವ ರಾಜಶೇಖರ ಪಾಟೀಲರ ಕೊಡುಗೆ ಅಪಾರವಾಗಿದೆ ಎಂದು ನೂತನ ಪುರಸಭೆಯ ಅಧ್ಯಕ್ಷ ದಿಲೀಪಕುಮಾರ್ ಬಗದಲಕರ್ ತಿಳಿಸಿದ್ದಾರೆ. ಹುಮನಾಬಾದ್ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡಿರುವ ಶ್ರೇಯಸ್ಸು, ಮಾಜಿ ಸಚಿವ ರಾಜಶೇಖರ್ ಪಾಟೀಲರಿಗೆ ಸಲ್ಲುತ್ತದೆ ಎಂದರು. ನನಗೆ ಪುರಸಭೆಯ ಮೂರನೇ ಬಾರಿಗೆ ಅಧ್ಯಕ್ಷರನ್ನಾಗಿ ಮಾಡಿರುವ ರಾಜಶೇಖರ ಪಾಟೀಲ್ ಅವರಿಗೆ ಕೃತಜ್ಞತೆಗಳು ಸಲ್ಲಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಸಿಪಿಐ ಶ್ರೀನಿವಾಸ ಅಲ್ಲಾಪೂರ, ಪಿಎಸ್ಐ ಬಾಷುಮಿಯಾ, ನಿಂಗಪ್ಪ ಮಣ್ಣೂರ ಸೇರಿದಂತೆ ಪುರಸಭೆ ಸದಸ್ಯರು, ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮಲ್ಲಿಕಾರ್ಜುನ್ ಪಾಟಿಲ್ ಹೇಳಿಕೆಗೆ ರಾಜಶೇಖರ್ ಪಾಟೀಲ್ ತಿರುಗೇಟು.

ಚಿಟಗುಪ್ಪ ಪುರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆ ಮುಗಿದ ನಂತರ ಮಾಜಿ ಸಚಿವ ರಾಜಶೇಖರ್ ಪಾಟೀಲ್ ಪತ್ರಕರ್ತರನ್ನು ಉದ್ದೇಶಿಸಿ ಮಾತನಾಡಿ, ಇತ್ತೀಚಿಗೆ ಪಟ್ಟಣದ ಮಲ್ಲಿಕಾರ್ಜುನ ಪಾಟಿಲ್ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರು, ಕಾಂಗ್ರೆಸ್ ಪಕ್ಷದವರು ಪದೇ ಪದೇ ಅಧ್ಯಕ್ಷ ಬದಲಾವಣೆ ಮಾಡಿ ಅಭಿವೃದ್ಧಿಗೆ ಕುಂಠಿತ ಮಾಡುತ್ತಿದ್ದಾರೆ ಎಂಬ ಹೇಳಿಕೆಗೆ ರಾಜಶೇಖರ್ ಪಾಟೀಲ್ ಪ್ರತಿಕ್ರಿಯೆ ನೀಡಿ ಬಿಜೆಪಿ ಅಧಿಕಾರದ ಅವಧಿಯಲ್ಲಿ ಮೂವರು ಸಿ.ಎಂ ಗಳನ್ನು ಬದಲಾಯಿಸಿದ್ದಾರೆ ಎಂದು ಟೀಕಿಸಿದರು.

# ರಿಯಾಯಿತಿ ದರದಲ್ಲಿ ಪುಸ್ತಕ ಲಭ್ಯ

ರಾಯಚೂರ ಜೂನ್ 11: ಪತ್ರಿಕೋದ್ಯಮಕ್ಕೆ ಹಾಗೂ ಮಾಧ್ಯಮ ಜಗತ್ತಿಗೆ ಸಂಬಂಧಿಸಿದ 40ಕ್ಕೂ ಹೆಚ್ಚು ಪುಸ್ತಕಗಳು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಿಯಾಯಿತಿ ದರದಲ್ಲಿ ಮಾರಾಟಕ್ಕೆ ಲಭ್ಯವಿದ್ದು, ಆಸಕ್ತರು, ವಿಶೇಷವಾಗಿ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯ-ಕ್ಷೆ ಆಯೇಶಾ ಖಾನಂ ಅವರು ತಿಳಿಸಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಕೆಲವು ದಶಕಗಳಿಂದ ಹಲವಾರು ಪುಸ್ತಕಗಳನ್ನು ಪ್ರಕಟಿಸಿದ್ದು, ಮಾರಾಟಕ್ಕೆ ಲಭ್ಯವಿವೆ. ಹಿರಿಯ ಪತ್ರಕರ್ತರು, ಪರಿಣ-ತರು ಬರೆದಿರುವ ಈ ಪುಸ್ತಕಗಳು ಯುವ ಪತ್ರಕರ್ತರು ಹಾಗೂ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಅತ್ಯಂತ ಉಪಯುಕ್ತವಾಗಿವೆ. ಈ ಪುಸ್ತಕಗಳ ಮೇಲೆ ಶೇ.20ರ ವರೆಗೆ ರಿಯಾಯಿತಿಯೂ ನೀಡಲಾಗುತ್ತಿದೆ.

ಆಸಕ್ತರು ಪುಸ್ತಕಗಳ ಕುರಿತ ಮಾಹಿತಿಯನ್ನು ಫೇ, ುಟಿ-ಣಚಿಡಿಚಿಟ ಮತ್ತು ಫೇಸ್ಬುಕ್ ಗಳಲ್ಲಿನ ಅಕಾಡೆಮಿಯ ಖಾತೆ @karmediaacademy/KarnatakaMediaAcad-emyಗಳಲ್ಲಿ ಪಡೆಯಬಹುದಾಗಿದೆ. ಆಸಕ್ತರು, ಪತ್ರಿಕೋದ್ಯಮ ಬೋಧಿಸುವ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ಗ್ರಂಥಾಲಯಗಳಿಗೆ ಸಗಟು ಖರೀದಿ ಮಾಡಲು ಬಯಸುವವರು ಅಕಾಡೆಮಿಯ ಕಚೇರಿಯನ್ನು ದೂರವಾಣಿ ಸಂಖ್ಯೆ 080-22860264 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಅಕಾಡೆಮಿಯ ಕಾರ್ಯದರ್ಶಿ ಸಹನಾ ಎಂ ಅವರು ತಿಳಿಸಿದ್ದಾರೆ.

## ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ಶ್ರೀಮತಿ ಪೆರುಗು ಶ್ರೀ ಸುಧಾ ಅವರು ಪ್ರಮಾಣ ವಚನ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜೂನ್ 11-ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ಶ್ರೀಮತಿ ಪೆರುಗು ಶ್ರೀ ಸುಧಾ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಇಂದು ರಾಜಭವನದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಗೌರವಾನ್ವಿತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಗೌರವಾನ್ವಿತ ನ್ಯಾಯಮೂರ್ತಿಗಳಿಗೆ ಪ್ರಮಾಣ ವಚನ ಭೋದಿಸಿದರು.

# ನಾರಾಯಣಸ್ವಾಮಿ, ರವಿಕುಮಾರ ಶಾಸಕತ್ವ ರದ್ದತಿಗೆ ಆಗ್ರಹಿಸಿ ದಸಂಸ ಪ್ರತಿಭಟನಾ ರ್‍ಯಾಲಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 11 :ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ನಿಂದಿಸಿರುವ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಕಲಬುರಗಿ ಜಿಲ್ಲಾಧಿಕಾರಿ ಫೌಜಿಯ ತರನ್ನುಮ್ ವಿರುದ್ಧ ಅವಹೇಳನಕಾರಿ ಹೇಳಿಕೆ ಕೊಟ್ಟಿರುವ ಎಂಎಲ್‌ಸಿ ಎನ್. ರವಿಕುಮಾರ ಅವರ ಶಾಸಕತ್ವರದ್ದುಗೊಳಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಹಾಗೂ ನಾಗರಿಕ ಹೋರಾಟ ಸಮಿತಿ ಕಾರ್ಯಕರ್ತರು ನಗರದಲ್ಲಿ ಮಂಗಳವಾರ ಪ್ರತಿಭಟನಾ ರ್‍ಯಾಲಿ ನಡೆಸಿದರು. ನಗರದ ಶಹಾಗಂಜ್‌ನಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಭವನದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ರ್‍ಯಾಲಿ ನಡೆಸಿ, ರಾಜ್ಯಪಾಲರ ಹೆಸರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗೆ ಸಲ್ಲಿಸಿದರು. ರ್‍ಯಾಲಿಯುದ್ದಕ್ಕೂ ನಾರಾಯಣಸ್ವಾಮಿ,ರವಿಕುಮಾರ, ಬಿಜೆಪಿ ಹಾಗೂ ಆರ್‌ಎಸ್‌ಎಸ್ ವಿರುದ್ಧ ಘೋಷಣೆಗಳನ್ನು ಹಾಕಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ನಾಯಿಗೆ ಹೋಲಿಕೆ ಮಾಡಿ ಸಾರ್ವಜನಿಕವಾಗಿ ಅವರ ವ್ಯಕ್ತಿತ್ವಕ್ಕೆ ಧಕ್ಕೆ ತಂದಿರುವ ಮನುವಾದಿ ನಾರಾಯಣಸ್ವಾಮಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲು ಸಮುದಾಯ ಚಿಂತಿಸುತ್ತಿದೆ. ಸಂವಿಧಾನಬದ್ಧ ಹುದ್ದೆಗೆ ಚ್ಯುತಿ ತರುವ ರೀತಿಯಲ್ಲಿ ನಡೆದುಕೊಂಡಿರುವ ನಾರಾಯಣಸ್ವಾಮಿ ಅವರನ್ನು ಕೂಡಲೇ ವಿರೋಧ ಪಕ್ಷದ ನಾಯಕನ ಸ್ಥಾನದಿಂದ ತೆಗೆದು, ಅವರ ಸದಸ್ಯತ್ವ ರದ್ದುಗೊಳಿಸಬೇಕು ಎಂದು ಒತ್ತಾಯಿಸಿದರು. ಕಲಬುರಗಿ ಜಿಲ್ಲಾಧಿಕಾರಿ ಪಾಕಿಸ್ತಾನದಿಂದ ಬಂದವರಂತೆ ಕಾಣುತ್ತದೆ ಎಂದು ಅಗೌರವದಿಂದ ಮಾತನಾಡಿರುವ ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಎನ್. ರವಿಕುಮಾರ ಹೇಳಿಕೆ ಖಂಡನಾರ್ಹವಾದುದು. ಈಗಾಗಲೇ ಅವರನ್ನು ಕ್ಷಮೆಯಾಚಿಸುವಂತೆ ಹೈಕೋರ್ಟ್ ತಾಕೀತು ಮಾಡಿದೆ. ಸಂವಿಧಾನಾತ್ಮಕ ಹುದ್ದೆಯಲ್ಲಿರುವ ವ್ಯಕ್ತಿ ಇಂತಹ ಹೇಳಿಕೆ ಕೊಟ್ಟಿರುವುದು ಸರಿಯಲ್ಲ. ಕೂಡಲೇ ಅವರನ್ನು ಆ ಸ್ಥಾನದಿಂದ ವಜಾಗೊಳಿಸಬೇಕೆಂದು ಆಗ್ರಹಿಸಿದರು. ಸದ್ಯ ಕರ್ನಾಟಕದ ರಾಜಕಾರಣದಲ್ಲಿ ಉತ್ತಮವಾದ ಪ್ರಗತಿಪರ ವಿಚಾರಗಳು, ಜೀವಪರ ಚಿಂತನೆಯೊಂದಿಗೆ ಪ್ರಿಯಾಂಕ್ ಖರ್ಗೆ ಬೆಳೆಯುತ್ತಿದ್ದಾರೆ. ಮನುವಾದಿ ಬಿಜೆಪಿ,ಆರ್‌ಎಸ್‌ಎಸ್‌ನವರಿಗೆ ವಿಧಾನಸೌಧದ ಒಳಗೆ ಹಾಗೂ ಹೊರಗೆ ಸಿಂಹಸ್ವಪ್ನರಾಗಿದ್ದಾರೆ. ಅವರ ಸೈದ್ಧಾಂತಿಕ ಪ್ರಶ್ನೆಗಳಿಗೆ ಉತ್ತರ ಕೊಡಲಾಗದೆ ಅವರ ವೈಯಕ್ತಿಕ ನಿಂದನೆಗೆ ಇಳಿದಿದ್ದಾರೆ. ಇದು ನಾಚಿಕೆಗೇಡಿನ ಸಂಗತಿ ಎಂದರು. ಬಿಜೆಪಿ,ಆರ್‌ಎಸ್‌ಎಸ್‌ಗೆ ತಮ್ಮ ಸ್ವಾಭಿಮಾನವನ್ನು ಅಡವಿಟ್ಟು, ಮಾನಸಿಕ ಗುಲಾಮಗಿರಿಗೆ ಒಳಗಾಗಿ ಛಲವಾದಿ ನಾರಾಯಣಸ್ವಾಮಿ ಪ್ರಿಯಾಂಕ್ ಖರ್ಗೆ ವಿರುದ್ಧ ಇಲ್ಲಸಲ್ಲದ ಹೇಳಿಕೆ ಕೊಡುತ್ತಿದ್ದಾರೆ. ಇವರಿಗೆ ಸಮುದಾಯ ಎಂದೂ ಕ್ಷಮಿಸುವುದಿಲ್ಲ. ಇವರ ಮನೆಹಾಳು ನೀಚ ಪ್ರವೃತ್ತಿ ಖಂಡನಾರ್ಹವಾದುದು ಎಂದು ಟೀಕಿಸಿದರು. ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ, ಜಿಲ್ಲಾ ಸಂಚಾಲಕ ಅರುಣ ಪಟೇಲ್, ಜಿಲ್ಲಾ ಸಂಘಟನಾ ಸಂಚಾಲಕ ರಾಜಕುಮಾರ ವಾಘಮಾರೆ, ದಲಿತ ಕಲಾ ಮಂಡಳಿ ಜಿಲ್ಲಾ ಸಂಚಾಲಕರು ಶಿವರಾಜ ಪಡಪಳ್ಳಿ, ಜಿಲ್ಲಾ ಸಂಘಟನಾ ಸಂಚಾಲಕ ಅಶೋಕ ಗಾಯಕವಾಡ,ಮುಖಂಡರಾದ ವಿಠ್ಠಲದಾಸ ಪ್ಯಾಗೆ, ರಮೇಶ ಉಮ್ಮಾಪೂರೆ,ವಾಮನ ಮೈಸಲಗೆ, ರಮೇಶ ಬೆಲ್ದಾರ, ಸತೀಶ ರತ್ನಾಕರ್, ಝರೆಪ್ಪ ವರ್ಮಾ, ಗೋವಿಂದರಾವ್, ಶಿರೋಮಣಿ ಹಲಗೆ, ರಾಹುಲ ಹಾಲಹಿಪ್ಪರ್ಗಾ, ವಿನೋದ ಬಂದಗೆ, ವಿಜಯಕುಮಾರ ಭಾವಿಕಟ್ಟೆ, ಪಂಡಿತರಾವ್ ಚಿದ್ರಿ, ಅಬ್ದುಲ್ ಮನ್ನಾನ್ ಸೇಠ್, ಬಾಬು ಟೈಗರ್, ಮಹೇಶ ಗೋರನಾಳಕರ್, ವಿನಯ್ ಮಾಳಗೆ, ಮಲ್ಲಿಕಾರ್ಜುನ ಮಹೇಂದ್ರಕುಮಾರ, ದಶರಥ ಗುರು, ಅಶೋಕ ಗಾಯಕವಾಡ,

ಸುರೇಶ ಮೊರೆ, ಅಭಿ ಕಾಳೆ, ಶ್ರೀಧರ ಸೋಮನೋರ್, ಗೌತಮ ಮುತ್ತಂಗಿಕರ್, ರಾಹುಲ್ ಹಾಲೇಪೂರ್ಗಿಕರ್ ಮತ್ತಿತರರು ಪಾಲ್ಗೊಂಡಿದ್ದರು.

# ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಸಭೆ: ಸಂಘಟನೆ ಬಲಪಡಿಸುವಿಕೆ, ಪತ್ರಿಕಾ ದಿನಾಚರಣೆ, ಸದಸ್ಯತ್ವ ಅಭಿಯಾನಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.11: ಬುಧವಾರ ಬೀದರ್ ಜಿಲ್ಲಾ ಘಟಕದ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಪತ್ರಿಕಾ ಭವನದಲ್ಲಿ ಇಂದು ನಡೆದು ಸದಸ್ಯತ್ವ ನವೀಕರಣ ಮತ್ತು ಸಂಘಟನೆ ಬಗ್ಗೆ ಚರ್ಚಿಸಲಾಯಿತು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳಸಂಪಾದಕರಸಂಘದ ಜಿಲ್ಲಾ ಘಟಕದ ವತಿಯಿಂದ ಇದುವರೆಗೆ ಕೈಗೊಂಡಿರುವ ಕೆಲಸ ಕಾರ್ಯಗಳ ಬಗ್ಗೆ ಸಭೆಯಲ್ಲಿ ಸಂಘದ ಅಧ್ಯಕ್ಷ ವಿಜಯಕುಮಾರಪಾಟೀಲಅವರು ಸುದೀರ್ಘವಾಗಿ ವಿವರಿಸಿದರು. ಕೆಕೆಆರ್‌ಡಿಬಿಯಿಂದ ಪತ್ರಿಕೆಗಳಿಗೆ ಜಾಹೀರಾತು ಪಡೆಯಲು ಮಾಡಿರುವ ಪ್ರಯತ್ನ ಸ್ಥಳೀಯ ಪತ್ರಿಕೆಗಳಿಗೆ ಜಾಹೀರಾತು ಒದಗಿಸಿರುವ ಬಗ್ಗೆ ಟೆಂಡರ್ ಜಾಹೀರಾತುಗಳನ್ನು ವಾರ್ತಾ ಇಲಾಖೆ ಮೂಲಕ ನೀಡಬೇಕೆಂಬ ಸಿ ಇ ಓ ಆದೇಶ ಮತ್ತು ಎಲ್ಲಾ ತಾಲೂಕ ಪಂಚಾಯತ್ ಪಿ ಡಿ ಓ ಗಳ ಆದೇಶ, ಭೂಸ್ವಾಧೀನ ಪೆಂಡಿಂಗ್ ಬಿಲ್ಲುಗಳು ಇಲಿಯವರಿಗೆ ಬೆಂಗಳೂರಿನ ಕರ್ನಾಟಕ ನೀರಾವರಿ ನಿಗಮ ನಿಯಮಿತ ಎಂ ಡಿ ಅವರಿಂದ ಹೊಸ ಆದೇಶ ಹೊರಡಿಸಲು ಸಿದ್ಧವಾಗಿದೆ ಎಂಬ ಮಾಹಿತಿ ಸಭೆಗೆ ತಿಳಿಸಲಾಯಿತು.

ನಮ್ಮ ಸಂಘದ ಮನವಿ ಪತ್ರದ ಮೇಲೆ ಪೊಲೀಸ ವರಿಷ್ಠಾಧಿಕಾರಿಗಳು ಇತ್ತೀಚಿಗೆ ನೀಡಿರುವ ಐಡಿ ಕಾರ್ಡ್ಗಳ ವಿತರಣೆ ನಮ್ಮ ಸಂಘದ ಹೆಮ್ಮೆಯ ಕೆಲಸಗಳಲ್ಲಿ ಒಂದಾಗಿದೆ.

ಬೇರೆ ಸಂಘಟನೆಯಿಂದ ನಮ್ಮ ಸಂಘದ ಸದಸ್ಯರುಗಳಿಗೆ, ಪದಾಧಿಕಾರಿಗಳಿಗೆ ಬೆದರಿಕೆ ಹಾಗೂ ಸದಸ್ಯತ್ವಗೊಂದಲದ ಬಗ್ಗೆ ಮಾಡುತ್ತಿರುವ ವಿಚಾರ ಸಭೆಯಲ್ಲಿ ವ್ಯಾಪಕವಾಗಿ ಚರ್ಚಿಸಲಾಯಿತು. ಇದಕ್ಕೆ ಸಭೆಯಲ್ಲಿ ಉಪಸ್ಥಿತರಿದ್ದ ಪ್ರಾದೇಶಿಕ ಪತ್ರಿಕೆಗಳ ಅಧ್ಯಕ್ಷ ಬಾಬು ವಾಲಿಯವರು ಮಾತನಾಡಿ ಈ ಸಮಸ್ಯೆ ಬಗೆಹರಿಸೋಣ ಎಲ್ಲರೂ ಕೂಡಿ ಹೋಗೋಣ ಎಂಬ ವಿಚಾರ ವ್ಯಕ್ತಪಡಿಸಿದರು.

ಇದಕ್ಕೆ ಇನ್ನೊಬ್ಬರು ಹಿರಿಯ ಪತ್ರಕರ್ತರಾದ ಮಾಳಪ್ಪ ಅಡಸಾರೆ ಸಹ ಈ ಸಮಸ್ಯೆ ದೊಡ್ಡದಲ್ಲ ಈ ತರಹ ಯಾರೇ ಮಾಡಿದರು ಅದು ಒಪ್ಪುವಂತದ್ದಲ್ಲ ಇದನ್ನು ಖಂಡಿಸಿ ಸರಿ ಮಾಡಿಸೋಣ ಎಂದು ತಿಳಿಸಿದರು.

ಇಂಥ ಕೆಲಸ ಆ ಸಂಘದ ಕಾರ್ಯದರ್ಶಿಗಳಿಂದ ನಡೆಯುತ್ತಿದೆ ಇದು ನಿಲ್ಲಬೇಕೆಂದು ಮತ್ತೊಬ್ಬ ಹಿರಿಯ ಹಾಗೂ ಕೆಡಬ್ಲ್ಯೂಜೆ ಮಾಜಿ ಅಧ್ಯಕ್ಷ ಅಶೋಕ್ ಕುಮಾರ್ ಕರಂಜಿ ತಿಳಿಸಿದರು. ಸಂಘಟನೆ ಬಲವಾಗಿ ಬೆಳೆಯಬೇಕು ಸಂಪಾದಕರ ಸಂಘ ಬಲಿಷ್ಠಗೊಳಿಸಬೇಕು ಇದರಲ್ಲಿ ಎರಡು ಮಾತಿಲ್ಲ ಎಂದು ಸಂಘಟನಾ ಕಾರ್ಯದರ್ಶಿ ರಮೇಶ್ ರೆಡ್ಡಿ, ಸುನಿಲ್ ಕುಲಕರ್ಣಿ, ಪ್ರದೀಪ ಬಿರಾದಾರ, ಬಸವರಾಜ ಪವಾರ, ಅಜಯ್ ಭೋಸ್ಲೆ, ನಂದಕುಮಾರ, ಅಬ್ದುಲ್ ಖದೀರ್ ಅವರುಗಳು ಸಭೆಯಲ್ಲಿ ಎಲ್ಲರೂ ಒಕ್ಕೊರಲಿನಿಂದ ತಿಳಿಸಿದರು.

ಪತ್ರಿಕಾ ದಿನಾಚರಣೆ ಬಗ್ಗೆ ಚರ್ಚೆಯಾಗಿ ಸಂಪಾದಕರ ಸಂಘದಿಂದ ನಡೆಸುವ ಬಗ್ಗೆ ಹಾಗೂ ಮೂರು ಸಂಘಗಳಿಂದ ಒಟ್ಟಿಗೆ ನಡೆಸುವ ಬಗ್ಗೆ ಕೆಲವರು ಸಭೆಯಲ್ಲಿ ಸಲಹೆ ನೀಡಿದರು. ಹೀಗಾಗಿ ಮುಂದಿನ ಸಭೆಯಲ್ಲಿ ತೀರ್ಮಾನಿಸಲು ನಿರ್ಧರಿಸಲಾಯಿತು. ಮೂರು ಸಂಘದ ಜಂಟಿಯಾಗಿ ಹಾಗೂ ಮೂರು ಅಧ್ಯಕ್ಷರು ಒಗ್ಗಟ್ಟಾಗಿ ದಿನಾಚರಣೆ ಆಚರಿಸಬೇಕು ತಿಳಿಸಿದರು. ಯಾವುದಕ್ಕೂ ಇನ್ನೊಂದು ಸಭೆಯಲ್ಲಿ ನಿರ್ಧಾರ ಮಾಡೋಣ ಎಂದು ಸಭೆಗೆ ತಿಳಿಸಲಾಯಿತು. ಮಾಧ್ಯಮ ಪಟ್ಟಿಯಲ್ಲಿರುವ ಹಾಗೂ ಮಾನ್ಯತೆ ಪಡೆದ ಪತ್ರಿಕರ್ತರ ಕಷ್ಟಸುಖ ಹಾಗೂ ಜಾಹಿರಾತು ಬಗ್ಗೆ ನಮ್ಮ ಸಂಘ ಸದಾ ಹೋರಾಡಲಿದೆ ಹಾಗೂ ಈ ಸವಲತ್ತಿಗಾಗಿ ನಮ್ಮ ಸಂಘ ಏಕಾಂಗಿಯಾಗಿ ಮನವಿಪತ್ರಗಳನ್ನು ಮುಂದುವರಿಯುತ್ತದೆ ಎಂಬ ವಿಚಾರ ಸಂಘದ ಸಭೆಯಲ್ಲಿ ಚರ್ಚೆಗೆ ಬಂತು ಎಲ್ಲರೂ ಒಪ್ಪಿಗೆಯು ದೊರೆಯಿತು.

ಪ್ರಮುಖ ವಿಷಯವಾಗಿ ಸಂಘಕ್ಕೆ ಸದಸ್ಯರಾಗಲು ಮೊದಲು ಬಾಬು ವಾಲಿಯವರು ಸದಸ್ಯತ್ವ ಪಡೆದುಕೊಂಡರು. ನಂತರ ಸಂಘದ ರಾಜ್ಯ ನಾಮನಿರ್ದೇಶಿತ ಸದಸ್ಯರಾದ ಮಾಜಿ ಕೆ ಯು ಡಬ್ಲ್ಯುಜೆ ಬೀದರ್ ಅಧ್ಯಕ್ಷ ಅಶೋಕ್ ಕುಮಾರ್ ಕರಂಜಿ, ಮಾಜಿ ಕೆ ಯು ಡಬ್ಲ್ಯೂ ಜೆ ಅಧ್ಯಕ್ಷರಾದ ಮಾಳಪ್ಪ ಅಡಸಾರೆ ಹಾಗೂ ಬೀದರ್ ಟೈಮ್ಸ್ ಪತ್ರಿಕೆ ಸಂಪಾದಕರಾದ ಜಾರ್ಜ್ ಫರ್ನಾಂಡಿಸ್ ಅವರುಗಳು ಸಾಂಕೇತಿಕವಾಗಿ ಇಂದು ಸದಸ್ಯತ್ವ ಪಡೆಯುವುದರ ಮೂಲಕ ಸದಸ್ಯತ್ವ ಅಭಿಯಾನ ಮತ್ತು ನವೀಕರಣಕ್ಕೆ ಚಾಲನೆ ದೊರೆಯಿತು. ಇಂದಿನ ಸಭೆಗೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ವಿಜಯಕುಮಾರ್ ಪಾಟೀಲ, ಪ್ರಾದೇಶಿಕ ಪತ್ರಿಕೆಗಳ ಅಧ್ಯಕ್ಷ ಬಾಬು ವಾಲಿ, ರಾಜ್ಯ ಸಂಘಟನಾ ಕಾರ್ಯದರ್ಶಿ ರಮೇಶ್ ರೆಡ್ಡಿ, ರಾಜ್ಯ ಪ್ರತಿನಿಧಿ ಹಾಗೂ ಕೆ ಯು ಡಬ್ಲ್ಯೂ ಜೆ ಮಾಜಿ ಜಿಲ್ಲಾಧ್ಯಕ್ಷ ಅಶೋಕಕುಮಾರ್ ಕರಂಜಿ, ರಾಜ್ಯ ಪ್ರತಿನಿಧಿಗಳಾಗಿರುವ ಮಾಳಪ್ಪ ಅಡಸಾರೆ, ಅಜಯ್ ಬೋಸ್ಲೆ, ಬಸವರಾಜ್ ಪವಾರ್, ಉಪಾಧ್ಯಕ್ಷರಾದ ರಾಮಚಂದ್ರ ಬೋಸ್ಲೆ, ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ್ ಚೌದರಿ, ಕಾರ್ಯದರ್ಶಿ ಪ್ರದೀಪ್ ಬಿರಾದರ್, ಜಂಟಿ ಕಾರ್ಯದರ್ಶಿ ಅಬ್ದುಲ್ ಖದೀರ್, ಶರತ್‌ಕುಮಾರ್ ಘಂಟೆ, ಸಹ ಕಾರ್ಯದರ್ಶಿಗಳಾದ ಸುನಿಲ್ ಕುಲಕರ್ಣಿ, ಅಂಬರೀಶ್ ಚಿದ್ರೆ, ಸ್ವಾಮಿದಾಸ್, ಕಾರ್ಯಕಾರಿ ಸಮಿತಿ ಸದಸ್ಯ ಜೈ ಕುಮಾರ್ ಮತ್ತು ಸಂಪಾದಕರಾದ ನಂದಕುಮಾರ್, ಜಾರ್ಜ್ ಫರ್ನಾಂಡಿಸ್, ಉದಯಕುಮಾರ ಸೋನಿ ಇವರುಗಳು ಸಭೆಯಲ್ಲಿ ಭಾಗವಹಿಸಿದರು.

# ಲೋಕ ಕಲ್ಯಾಣಕ್ಕಾಗಿ ಶ್ರೀ ಭದ್ರೇಶ್ವರನಿಗೆ ವಿಶೇಷ ಪೂಜೆ ಪ್ರಾರ್ಥನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 11 : ಬೀದರ್ ತಾಲ್ಲೂಕಿನ ಸುಕ್ಷೇತ್ರ ಬಾವಗಿಗ್ರಾಮದ ಆರಾಧ್ಯ ದೈವ ಪವಾಡ ಪುರುಷ ಶೀ ಗುರು ಭದ್ರೇಶ್ವರರ ಕರ್ತೃ ಗದ್ದುಗೆ ವಿಶೇಷ ಪೂಜೆ ಮಾಡಲಾಯಿತು. ಶ್ರೀ ಭದ್ರೇಶ್ವರ ಸಂಸ್ಥಾನದ ವೇದಮೂರ್ತಿ ಶ್ರೀ ಶಾಂತಕುಮಾರ್ ಸ್ವಾಮಿ ಲೋಕದ ಕಲ್ಯಾಣಕ್ಕಾಗಿ ವಿಶೇಷವಾಗಿ ಪೂಜೆ ಸಲ್ಲಿಸಿ ಪ್ರಾರ್ಥನೆ ಸಲ್ಲಿಸಿದರು. ಹಿಂದಿನ ವರ್ಷಕ್ಕಿಂತ ಈ ವರುಷ ಮಳೆ ಹೆಚ್ಚಿನ

ಪ್ರಮಾಣದಲ್ಲಿ ಆಗಿ ರೈತರು ಬಿತ್ತಿದ ಬೆಳೆಗಳು ಸಮೃದ್ಧವಾಗಿ ಬೆಳೆಯಲಿ, ಯಾವುದೇ ರೈತರು ಸಂಕಷ್ಟಕ್ಕೆ ಒಳಗಾಗದಿರಲಿ ಲೋಕದ ಸರ್ವ ಜನರು ಸಧೃಡ ಆರೋಗ್ಯವಂತರಾಗಿ ಸಿರಿ–ಸಂಪತ್ತಿನಿಂದ ಸದ್ಭರಿತವಾಗಿ ಜೀವನ ನಡೆಸಲಿ, ಭಗವಂತ ಸರ್ವರ ಮೇಲೆ ಕೃಪೆಮಾಡಿ ಲೋಕದ ಕಲ್ಯಾಣ ಮಾಡಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಭದ್ರಯ್ಯ ಸ್ವಾಮಿ ರುದ್ರಮುನಿ ದೇವರು ಚೆನಮಲಪ್ಪ ಹಜರಗಿ ಶೆರಣಪ್ಪ ಮುದ ರೇವಣಪ್ಪ ಭದ್ರಣ ರಾಚಪ್ಪ ಭಾಲ್ಕೇ ರಾಜಕುಮಾರ ಮಡಿವಾಳ ಬಸವರಾಜ ಖವದಿ ನಾಗಶೆಟ್ಟಿ ಅಳ್ಳೀ ಸಂಗಮೇಶ ಹಜರಿಗಿ ಮಡೆಪ್ಪ ಹಜರಗಿ ಸಂತೋಷ ಜಗದಾಳೆ ಜಗನ್ನಾಥ ಚಿದ್ರಿ ಲೋಕೇಶ ಕನಶೆಟ್ಟಿ ಸಿದ್ದರೋಡ ಭಾಲ್ಕೇ ನಾಗೇಶ್ ಕೊಳಾರ ಸಕಲ ಸದ್ಭಕ್ತರು ಇದ್ದುರು.

# ಇಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ಬೀದರ, ಜೂ.11 : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜೂನ್.12 ರಂದು ಬೆಳಿಗ್ಗೆ 10.30ಕ್ಕೆ ರಂಗಮಂದಿರದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ನಡೆಯಲಿದೆ. ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಜಾಗೃತಿ ಜಾಥಾಗೆ ಚಾಲನೆ ನೀಡಲಿದ್ದಾರೆ.

ನ್ಯಾಯವಾದಿ ಅಂಜನಾ ಕುಲಕರ್ಣಿ ಅವರು ಉಪನ್ಯಾಸ ನಡೆಸಿಕೊಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶೀಧರ ಕೋಸಂಬೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸನ್ಮುಖಯ್ಯಾ ಬಿ.ಸ್ವಾಮಿ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಧನರಾಜ ಬಿರಾದಾರ, ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ ಲಕ್ಷ್ಮಣ ಕುಳಲಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆ.

# ವಾಯುನೆಲೆಯ ೧೦೦ ಮೀಟರ್‌ನಲ್ಲಿ ಕಟ್ಟಡ ನಿರ್ಮಾಣ ನಿರ್ಭಂಧ

ಬೀದರ, ಜೂ.11 : ಬೀದರ ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ವಾಯುನೆಲೆಯ ಬಾಂಬ್‌ಡಂಪ‌ನ ಗಡಿಯಿಂದ 100 ಮೀಟರ ಮಿತಿಯೊಳಗೆ ಕಟ್ಟಡ ಹಾಗೂ ಇತರೇ ರಚನೆಗಳ ನಿರ್ಮಾಣ ಹಾಗೂ ಮರಗಳನ್ನು ನೆಡುವುದರ ಮೇಲೆ ಇದ್ದ ನಿರ್ಭಂಧದ ಮಿತಿಯನ್ನು 900 ಮೀಗಳಿಗೆ ವಿಸ್ತರಿಸಲಾಗಿದೆಯೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಸಮೀಕ್ಷೆ ಅವಧಿ ವಿಸ್ತರಣೆ

ಬೀದರ, ಜೂ.11: ನ್ಯಾಯಮೂರ್ತಿಗಳಾದ ಗೌರವಾನ್ವಿತ ನಾಗಮೋಹನ್‌ದಾಸ್, ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಸಮೀಕ್ಷೆ ದಿನಾಂಕ: 02–06–2025 ರಿಂದ 08–06–2025 ರವರೆಗೆ ಕೇವಲ ವಿಶೇಷ ಶಿಬಿರಗಳು ಮತ್ತು ಆನ್‌ಲೈನ್ ಲಿಂಕ್‌ನಲ್ಲಿ ಸ್ವಯಂ ಘೋಷಣೆ ಮಾಡಿಕೊಳ್ಳುವುದರ ಮೂಲಕ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಆದರೆ ದಿನಾಂಕ: 06–06–2025 ರವರೆಗೆ ರಾಜ್ಯಾದ್ಯಂತ ಸಮೀಕ್ಷೆಯಲ್ಲಿ ಶೇ. 90 ರಷ್ಟು ಪ್ರಗತಿಯಾಗಿದ್ದು, ಸಮೀಕ್ಷಾ ಕಾರ್ಯದಲ್ಲಿ ಶೇ.100 ರಷ್ಟು ಪ್ರಗತಿಸಾಧಿಸಬೇಕಾಗಿರುವುದರಿಂದ ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವ ಜಿಲ್ಲೆಯ ಪರಿಶಿಷ್ಟ ಜಾತಿ ಕುಟುಂಬದವರಿಗೆ 22–06–2025 ರವರೆಗೆ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರಣ ನಾಗರೀಕಸೇವಾ ಕೇಂದ್ರಗಳಾದ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ್ ಒನ್ ಕೇಂದ್ರಗಳು, ಬಾಪೂಜಿ ಸೇವಾ ಕೇಂದ್ರಗಳಲ್ಲಿಯೂ ಸಹ ಸಮೀಕ್ಷೆಗೆ ಅವಕಾಶವನ್ನು ಕಲ್ಪಿಸಲಾಗುವುದು. ಬಿ.ಬಿ.ಎಂ.ಪಿ. ವ್ಯಾಪ್ತಿಯ 198 ಬಿ.ಬಿ.ಎಂ.ಪಿ.ವಾರ್ಡ ಕಚೇರಿಗಳಲ್ಲಿ ವ್ಯವಸ್ಥೆ ಮಾಡಿಕೊಂಡಿರುವ ಪ್ರತ್ಯೇಕವಾದ ಶಿಬಿರಗಳು. ಇದಲ್ಲದೇ ಆನ್‌ಲೈನ್ ಃಣಣಠಿ:// ಛಿಜಜಣಟಜಛಿಣಚಿಣಡಿಜಥಿ. ಞಚಿಡಿಟಿಚಿಣಚಿಞಚಿ.ರಠ.ಟಿ/ ಜಟಜಿಜಜಛಿಟಚಿಡಿಚಿಣಟಿಠಟಿ ಲಿಂಕ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳುವ ವಿಧಾನವನ್ನು ದಿನಾಂಕ: 22–06–2025 ರವರೆಗೆ ವಿಸ್ತರಿಸಲಾಗಿದೆಂದು ಅವರು ತಿಳಿಸಿದ್ದಾರೆ.

# ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಿಯಾಯಿತಿ ದರದಲ್ಲಿ ಪುಸ್ತಕ ಲಭ್ಯ

ಬೀದರ,ಜೂ.11: ಪತ್ರಿಕೋದ್ಯಮಕ್ಕೆ ಹಾಗೂ ಮಾಧ್ಯಮ ಜಗತ್ತಿಗೆ ಸಂಬಂಧಿಸಿದ 40 ಕ್ಕೂ ಹೆಚ್ಚು ಪುಸ್ತಕಗಳು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಿಯಾಯಿತಿ ದರದಲ್ಲಿ ಮಾರಾಟಕ್ಕೆ ಲಭ್ಯವಿದ್ದು, ಆಸಕ್ತರು, ವಿಶೇಷವಾಗಿ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಅವರು ತಿಳಿಸಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯು ಕೆಲವು ದಶಕಗಳಿಂದ ಹಲವಾರು ಪುಸ್ತಕಗಳನ್ನು ಪ್ರಕಟಿಸಿದ್ದು, ಮಾರಾಟಕ್ಕೆ ಲಭ್ಯವಿವೆ. ಹಿರಿಯ ಪತ್ರಕರ್ತರು, ಪರಿಣತರು ಬರೆದಿರುವ ಈ ಪುಸ್ತಕಗಳು ಯುವ ಪತ್ರಕರ್ತರು ಹಾಗೂ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಅತ್ಯಂತ ಉಪಯುಕ್ತವಾಗಿವೆ. ಈ ಪುಸ್ತಕಗಳ ಮೇಲೆ ಶೇ. 20 ರವರೆಗೆ ರಿಯಾಯಿತಿಯೂ ನೀಡಲಾಗುತ್ತಿದೆ.

ಆಸಕ್ತರು ಪುಸ್ತಕಗಳ ಕುರಿತ ಮಾಹಿತಿಯನ್ನು ಫಿ,ಎಟಿಣಚಿ–ರಡಿಚಿಟ ಮತ್ತು ಫೇಸ್ಬುಕ್‌ಗಳಲ್ಲಿನ ಅಕಾಡೆಮಿಯ ಖಾತೆ @ karmediaacademy/ Karnataka Media Academy ಗಳಲ್ಲಿ ಪಡೆಯಬಹುದಾಗಿದೆ

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ವಿವಿಧ

# ಸ್ಪರ್ಧೆಗಳನ್ನು ಆಯೋಜಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂನ್.11–ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕಲಬುರಗಿ ಪ್ರಾದೇಶಿಕ ಕಚೇರಿ, ಜಿಲ್ಲಾ ವಿಜ್ಞಾನ ಕೇಂದ್ರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವುಗಳ ಸಹಯೋಗದೊಂದಿಗೆ "ಪ್ಲಾಸ್ಟಿಕ್ ಮಾಲಿನ್ಯವನ್ನು ಸೋಲಿಸುವ" ಎಂಬ ಘೋಷವಾಕ್ಯದೊಂದಿಗೆ ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಕಲಬುರಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ ಪರಿಸರ ಅಧಿಕಾರಿ ಸೋಮಶೇಖರ್ ಕೆ.ಎಂ. ಅವರು ಮಾತನಾಡಿ, ಕಲಬುರಗಿ ಮಹಾನಗರಪಾಲಿಕೆ ಅಧಿಕಾರಿ/ಸಿಬ್ಬಂದಿಗಳೊಂದಿಗೆ ಕಲಬುರಗಿ ನಗರ ವ್ಯಾಪ್ತಿಯಲ್ಲಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಮಾರಾಟ, ಸಂಗ್ರಹಣೆ, ವಿತರಣೆ ಮತ್ತು ಇತರೆ ಘಟಕಗಳಿಗೆ ಜಂಟಿ ತಪಾಸಣೆ ಮಾಡಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳನ್ನು ಜಪ್ತಿ ಮಾಡಿಕೊಂಡು ದಂಡವನ್ನು ವಿಧಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ಡಾ.ಎಸ್.ಆರ್ ಮೀಸೆ ಅವರು, "ಪ್ಲಾಸ್ಟಿಕ್ ಮಾಲಿನ್ಯವನ್ನು ಸೋಲಿಸುವ" ಘೋಷವಾಕ್ಯದ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ವಿಜ್ಞಾನ ಕೇಂದ್ರದ ಶಿಕ್ಷಣಾಧಿಕಾರಿ ಪೊನ್ನರಸನ್ ಅವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪರಿಸರ ದಿನಾಚರಣೆ ಅಂಗವಾಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಜೂನ್ 3 ಹಾಗೂ 4 ರಂದು ಪ್ರಬಂಧ ಸ್ಪರ್ಧೆ, ರೀಲ್ ಮಾಡುವ ಸ್ಪರ್ಧೆ, ಚಿತ್ರಕಲೆ, ಪ್ರಬಂಧ ಸ್ಪರ್ಧೆಗಳನ್ನು ಹಮ್ಮಿಕೊಂಡು ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಿಸಲಾಯಿತು.

5ನೇರಿಂದ10ನೇತರಗತಿಯವರೆಗಿನ ವಿದ್ಯಾರ್ಥಿಗಳಿಗೆ "ಪ್ಲಾಸ್ಟಿಕ್ ಮಾಲಿನ್ಯವನ್ನು ಸೋಲಿಸುವ" ಘೋಷವಾಕ್ಯದ ಬಗ್ಗೆ ಪ್ರಬಂಧ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಯಿತು. ಈ ಸ್ಪರ್ಧೆಯಲ್ಲಿ 5ನೇ ರಿಂದ 7ನೇ ತರಗತಿಯಲ್ಲಿ ವಿಜೇತ ವಿದ್ಯಾರ್ಥಿಗಳ ವಿವರ ಇಂತಿದೆ. ಚಂದ್ರಕಾಂತ ಪಾಟೀಲ ಸೆಂಟ್ರಲ್ ಸ್ಕೂಲ್‌ನ ವಿದ್ಯಾರ್ಥಿ ಶುಭಾ ಎಸ್. ಶಾಬಾದಿ–ಪ್ರಥಮ ಸ್ಥಾನ, ಶ್ರೀ ದಾಮೋದರ ರಘೋಜಿ ಶಾಲೆಯ ವಿದ್ಯಾರ್ಥಿ ವೈಷ್ಣವಿ ಗುರುರಾಜ ಎರಡನೇ ಸ್ಥಾನ ಹಾಗೂ ಸುಭಾಶ್ ಮೆಮೋರಿಯಲ್ ಶಾಲೆಯ ವಿದ್ಯಾರ್ಥಿ ಮದಿಹಾ ಮೆಹವಿಶ್ ಮೂರನೇ ಸ್ಥಾನ ಪಡೆದಿದ್ದಾರೆ. 8 ವಿವಿಧ ಶಾಲೆಯ ವಿದ್ಯಾರ್ಥಿಗಳಿಗೆ ಸಮಾಧಾನಕರ ಬಹುಮಾನವನ್ನು ಸಹ ನೀಡಲಾಗಿದೆ.

# ವಿಶ್ವ ಬಾಲಕಾರ್ಮಿಕ ವಿರೋಧಿ ದಿನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 11– ವಿಶ್ವಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಇದೇ 2025ರ ಜೂನ್ 12 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಮತ್ತು ತಾಲ್ಲೂಕಿನ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಪ್ರಮಾಣ ವಚನವನ್ನು ಸ್ವೀಕರಿಸುವಂತೆ ಯಾದಗಿರಿ ಜಿಲ್ಲಾ ಬಾಲಕಾರ್ಮಿಕ ಯೋಜನೆ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ.

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆಯನ್ನು ಯಾದಗಿರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆಯ ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಸಂ.1098/112 ಹಾಗೂ ಎಲ್ಲಾ ಇಲಾಖೆಗಳ ಸಹಯೋಗದಲ್ಲಿ ವಿಶ್ವಬಾಲಕಾರ್ಮಿಕ ಪದ್ಧತಿ ವಿರೋಧಿ ದಿನವನ್ನು ಅರ್ಥಪೂರ್ಣವಾಗಿ ಆಚರಿಸಬೇಕು.

ಪ್ರಮಾಣ ವಚನ ನಾನು ಸತ್ಯವಾಗಿ, ಪ್ರಮಾಣಿಕವಾಗಿ ಹಾಗೂ ಆತ್ಮಸಾಕ್ಷಿಯಾಗಿ ಪ್ರಮಾಣ ಮಾಡುವುದೇನೆಂದರೆ, ನಾನು ವಾಸಿಸುವ ಸುತ್ತ ಮುತ್ತಲಿನ ಪ್ರದೇಶ ಹಾಗೂ ನಾನು ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ಬಾಲಕಾರ್ಮಿಕ ಕಂಡುಬಂದಲ್ಲಿ ನೇಮಿಸಿಕೊಂಡ ಮಾಲೀಕರು ಹಾಗೂ ಪೋಷಕರಿಗೆ ತಿಳುವಳಿಕೆ ಹೇಳಿ ಮಗುವನ್ನು ಶಾಲೆಗೆ ಸೇರಿಸುತ್ತೇನೆ. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ತೊಡಗಿಸಿಕೊಂಡು ತಯಾರಿಸಲ್ಪಟ್ಟ ಯಾವುದೇ ವಸ್ತುವನ್ನು ಉಪಯೋಗಿಸುವುದಿಲ್ಲ ಮತ್ತು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಸೇವೆಯನ್ನು ಪಡೆಯುವುದಿಲ್ಲವೆಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನವಾದ ಇಂದು ಪ್ರಮಾಣ ಮಾಡುತ್ತೇನೆ.

ಬೆಂಗಳೂರು ಕಾರ್ಮಿಕ ಆಯುಕ್ತರು ಅವರ ನೀಡಿರುವ ಪತ್ರದ ನಿರ್ದೇಶನದಂತೆ ಜಿಲ್ಲೆಯ ಮತ್ತು ತಾಲ್ಲೂಕಿನ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಜಿಲ್ಲೆಯ ಎಲ್ಲಾ ಶಾಲಾ ಮತ್ತು ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಅವರು ಕೆಲಸ ನಿರ್ವಹಿಸುತ್ತಿರುವ ಸ್ಥಳಗಳಲ್ಲಿಯೇ ಒಟ್ಟಾಗಿ ಸೇರಿ ಪ್ರಮಾಣವಚನವನ್ನು ಸ್ವೀಕರಿಸಬೇಕು, ಕಾರ್ಯಕ್ರಮವನ್ನು ಕಡ್ಡಾಯವಾಗಿ ಆಯೋಜಿಸಿ, ಕಾರ್ಯಕ್ರಮದ ವರದಿಯನ್ನು ವೆಬ್‌ಸೈಟ್ scl-pyadagiri@yahoo.com ಗೆ ಜಿಲ್ಲಾ ಬಾಲಕಾರ್ಮಿಕ ಯೋಜನಾ ಕಛೇರಿಗೆ ಖುದ್ದಾಗಿ ಮಾಹಿತಿಯನ್ನು ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಧನ ಕುಟುಂಬಕ್ಕೆ ಸೂಕ್ತ ರಕ್ಷಣೆ : ನೀಡಿ ಯೋಧರ ಕ್ಷೇಮಾಭಿವೃದ್ಧಿ ಸಂಘ ಮನವಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ರಾಯಚೂರು ಜಿಲ್ಲೆಯಲ್ಲಿ ಮೇಲಿಂದ ಮೇಲೆ ಯೋಧರ ಮೇಲೆ ಯಾಗುತ್ತಿರುವ ದೌರ್ಜನ್ಯ, ಹಲ್ಲೆಗ ಳನ್ನು ತಡೆಗಟ್ಟಲು ಹಾಗೂ ತಾಲೂಕಿನ ಕಸಬಾಲಿಂಗಸುಗೂರಿನ ಸಿಆರಪಿ ಎಫ್ ಎಎಸ್ಐ ಯೋಧ ಚನ್ನಬಸಪ್ಪ ಅವರ ಮೇಲೆ ಹಲ್ಲೆ ಮಾಡಿ ಆರೋಪಿಗಳನ್ನು ಮಾಡುವಂತೆ ಮಾಜಿ ಹಾಗೂ ಹಾಲಿ ಅರೆಸೇನಾಪಡೆಗಳ ಯೋಧರ ಕ್ಷೇಮಾಭಿವೃದ್ಧಿ ಸಂಘದ ತಾಲೂಕ್ ಅಧ್ಯಕ್ಷ ಕೆ ಹನುಮಂತ ಕನ್ನಾಳ ನೇತೃತ್ವದಲ್ಲಿ ಯೋಧರು ಜಿಲ್ಲಾಧಿಕಾರಿಗೆ ಬರೆದ ಮನವಿ ಪತ್ರವನ್ನು ಸಹಾಯಕ ಆಯುಕ್ತ ಬಸವಣೆಪ್ಪ ಕಲಶೆಟ್ಟಿ ಅವರಿಗೆ ಸಲ್ಲಿಸಿ ದರು.

ಯೋಧನ ಅಕ್ಕನ ಜಮೀನಿನ ವಿಚಾರಕ್ಕೆ ಪಕ್ಕದಲಿರುವ ಜಮೀನ ಮಾಲೀಕ ಜಗಳವಾಡುತ್ತಿದ್ದು ಯೋಧ ಜಗಳವಾಡಬೇಡಿ ಅಂದು ಹೇಳಿದಕ್ಕೆ ಕಸಬಾ ಲಿಂಗಸುಗೂರಿನ ವರದೇಂದ್ರ ಲೇಔಟನಲ್ಲಿದ್ದಾಗ ಆರೋಪಿಗಳಾದ ಮಂಜುನಾಥ ಹಾಗೂ ಅಮರೇಶ ಯೋಧನಿಗೆ ಮಾರಣಾಂತಿಕ ಹಲ್ಲೆ ಮಾಡಿದ್ದು ಲಿಂಗಸುಗೂರ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಆರೋಪಿಗಳನ್ನು ಗಡಿ ಪಾರ ಮಾಡಬೇಕು, ಯೋಧನ ಕುಟುಂಬಕ್ಕೆ ಸೂಕ್ತ ರಕ್ಷಣೆ ನೀಡಬೇಕು ಎಂದು ಒತ್ತಾಯಿಸಿರುವರು. ಸಂದರ್ಭದಲ್ಲಿ ಪಂಪಣ್ಣ ಜಾವೂರ, ಕುಪ್ಪಣ್ಣ ಕುರಿ, ಸಲೀಂ, ವಿಶ್ವನಾಥ ನಾಯಕ, ಮಹಾಂತೇಶ ಹಿರೇಮಠ, ಪಂಪಯ್ಯ, ಮಾನಪ್ಪ ಬಡಿಗೇರ, ಯಲ್ಲಪ್ಪ ಗೂಗಿಹಾಳ, ಸಂ ಗಪ್ಪ, ಸಿದ್ದರಾಮ, ಆರ.ವಿ. ಪಾಟೀಲ ಇದ್ದರು.

ಜೂನ್ 21 ಕ್ಕೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

# ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.11–ಜೂನ್ 21 ರಂದು ನಡೆಯುವ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮ ಆಯೋಜಿಸಲಾಗಿದ್ದು, ಜಿಲ್ಲಾಮಟ್ಟದ ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬುಧುವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆಯುಷ್ ಇಲಾಖೆ, ಮಹಾವಿದ್ಯಾಲಯಗಳ ಪ್ರಾಂಶುಪಾಲರು ಮತ್ತು ವಿವಿಧ ಯೋಗ ಸಂಘಸಂಸ್ಥೆಗಳ ಸ ಂ ಯು ಕ್ತಾ ಶ್ರ ಯ ದ ಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಡೆಸಲಾಗುವುದು.

ಜೂನ್ 21ರಂದು ನಡೆಯುವ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ನಿರ್ಧರಿಸಲಾಯಿತು. ಜೂನ್ 21ರಂದು ಬೆಳಿಗ್ಗೆ 7.00 ಗಂಟೆಗೆ ಯೋಗ ಕಾರ್ಯಕ್ರಮ ಅರಂಭವಾಗಲಿದ್ದು, 7.45 ಗಂಟೆಯವರೆಗೆ ನಂತರ ವೇದಿಕೆ ಕಾರ್ಯಕ್ರಮ ಜರುಗಲಿದೆ ಎಂದರು. ಈ ವರ್ಷದ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ ಆಚರಿಸಲು ಕಾರ್ಯಕ್ರಮವನ್ನು ಯಶ್ವಸಿಗೊಳಿಸಲು ಸೂಚನೆ ನೀಡಿದರು. ಈ ಯೋಗ ದಿನಾಚರಣೆಯಲ್ಲಿ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು, ವಸತಿನಿಲಯದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಕ್ಕಳಿಗೆ ಕ್ರೀಡಾಂಗಣಕ್ಕೆ ಕರೆ ತರಲು ವಾಹನದ ವ್ಯವಸ್ಥೆ ಮಾಡಲು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೂರ್ಯಕಾಂತ ಮದಾನೆ ಹಾಗೂ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೂರೇಶ ಅಕ್ಕಣ್ಣ ಅವರಿಗೆ ಸೂಚನೆ ನೀಡಿದರು.

ಸಾಮಾಜಿಕ ಮಾದ್ಯಮಗಳು ಮತು ವಿಡಿಯೋಗಳ ಮೂಲಕ ಯೋಗ ದಿನಾಚರಣೆಯ ಕುರಿತು ಪ್ರಚಾರವನ್ನು ನೀಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಪ್ರತಿಯೊಬ್ಬ ಅಧಿಕಾರಿಯು ಪ್ರಾಮಾಣಿಕತೆಯಿಂದ ಶ್ರಮವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.

ಯೋಗವನ್ನು ಮಾಡುವುದರಿಂದ ವ್ಯಕ್ತಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಡನಾಗುತ್ತಾನೆ. ಹಾಗೂ ವ್ಯಕ್ತಿಯು ಏಕಾಗ್ರತೆಯಿಂದ ಜೀವನದಲ್ಲಿ ಏನಾದರು ಸಾಧನೆಯನ್ನು ಮಾಡಲು ಸಾಧ್ಯವಿದೆ ಎಂದು ಹೇಳಿದರು. ಅಂದು ನಡೆಯುವ ಕಾರ್ಯಕ್ರಮಕ್ಕೆ ಅಧಿಕಾರಿಗಳು ಅಚ್ಚುಕಟ್ಟಾಗಿ ಕೆಲಸವನ್ನು ನಿರ್ವಹಿಸಬೇಕೆಂದರು. ಕಲಬುರಗಿ ಅಧೀನದಲ್ಲಿ ಬರುವ 8 ಮತ್ತು 9 ನೇ ಹಾಗೂ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಎಲ್ಲಾ ಶಾಲಾ ಕಾಲೇಜುಗಳಿಂದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಅವರಿಗೆ ಕರೆ ತರುವ ಜವಬ್ದಾರಿ ತಮ್ಮದಾಗಿರುತ್ತದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಅಗಮಿಸುವವರಿಗೆ ಲಘು ಉಪಹಾರ ಮತ್ತು ನೀರಿನ ವ್ಯವಸ್ಥೆ ಯೋಗಸನ ಮಾಡಲು ಮ್ಯಾಟ್ ವ್ಯವಸ್ಥೆ ಮತ್ತು ವೇದಿಕೆ ಹಾಗೂ ಧ್ವನಿವರ್ಧಕ ವ್ಯವಸ್ಥೆ ಮತ್ತು ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮಕೈಗೊಳಬೇಕೆಂದರು. ವಿ.ಐ.ಪಿ.ಗಳ ಸಲುವಾಗಿ ಯೋಗ ಮ್ಯಾಟ್ ಹಾಗೂ ಬ್ಯಾನರ್‌ಗಳ ಬಗ್ಗೆ ಕ್ರಮವಹಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಅಮೃತ್ ಅಷ್ಟಗಿ ಅವರಿಗೆ ಸೂಚಿಸಿದರು. ಪೋಲಿಸ್ ಇಲಾಖೆಗೆ ಸುರಕ್ಷೆ ಒದಗಿಸಲು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಮಗೆ ನೀಡಿದ ಕೆಲಸ ಕಾರ್ಯಗಳ ಬಗ್ಗೆ ಜವಬ್ದಾರಿಯಿಂದ ನಿರ್ವಹಿಸಬೇಕೆಂದರು. ಅಂದು ನಡೆಯುವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕೆಂದು ಹೇಳಿದರು.

ಎಲ್ಲಾ ವಸತಿ ನಿಲಯ ಮತ್ತು ವಸತಿ ಶಾಲೆಯ ವಿದ್ಯಾರ್ಥಿಗಳಿಗೆ, ಅಂಗನವಾಡಿ ಶಿಕ್ಷಕಿಯರು, ಆಶಾ ಕಾರ್ಯಕರ್ತೆಯರು, ಸ್ವಸಹಾಯ ಗುಂಪುಗಳಿಗೆ ಸ್ಕೌಟ್ಸ್ ಆಂಡ್ ಗೈಡ್ಸ್ ಮತ್ತು ಇನ್ನಿತರೆ ಜನರಿಗೆ ಪೂರ್ವಭಾವಿಯಾಗಿ ಯೋಗ ಪ್ರಾತ್ಯಕ್ಷಿತೆ ಮಾಡಲು ಹಾಗೂ ಜಿಲ್ಲೆಯ ವಿವಿಧ ಇಲಾಖೆ ಸಿಬ್ಬಂಧಿಗಳಿಗೂ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ನಿರ್ದೇಶಿಸಿದರು.

ಅದೇ ರೀತಿಯಾಗಿ ಗ್ರಾಮ ಪಂಚಾಯತ್‌ಗಳ್ಲಿ ಅಂಗನವಾಡಿಗಳಲ್ಲಿ ಎಲ್ಲ ಶಾಲಾ ಕಾಲೇಜ್‌ಗಳಲ್ಲಿ ಯೋಗ ಅಭ್ಯಾಸ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿ, ಅಂದು ನಡೆಯುವ ಕಾರ್ಯಕ್ರಮ ಸೂಕ್ತ ಪೋಲಿಸ್ ಬಂದೋಬಸ್ತ್ ನಿಯೋಜಿಸಲಾಗುವುದು ಎಂದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿ, ಯೋಗ ಧನುಷ್ ಆ್ಯಪ್ ನಲ್ಲಿ ಯೋಗದ ಕುರಿತು ಸಂಪೂರ್ಣ ಮಾಹಿತಿ ತಿಳಿದುಕೊಳ್ಳಲು ಸಹಕರಿಯಾಗಿದೆ. ಎನ್.ಎಸ್.ಎಸ್. ಎನ್.ಸಿ.ಸಿ. ಅಧಿಕಾರಿಗಳು ಸಾರ್ವಜನಿಕರು ಯೋಗ ದಿನಾಚರಣೆಯಲ್ಲಿ ಭಾಗವಹಿಸಿ ಶ್ರಮಧಾನ ಮಾಡುವ ಮೂಲಕ ಸುತ್ತಲಿನ ವಾತವರಣದ ಸ್ವಚ್ಛತೆ ನೈರ್ಮಲ್ಯ ಕಾಪಾಡುವ ಮೂಲಕ ಯೋಗ ದಿನಾಚರಣೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಅವರು ಹೇಳಿದರು. ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿಯುಡಿಸಿ ಯೋಜನಾ ನಿರ್ದೇಶಕ ಮುನ್ನವರ್ ದೌಲಾ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಪ್ಪ ಕ್ಯಾತನಾಳ, ಅಲ್ಪ ಸಂಖ್ಯಾತರ ಕಲ್ಯಾಣಾಧಿಕಾರಿ ಜಾವೀದ ಕರಂಗಿ, ಜಿಲ್ಲಾ ಆಯುಷ್ ಇಲಾಖೆ ಪ್ರಭಾರಿ ಅಧಿಕಾರಿ ಡಾ.ಕೆ.ಬಿ. ಬಬಲಾದಿ, ಆರ್ಯವೇಧಿಕ ಯೂನಾನಿ ಹೋಮಿಯೋಪಥಿ ಪ್ರಾಚಾರ್ಯರು. ಯೋಗ ಸಂಘ ಸಂಸ್ಥೆಗಳು ಸೇರಿದಂತೆ ವಿವಿಧ ಶಾಲಾ ಕಾಲೇಜಿನ ಪ್ರಾಂಶುಪಾಲಕರು ವಿವಿಧ ಸಂಘ ಸಂಸ್ಥೆಗಳು, ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಪುರಸಭೆ ವತಿಯಿಂದ ಸ್ವಚ್ಛತಾ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ಪಟ್ಟಣದಲ್ಲಿ ಪುರಸಭೆಯ ವತಿಯಿಂದ ಸ್ವಚ್ಛತಾ ಆಂದೋಲನವು ವಾರ್ಡ್ 5 ರಲ್ಲಿ ಬರುವ ಉದ್ಯಾನವನದಲ್ಲಿ ಮಂಗಳವಾರ ನಡೆಯಿತು.

ಪ್ರತಿದಿನ ಸಾರ್ವಜನಿಕರು ಕಸ ತಂದು ಎಸೆಯುತ್ತಿರುವವರ ಮನೆಗೇ ಹೋಗಿ ಕಸ ಎಸೆಯದ ಹಾಗೆ ತಿಳುವಳಿಕೆ ಹೇಳಲಾಯಿತು. ಉದ್ಯಾನದ ಮುಖ್ಯ ಬಾಗಿಲ ಬಳಿ ಕಸ ಹಾಕಿದರೆ 500 ದಂಡ ವಿಧಿಸಲಾಗುವುದು ಎಂಬ ಎಚ್ಚರಿಕೆ ಫಲಕವನ್ನು ಬರೆಯಲಾಯಿತು.

ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ ಮೋಹನ ಜಾಧವ, ಹಿರಿಯ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ , ಕಿರಿಯ ಆರೋಗ್ಯ ನಿರೀಕ್ಷಕ ರಂಗನಾಥ ಅಜಮನಿ ಮತ್ತು ಶಿವಾನಂದ ಜುಮನಾಳ, ನೈರ್ಮಲ್ಯ ಕಾರ್ಮಿಕರಾದ ನಿಜಲಿಂಗಪ್ಪ ಬಸರಿಕಟ್ಟಿ, ಸುರೇಶ್ ಕಟ್ಟಿಮನಿ, ಆನಂದ ಚಲವಾದಿ, ಚಂದಪ್ಪ ಡೊನೂರ, ಬಸವರಾಜ ರಕ್ಕಸಗಿ, ಪರಶುರಾಮ ಕಟ್ಟಿಮನಿ, ಪರಶುರಾಮ ರಜಪೂತ್, ಆಕಾಶ ಕಟ್ಟಿಮನಿ ಇತರರಿದ್ದರು.

# ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಯಾಗಲಿ: ಶಾಸಕರಾದ ಬಸನಗೌಡ ದದ್ದಲ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್,11 – ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಮಹತ್ವದ ಬುಡಕಟ್ಟು ಉತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಜೂನ್ 23 ರಂದು ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಹೇಳಿದರು.

ಜೂನ್ 10ರಂದು ಸಂಜೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಜೂನ್ 23ರಂದು ರಾಯಚೂರು ಗ್ರಾಮಾಂತರ ಕ್ಷೇತ್ರದ ಯರಗೇರಾ ಗ್ರಾಮದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನ ಹತ್ತಿರ ಬುಡಕಟ್ಟು ಉತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

371(ಜೆ) ದಶಮಾನೋತ್ಸವ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ 371(ಜೆ) ಪ್ರಮಾಣ ಪತ್ರದ ಮೂಲಕ ವಿವಿಧ ಉನ್ನತ ಹುದ್ದೆಗಳಿಗೆ ನೇಮಕಾತಿಯಾದವರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಯಚೂರು ವಿಶ್ವವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿಯವರ ಕಂಚಿನ ಪುತ್ಥಳಿ ಹಾಗೂ ಲೋಗೋ ಅನಾವರಣ ನಡೆಯಲಿದೆ ಎಂದು ಅವರು ತಿಳಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮಾತನಾಡಿ, ಜಿಲ್ಲೆಯ ಯರಗೇರ ಗ್ರಾಮದಲ್ಲಿ ಬುಡಕಟ್ಟು ಉತ್ಸವ ಕಾರ್ಯಕ್ರಮಕ್ಕೆ

ಮುಖ್ಯಮಂತ್ರಿಗಳು ಆಗಮಿಸುವ ಹಿನ್ನಲೆಯಲ್ಲಿ ಜಿಲ್ಲಾಡಳಿತದಿಂದ ಸ್ವಾಗತ ಸಮಿತಿ, ಸ್ಥಳ, ವೇದಿಕೆ ವ್ಯವಸ್ಥೆ ಸಮಿತಿ, ಕಾನೂನು ಸುವ್ಯವಸ್ಥೆ ಹಾಗೂ ಭದ್ರತಾ ಸಮಿತಿ, ಆಹಾರ ಕುಡಿಯುವ ನೀರು ಮತ್ತು ವಿಶ್ರಾಂತಿ ವ್ಯವಸ್ಥೆ ಸಮಿತಿ, ಪತ್ರಿಕಾ ಮತ್ತು ಮಾಧ್ಯಮ ನಿರ್ವಹಣಾ ಸಮಿತಿ, ವೈದ್ಯಕೀಯ ಮತ್ತು ತುರ್ತು ಸೇವಾ ಸಮಿತಿಗಳನ್ನು ರಚನೆ ಮಾಡಲಾಗಿದ್ದು, ಎಲ್ಲಾ ಸಮಿತಿಯ ಅಧಿಕಾರಿಗಳು ತಮ್ಮ– ತಮ್ಮ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡದರು. ಅಂದು ಕಾರ್ಯಕ್ರಮದಲ್ಲಿ ಸರ್ಕಾರದ ಸಾಧನೆ ಹಾಗೂ ಯೋಜನೆಗಳ ಕುರಿತಂತೆ ಸ್ಟಾಲ್ ಹಾಕುವ ವ್ಯವಸ್ಥೆ ಮಾಡಬೇಕು. ಅರ್ಹ ಫಲಾನುಭವಿಗಳಿಗೆ ಸೌಲಭ್ಯ ವಿತರಣಾ ಕಾರ್ಯಕ್ರಮ ನಡೆಯಲಿದ್ದು, ಸಂಬಂಧಿಸಿದ ಅಧಿಕಾರಿಗಳು ಇಲಾಖಾವಾರು ಮಾಹಿತಿಯನ್ನು ನೀಡಬೇಕೆಂದರು. 371(ಜೆ) ಸೌಲಭ್ಯದಿಂದ ವಿವಿಧ ಉನ್ನತ ಹುದ್ದೆಗಳಿಗೆ ನೇಮಕಾತಿಯಾದವರ ಬಗ್ಗೆ ರಾಯಚೂರು ತಹಶೀಲ್ದಾರರು ಹಾಗೂ ಡಿಡಿಪಿಐ ಅವರು ಅಂಕಿಸಂಖ್ಯೆಗಳನ್ನು ಸಂಗ್ರಹಿಸಿಬೇಕು ಎಂದರು.

ಇದೇ ಸಂದರ್ಭದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪೂರೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ರಾಯಚೂರು ಕೃಷಿ ವಿಶ್ವವಿದ್ಯಾಲಯದ ಕುಲ ಸಚಿವರಾದ ಡಾ.ಕೆ.ಆರ್.ದುರುಗೇಶ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಕೃಷ್ಣ, ಪಶು ಸಂಗೋಪಾನ ಇಲಾಖೆ ಉಪ ನಿರ್ದೇಶಕರಾದ ಅಶೋಕ ಕೋಲ್ಕಾರ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ ಎಮ್.ಎಸ್., ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಚಿದಾನಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಗ್ರಂಥಾಲಯ ಇಲಾಖೆ ಅಧಿಕಾರಿ ನಿರ್ಮಲ, ಕಾರ್ಮಿಕ ಇಲಾಖೆ ಅಧಿಕಾರಿ ಆರತಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಹತ್ತಿಕುಣಿಯಲ್ಲಿ ಸಂಭ್ರಮದಿಂದ ಕಾರ ಹುಣ್ಣಿಮೆ ಆಚರಿಸಿದ ರೈತರು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಾಲ್ಲೂಕಿನ ಹತ್ತಿಕುಣಿ ಗ್ರಾಮದಲ್ಲಿ ಬುಧವಾರ ಕಾರು ಹುಣ್ಣಿಮೆ ನಿಮಿತ್ಯ ರೈತರು ತಮ್ಮ ಎತ್ತುಗಳನ್ನು ನಾನಾ ಬಣ್ಣಗಳಿಂದ ಅಲಂಕಾರ ಮಾಡಿ, ವಿವಿಧ ಸಂಗೀತ ವಾದ್ಯ ಮೇಳಗಳೊಂದಿಗೆ ಮೆರವಣಿಗೆ ನಡೆಸಿ ಸಂಭ್ರಮಿಸಿದರು.

ಬೆಳಿಗ್ಗೆ ಗ್ರಾಮದ ಹೊರ ವಲಯದಲ್ಲಿರುವ ಹಳಕ್ಕೆ ತಮ್ಮ ಎತ್ತುಗಳನ್ನು ಕರೆದು–ಕೊಂಡ ಹೋದ ರೈತರು ಸ್ನಾನ ಮಾಡಿಸಿ, ಅವುಗಳಿಗೆ ಈಗಾಗಲೇ ಮಳೆಗಾಲ ಆರಂಭವಾಗಿದೆ, ಯಾವುದೇ ರೋಗಗಳು ಬರದಂತೆ ಆಯುರ್ವೇದಿಕ್ ಕಾರಿಂಗ ಔಷಧ ಹಾಗೂ ಜವಾರಿ ಕೋಳಿ ತತ್ತಿ, ಎಂಬಲ ಮಿಶ್ರಣ ಮಾಡಿ, ಕುಡಿಸಿ, ಅವಗಳ ಹಣೆಗೆ ಹೊಸ ಗೆಜ್ಜೆ, ಮಗಡ, ಗೊಂಡಿ, ವಿವಿಧ ಬಣ್ಣಗಳ ಅಲಂಕಾರದ ಜುಲಾ ಹಾಕಿ ಸಿಂಗರಿಸಿ, ಗ್ರಾಮದ ಪ್ರಮುಖ ಬೀದಿಗಳಲ್ಲಿ ಪಟಾಕಿ ಸಿಡಿಸಿ, ವಿವಿಧ ಸಂಗೀತ ವಾದ್ಯಗಳೊಂದಿಗೆ ಸಂತಸದಿಂದ ಮೆರವಣಿಗೆ ನಡೆಸಿದರು.

ಈ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ರೈತರಾದ ಸಂಜೀವಕುಮಾರ ಪುಟಗಿ ಹಾಗೂ ಮಲ್ಲಿಕಾರ್ಜುನ ಸೋಮಣ್ಣೋರ, ನಾವೂ ಕೃಷಿಯನ್ನೆ ಅವಲಂಭಿಸಿ ಹಳ್ಳಿಗಳಲ್ಲಿ ಜೀವನ ಸಾಗಿಸುತ್ತೇವೆ, ನಮ್ಮ ಜೊತೆ ವರ್ಷ ವಿಡೀ ನಮ್ಮ ಜೋಡು ಎತ್ತುಗಳು ನಮ್ಮ ಜಮೀನನ್ನು ಪರಿಶ್ರಮದಿಂದ ಉಳುಮೆ ಮಾಡುತ್ತವೆ, ಅವುಗಳ ಸಹಕಾರದಿಂದಲೇ ಆಹಾರ ಪದಾರ್ಥಗಳನ್ನು ಉತ್ಪಾಧಿಸಿ, ನಾವೂ ಹಾಗೂ ನಿಸರ್ಗದಲ್ಲಿರುವ ಪಶು–ಪಕ್ಷಿಗಳು ಜೀವಂತವಾಗಿದ್ದೇವೆ, ವರ್ಷಕ್ಕೊಮ್ಮೆ ಕಾರು ಹುಣ್ಣಿಮೆ ಬರುತ್ತದೆ, ಆ ದಿನ ನಾವೂ ಎತ್ತುಗಳ ಆರೋಗ್ಯ ಗಮನಿಸಿ, ಅಗತ್ಯ ಉಪಚಾರ ಮಾಡಿ, ಸಿಂಗಾರಗೊಳಿಸಿ, ಸಂಭ್ರಮದಿಂದ ಹುಣ್ಣಿಮೆ ಆಚರಿಸುವ ಮೂಲಕ ಅವಗಳಿಗೆ ಸಂತಸ ತರುವ ಮೂಲಕ ಕೃತಜ್ಞತೆಗಳನ್ನು ಅರ್ಪಿಸುತ್ತೇವೆ ಎಂದು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

# ನೈರ್ಮಲ್ಯ ಅಭಿಯಾನಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್,ಜೂ.10: ಗ್ರಾಮದಲ್ಲಿ ಶುಚಿತ್ವ ಕಾಪಾಡುವುದು ಪ್ರತಿಯೊಂದು ಗ್ರಾಮಪಂಚಾಯಿತಿಯ ಜವಾಬ್ದಾರಿಯಾಗಿದೆ ಎಂದು ತಾಲೂಕು ಸಹಾಯಕ ನಿರ್ದೇಶಕ ರಾಮಚಂದ್ರ ಬಸೂದೆ ಹೇಳಿದರು.

ಅಜಲಾಪುರ ಮತ್ತು ಜೈಗ್ರಾಮ ಗ್ರಾಮ ಪಂಚಾಯಿತಿ ಯಲ್ಲಿ ನೈರ್ಮಲ್ಯ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಎಲ್ಲೆಂದರಲ್ಲಿ ಕಸದ ರಾಶಿ ಹಾಕಿ ಮಳೆಗಾಲದಲ್ಲಿ ಚರಂಡಿ ನೀರು ಸಂಗ್ರಹಗೊಂಡು ಸೊಳ್ಳೆಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಆದ ಕಾರಣ ಕಸ ವಿಲೇವಾರಿ ಮಾಡಿ ಚರಂಡಿ ನೀರು ಸರಾಗವಾಗಿ ಹರಿಯುವಂತೆ ಗ್ರಾಮ ಪಂಚಾಯಿತಿಯ ಪಿಡಿಓಗಳು ಕ್ರಮವಹಿಸಬೇಕು ಎಂದರು. ಈ ಸಂದರ್ಭದಲ್ಲಿ ಅಜಲಾಪುರ ಪಿಡಿಓ ಬಾನು ಬೇಗಮ್, ಜೈಗ್ರಾಮ ಪಿಡಿಓ ಸೈಯದ್ ಅಲಿ, ಎಸ್ ಬಿ ಎಮ್ ಸಂಯೋಜಕ ನಾರಾಯಣ, ಟಿಸಿ ಮುಜಾಮಿಲ್, ಟಿಐಇಸಿ ರಾಘವೇಂದ್ರ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಮತ್ತು ಸದಸ್ಯರು, ಸಾರ್ವಜನಿಕರು ಹಾಜರಿದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449287890

# ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಿಯಾಯಿತಿ ದರದಲ್ಲಿ ಪುಸ್ತಕ ಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಪತ್ರಿಕೋದ್ಯಮಕ್ಕೆ ಹಾಗೂ ಮಾಧ್ಯಮ ಜಗತ್ತಿಗೆ ಸಂಬಂಧಿಸಿದ 40 ಕ್ಕೂ ಹೆಚ್ಚು ಪುಸ್ತಕಗಳು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಿಯಾಯಿತಿ ದರದಲ್ಲಿ ಮಾರಾಟಕ್ಕೆ ಲಭ್ಯವಿದ್ದು, ಆಸಕ್ತರು,ವಿಶೇಷವಾಗಿ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಶಾ ಖಾನಂ ಅವರು ತಿಳಿಸಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯು ಕೆಲವು ದಶಕಗಳಿಂದ ಹಲವಾರು ಪುಸ್ತಕಗಳನ್ನು ಪ್ರಕಟಿಸಿದ್ದು, ಮಾರಾಟಕ್ಕೆ ಲಭ್ಯವಿವೆ. ಹಿರಿಯ ಪತ್ರಕರ್ತರು, ಪರಿಣತರು ಬರೆದಿರುವ ಈ ಪುಸ್ತಕಗಳು ಯುವ ಪತ್ರಕರ್ತರು ಹಾಗೂ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಅತ್ಯಂತ ಉಪಯುಕ್ತವಾಗಿವೆ. ಈ ಪುಸ್ತಕಗಳ ಮೇಲೆ ಶೇ. 20 ರ ವರೆಗೆ ರಿಯಾಯಿತಿಯೂ ನೀಡಲಾಗುತ್ತಿದೆ.

ಆಸಕ್ತರು ಪುಸ್ತಕಗಳ ಕುರಿತ ಮಾಹಿತಿಯನ್ನು ಎಕ್ಸ್, ಇನ್‌ಸ್ಟಾಗ್ರಾಂ ಮತ್ತು ಫೇಸ್‌ಬುಕ್ ಗಳಲ್ಲಿನ ಅಕಾಡೆಮಿಯ ಖಾತೆ @karmediaacademy/KarnatakaMediaAcademy ಗಳಲ್ಲಿ ಪಡೆಯಬಹುದಾಗಿದೆ.

ಆಸಕ್ತರು, ಪತ್ರಿಕೋದ್ಯಮ ಬೋಧಿಸುವ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ಗ್ರಂಥಾಲಯಗಳಿಗೆ ಸಗಟು ಖರೀದಿ ಮಾಡಲು ಬಯಸುವವರು ಅಕಾಡೆಮಿಯ ಕಚೇರಿ ದೂ. 080 22860264 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

# ಕೊಳಗಲ್ಲು: ವೈದ್ಯಕೀಯ ಪದವಿ ಇಲ್ಲದೇ ವೈದ್ಯ ವೃತ್ತಿ ಮಾಡುತ್ತಿದ್ದ ಇಬ್ಬರು ನಕಲಿ ವೈದ್ಯರ ಕ್ಲಿನಿಕ್ ಸೀಜ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಯಾವುದೇ ವೈದ್ಯಕೀಯ ಪದವಿ ಪಡೆಯದೇ ಔಷಧಿಗಳ ಮಾಹಿತಿ ಪಡೆದುಕೊಂಡು ಜನತೆಗೆ ತಾವು ವೈದ್ಯರೆಂದು ಸುಳ್ಳು ಹೇಳಿ ವೈದ್ಯ ವೃತ್ತಿ ಮಾಡುತ್ತಿದ್ದ ಇಬ್ಬರು ನಕಲಿ ವೈದ್ಯರ ಕ್ಲಿನಿಕ್‌ಗಳನ್ನು ಕೊಳಗಲ್ಲು ಗ್ರಾಮದಲ್ಲಿ ಸೀಜ್ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಹೇಳಿದ್ದಾರೆ.




ಸಾರ್ವಜನಿಕರಿಂದ ದೂರು ಬಂದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಸೂಚನೆ ಮೇರೆಗೆ ಬಳ್ಳಾರಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಬ್ದುಲ್ಲಾ.ಆರ್ ನೇತೃತ್ವದ ತಂಡವು ಕುರುಗೋಡು ತಾಲ್ಲೂಕಿನ ಕೊಳಗಲ್ಲು ಗ್ರಾಮದಲ್ಲಿ ಸಾರ್ವಜನಿಕರಿಗೆ ತಾವು ವೈದ್ಯರೆಂದು ಬಿಂಬಿಸಿ ಯಾವುದೇ ವೈದ್ಯಕೀಯ ಪದವಿ ಪಡೆಯದೇ ಕೇವಲ ಪಿ.ಯು.ಸಿ ತನಕ ಓದಿಕೊಂಡು ಔಷಧಿಗಳ ಬಗ್ಗೆ ಮಾಹಿತಿ ಪಡೆದುಕೊಂಡು ಜನತೆಗೆ ಚಿಕಿತ್ಸೆ ನೀಡುತ್ತಿದ್ದ ಮಹೇಶ್ ಕ್ಲಿನಿಕ್, ಮೆಹಬೂಬ್ ಭಾಷ ಕ್ಲಿನಿಕ್‌ಗಳನ್ನು ಸೀಜ್ ಮಾಡಿ ಜಿಲ್ಲಾಧಿಕಾರಿಗಳ ಮುಂದಿನ ಕ್ರಮಕ್ಕಾಗಿ ವರದಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಆರೋಗ್ಯದ ದೃಷ್ಟಿಯಿಂದ ಅಧಿಕೃತ ವೈದ್ಯ ಪದವಿ ಪಡೆದ ವೈದ್ಯರ ಬಳಿ ತಪಾಸಣೆ ಮಾಡಿಸಬೇಕು. ಅವರಿಂದಲೇ ಚಿಕಿತ್ಸೆ ಪಡೆಯುವುದರಿಂದ ಆರೋಗ್ಯದ ಮೇಲೆ ಉಂಟಾಗಬಹುದಾದ ಗಂಭೀರ ಪರಿಣಾಮಗಳನ್ನು ತಡೆಯಬಹುದಾಗಿದೆ.

ಗ್ರಾಮಗಳಲ್ಲಿ ವೈದ್ಯ ವೃತ್ತಿ ಮಾಡುತ್ತಿರುವವರು ಕಂಡುಬಂದಲ್ಲಿ ಅವರ ವೈದ್ಯಕೀಯ ಪದವಿ ಮಾಹಿತಿ ಪಡೆದುಕೊಂಡು ಚಿಕಿತ್ಸೆ ಪಡೆಯಬೇಕು. ಒಂದು ವೇಳೆ ನಕಲಿ ವೈದ್ಯರು ಎಂದು ಕಂಡುಬಂದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಾಲಯಕ್ಕೆ ದೂರು ನೀಡಿದರೆ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ 2007 ರಡಿ ಕ್ರಮ ಜರುಗಿಸಬಹುದಾಗಿದೆ ಎಂದು ಹೇಳಿದ್ದಾರೆ.

ದಾಳಿಯ ವೇಳೆ ಕುರುಗೋಡು ವೈದ್ಯಾಧಿಕಾರಿ ಡಾ.ಮಂಜುನಾಥ ಜವಳಿ, ಜಿಲ್ಲಾ ಕೆ.ಪಿ.ಎಮ್.ಇ ವಿಭಾಗದ ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ್ ಕುಮಾರ್, ಗೋಪಾಲ್ ಕೆ.ಹೆಚ್ ಇದ್ದರು.

# ಜೂ.13 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ವ್ಯಾಪ್ತಿಗೆ ಬರುವ 110/11 ಕೆ.ವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ತ್ರೈಮಾಸಿಕ ನಿರ್ವಹಣೆ ಕೈಗೊಳ್ಳುತ್ತಿರುವುದರಿಂದ ಜೂ.13 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಎಫ್–23, ಎಫ್–24, ಎಫ್–25, ಎಫ್–46, ಎಫ್–47 ಮತ್ತು ಎಫ್–48 ಫೀಡರ್‌ಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಬಳ್ಳಾರಿ ನಗರದ ಬೆಂಗಳೂರು ರಸ್ತೆ, ಅಂಧ್ರಾಳ್ ರಸ್ತೆ, ಕೊಲ್ಮಿ ಚೌಕ್, ಕಾರ್ಕಲ ತೋಟ, ಬಾಪೂಜಿ ನಗರ, ಮಿಲ್ಲರ ಪೇಟೆ, ಮೋತಿ ವೃತ್ತ, ತೇರು ಬೀದಿ, ಇಂಡಸ್ಟ್ರಿಯಲ್ ಏರಿಯಾ ಹಂತ–1, ಮಹೇಶ್ ಪೈಪ್ಸ್, ಲಾರಿ ಟರ್ಮಿನಲ್, ಜೈನ್ ಮಾರ್ಕೆಟ್, ಸಾಯಿ ಕಾಲೋನಿ, ಎಪಿಎಂಸಿ, ರಾಣಿತೋಟ, ಮರಿಸ್ವಾಮಿ ಮಠ, ದೊಡ್ಡ ಮಾರ್ಕೆಟ್, ತೋಪಿಗಲ್ಲಿ, ಬೊಮ್ಮನಾಳ್ ರೋಡ್ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋರವಾರ: ಜವಾಹರ ನವೋದಯ ವಿದ್ಯಾಲಯದಲ್ಲಿ 6ನೇ ತರಗತಿ ಪ್ರವೇಶ ಪರೀಕ್ಷೆಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂನ್.11–ಕೋರವಾರ (ಕಲಬುರಗಿ–02) ಜವಾಹರ ನವೋದಯ ವಿದ್ಯಾಲಯದಲ್ಲಿ 2025ನೇ ಸಾಲಿಗಾಗಿ ನವೋದಯ ವಿದ್ಯಾಲಯದ 6ನೇ ತರಗತಿಗೆ ಪ್ರವೇಶ ಪರೀಕ್ಷೆಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕೋರವಾರ (ಕಲಬುರಗಿ–02) ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ತಿಳಿಸಿದ್ದಾರೆ.

ಕೋರವಾರ ನವೋದಯ ವಿದ್ಯಾಲಯಕ್ಕೆ ಒಳಪಡುವ ತಾಲೂಕುಗಳಾದ ಚಿಂಚೋಳಿ, ಚಿತ್ತಾಪೂರ ಹಾಗೂ ಸೇಡಂ ತಾಲೂಕಿನಲ್ಲಿ 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಶೀಲ್ ಇರುವ ಅರ್ಜಿ ಫಾರ್ಮನ್ನು ಸಂಪೂರ್ಣ ಭರ್ತಿ ಮಾಡಿಕೊಂಡು www.navodaya.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಜುಲೈ 29 ರೊಳಗಾಗಿ ಅರ್ಜಿ ಸಲ್ಲಿಸಬೇಕು. 2025ರ ಡಿಸೆಂಬರ್ 13 ರಂದು ಪ್ರವೇಶ ಪರೀಕ್ಷೆ ಜರುಗಲಿದೆ.

ಹೆಚ್ಚಿನ ಮಾಹಿತಿಗಾಗಿ ಕೋರವಾರ ಜವಾಹರ ನವೋದಯ ವಿದ್ಯಾಲಯ ಕಚೇರಿಯನ್ನು ಹಾಗೂ ಮೊಬೈಲ್ ಸಂಖ್ಯೆ 9743278559, 8618468593, 9648963192, 8495866274 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಉಪ ವಿಭಾಗ ಕಚೇರಿ ಹಾಗೂ ಆನ್ಲೈನ್ ಮೂಲಕವೇ ವಿದ್ಯುತ್ ಬಿಲ್ ಪಾವತಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಕಾರ್ಯ ಮತ್ತು ಪಾಲನೆ ಉಪವಿಭಾಗ ವ್ಯಾಪ್ತಿಯಲ್ಲಿ ಬರುವ ಗ್ರಾಹಕರ ವಿದ್ಯುತ್ ಬಿಲ್ ವಸೂಲಾತಿಗೆ ಇನ್ನು ಮುಂದೆ ಹೆಸ್ಕಾಂ ಸಿಬ್ಬಂದಿಗಳು ಗ್ರಾಹಕರ ಮನೆಗೆ ಭೇಟಿ ಕೊಡುವುದಿಲ್ಲ ಆದ್ದರಿಂದ ಗ್ರಾಹಕರೇ ತಮ್ಮ ವಿದ್ಯುತ್ ಬಿಲ್ ಗಳನ್ನು ತಾಳಿಕೋಟಿ ಉಪ ವಿಭಾಗದ ಹೆಸ್ಕಾಂ ಕಚೇರಿಯ ನಗದು ಕೌಂಟರ್ ನಲ್ಲಿ ಅಥವಾ ಆನ್ಲೈನ್ ಸೇವೆಗಳಾದ ಪೇಟಿಮ್, ಫೋನ್ ಪೇ, ಗೂಗಲ್ ಪೇ ಹಾಗೂ ಹೆಸ್ಕಾಂನ ಅಧಿಕೃತ ಜಾಲತಾಣಗಳನ್ನು ವಿದ್ಯುತ್ ಬಿಲ್ ಪಾವತಿಗಳಿಗೆ ಉಪಯೋಗಿಸಬೇಕು. ತಾಳಿಕೋಟಿ ಉಪವಿಭಾಗದ ಎಲ್ಲಾ ಹೆಸ್ಕಾಂನ ಗ್ರಾಹಕರು ತಮ್ಮ ವಿದ್ಯುತ್ ಬಿಲ್ ಗಳನ್ನು ವಾಯಿದೆ ದಿನಾಂಕದೊಳಗೆ ಪಾವತಿಸಿ ಹೆಸ್ಕಾಂ ನೊಂದಿಗೆ ಸಹಕರಿಸಬೇಕು, ತಪ್ಪಿದಲ್ಲಿ ವಿದ್ಯುತ್ ಬಿಲ್ ಬಾಕಿ ಇರುವ ವಿದ್ಯುತ್ ಸ್ಥಾವರಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವದಾಗಿ ಕಾರ್ಯ ಮತ್ತು ಪಾಲನೆ ಉಪವಿಭಾಗ ಹೆಸ್ಕಾಂ ತಾಳಿಕೋಟಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವಿಜಯಕುಮಾರ ಹೆಚ್. ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ಮಾಜಿ ಸೈನಿಕರಿಂದ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ನೋಂದಾಯಿಸಿಕೊಳ್ಳಲು ಮಾಜಿ ಸೈನಿಕರಿಂದ ನೋಂದಣಿಗೆ ಆಹ್ವಾನಿಸಲಾಗಿದೆ ಎಂದು ಧಾರವಾಡದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

ನಾಗರಿಕ ರಕ್ಷಣಾ ವ್ಯವಸ್ಥೆಯು ಸ್ವಯಂಸೇವಾ ಮಾದರಿಯಾಗಿದ್ದು, ಇತ್ತೀಚೆಗೆ ಭಾರತದ 400 ಜಿಲ್ಲೆಗಳಲ್ಲಿ ರಾಷ್ಟ್ರವ್ಯಾಪಿ ನಾಗರಿಕ ರಕ್ಷಣಾ ಅಣಕು ಕವಾಯತು ನಡೆಸಲಾಗಿತ್ತು. ಪ್ರಸ್ತುತ ಭಾರತದ 244 ವಿವಿದ ಜಿಲ್ಲೆಗಳಲ್ಲಿ ಈ ವ್ಯವಸ್ಥೆಯು ಅಸ್ತಿತ್ವದಲ್ಲಿದ್ದು, ಯುದ್ಧ ಹಾಗೂ ಶಾಂತಿಯ ಸಂದರ್ಭದಲ್ಲಿ ಇದರ ಜವಾಬ್ದಾರಿ ನಿರ್ದಿಷ್ಟಪಡಿಸಲಾಗಿದೆ. ಜಂಟಿ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡದ ವ್ಯಾಪ್ತಿಯಲ್ಲಿರುವ ಧಾರವಾಡ, ಗದಗ, ಹಾವೇರಿ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿರುವ ಮಾಜಿ ಸೈನಿಕರು (Non Reserve List) ಸ್ವಯಂಪ್ರೇರಿತವಾಗಿ ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ನೋಂದಾಯಿಸಿಕೊಳ್ಳಬಹುದಾಗಿದೆ.

ನೋಂದಾಯಿಸಿಕೊಳ್ಳಲು ಆನ್‌ಲೈನ್ ವೆಬ್‌ಸೈಟ್ www.civildefencewarriors.gov.in ಗೆ ಭೇಟಿ ನೀಡಬಹುದು.

ಮಾಜಿ ಸೈನಿಕರು ನೋಂದಣಿಯ ಮಾಹಿತಿಯನ್ನು ಜಂಟಿ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡ, ಇವರ ಇ–ಮೇಲ್ sainikwelfaredwd@gmail.com ಅಥವಾ ದೂ.08362440176 ಗೆ ಸಂಪರ್ಕಿಸಿ ಮಾಹಿತಿ ನೀಡಬಹುದು.

# ನಾಮ ನಿರ್ದೇಶಿತ ಸದಸ್ಯರ ಆಯ್ಕೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಅನುಸೂಚಿತ ಜಾತಿ/ಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995ರ ನಿಯಮ 17 ರ ರಿತ್ಯಾ ಉಪವಿಭಾಗ ಮಟ್ಟದ ಜಾಗೃತಿ ಉಸ್ತುವಾರಿ ಸಮಿತಿಯನ್ನು ಪುನರ್ ರಚನೆ ಮಾಡಲು ನಾಮ ನಿರ್ದೇಶಿತ ಸದಸ್ಯರನ್ನು ಆಯ್ಕೆ ಮಾಡಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಅಭಿವೃದ್ಧಿಗಾಗಿ ಶ್ರಮಿಸಿರುವ ವ್ಯಕ್ತಿಗಳು/ಸಂಸ್ಥೆಗಳ ಅಧಿಕಾರೇತರ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ–01, ಪರಿಶಿಷ್ಟ ಪಂಗಡ–01 ಸೇರಿ ಒಟ್ಟು–02 ಸದಸ್ಯರನ್ನು ಹಾಗೂ ಇತರೆ ವರ್ಗದ 02 ಎನ್.ಜಿ.ಓ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡಲಾಗುವುದು.

ಆಸಕ್ತಿಯುಳ್ಳವರು ಜೂನ್ 15 ರೊಳಗಾಗಿ ನಗರದ ಕೌಲ್ ಬಜಾರ್ 1ನೇ ಗೇಟ್ ಹತ್ತಿರದ ಡಾ.ಬಿ.ಆರ್. ಅಂಬೇಡ್ಕರ್ ಭವನದ ಸಹಾಯಕ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2024 ನೇ ಸಾಲಿನ ಪುಸ್ತಕ ಬಹುಮಾನಕ್ಕಾಗಿ ಜಾನಪದ ಕೃತಿಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಕರ್ನಾಟಕ ಜಾನಪದ ಅಕಾಡೆಮಿಯು 2024 ನೇ ಸಾಲಿನಲ್ಲಿ 01–01–2024 ರಿಂದ 31–12–2024 ರ ವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ) ಕನಿಷ್ಠ 150 ಪುಟಗಳಿಗೂ ಮೇಲ್ಪಟ್ಟಿರುವಂತೆ, ವಿವಿಧ ನಾಲ್ಕು ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನ ನೀಡುವ ಯೋಜನೆಯಡಿ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಿದೆ.

ಲೇಖಕರು, ಪ್ರಕಾಶಕರು, ಸಂಪಾದಕರು ತಮ್ಮ 1 ಕೃತಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು–560002 ಇವರಿಗೆ ಜೂನ್ 30 ರೊಳಗೆ ತಲುಪುವಂತೆ ಖುದ್ದಾಗಿ, ಕೊರಿಯರ್ ಅಥವಾ ಅಂಚೆ ಮೂಲಕ ಕಳುಹಿಸಿಕೊಡಬಹುದು.

ಈ ಪುಸ್ತಕವು ತಜ್ಞರಿಂದ ಪ್ರಕಾರವಾರು ಆಯ್ಕೆಯಾದಲ್ಲಿ ನಂತರ ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಉಳಿದಂತೆ 03 ಪ್ರತಿಗಳನ್ನು ಮೌಲ್ಯಮಾಪಕರ ಪರಿಶೀಲನೆಗೆ ತರಿಸಿಕೊಳ್ಳಲಾಗುವುದು.

*ವಿವಿಧ ಪ್ರಕಾರಗಳ ವಿವರ:*

ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ–ವಿಮರ್ಶೆ–ಸಂಶೋಧನೆ ಮತ್ತು ಜನಪದ ಸಂಕೀರ್ಣ.

ಈಗಾಗಲೇ ಪುಸ್ತಕ ಬಹುಮಾನ ಪಡೆದ ಸಂಪಾದಕರು, ಲೇಖಕರು ಪುನಃ ಪುಸ್ತಕ ಬಹುಮಾನ ಯೋಜನೆಗೆ ಕೃತಿಗಳನ್ನು ಕಳುಹಿಸಬಾರದಾಗಿ ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಬೆಂಗಳೂರಿನ ಜೆ.ಸಿ ರಸ್ತೆಯ ಕನ್ನಡ ಭವನದ 2 ನೇ ಮಹಡಿಯ ಕರ್ನಾಟಕ ಜಾನಪದ ಅಕಾಡೆಮಿ ಕಚೇರಿ ಅಥವಾ ದೂ.080–22215509 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಮಾನ್ಯುವೆಲ್ ಸ್ಕ್ಯಾವೆಂಜರ್‌ಗಳ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ 2013 ಉಪವಿಧಿ 24(3) ರನ್ವಯ ಮ್ಯಾನುವಲ್ ಸ್ಕ್ಯಾವೆಂರ್ಗ್ಳ ಉಪವಿಭಾಗ ಮಟ್ಟದ ಜಾಗೃತಿ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರನ್ನು ಆಯ್ಕೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಮ್ಯಾನುವಲ್ ಸ್ಕ್ಯಾವೆಂಜರ್‌ಗಳ ಪುನರ್ವಸತಿ ಯೋಜನೆಗಾಗಿ ಕೆಲಸ ಮಾಡುವ ಅಥವಾ ಸಮುದಾಯವನ್ನು ಪ್ರತಿನಿಧಿಸುವ ಸಂಸ್ಥೆಗೆ ಸೇರಿದ ಸಾಮಾಜಿಕ ಕಾರ್ಯಕರ್ತರು ಹಾಗೂ ಉಪವಿಭಾಗದಲ್ಲಿ ಸ್ಕ್ಯಾವೆಂಜರ್‌ಗಳ ಸಮುದಾಯ ನಿವಾಸಿಯನ್ನು ಪ್ರತಿನಿಧಿಸುವ ಇಬ್ಬರು ಸದಸ್ಯರನ್ನು ನಾಮ ನಿರ್ದೇಶನ ಮಾಡಲು (ಕಡ್ಡಾಯವಾಗಿ 01 ಸದಸ್ಯರು ಮಹಿಳೆಯಾಗಿರತಕ್ಕದ್ದು) ಉದ್ದೇಶಿಸಲಾಗಿದೆ.

ಆಸಕ್ತಿಯುಳ್ಳವರು ಜೂನ್ 15 ರೊಳಗಾಗಿ ನಗರದ ಕೌಲ್ ಬಜಾರ್ 1ನೇ ಗೇಟ್ ಹತ್ತಿರದ ಡಾ.ಬಿ.ಆರ್. ಅಂಬೇಡ್ಕರ್ ಭವನದ ಸಹಾಯಕ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಬಳ್ಳಾರಿ: ಜೂ.15 ರ ವರೆಗೆ ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆ ನಿಮಿತ್ತವಾಗಿ ಅಸೋಸಿಯೇಷನ್ ಆಫ್ ಸರ್ಜನ್ಸ್ ಆಫ್ ಇಂಡಿಯಾ – ಬಳ್ಳಾರಿ ಶಾಖೆ ವತಿಯಿಂದ ಜೂ.15 ರ ವರೆಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಳ್ಳಾರಿ ಶಾಖೆ ಅಧ್ಯಕ್ಷ ಡಾ.ಶೇಕಪ್ಪ ಮಾಳಗಿಮನಿ ಮತ್ತು ಕಾರ್ಯದರ್ಶಿ ಡಾ.ಗುಡೇಕೋಟೆ ರವಿಕುಮಾರ ಅವರು ತಿಳಿಸಿದ್ದಾರೆ.

ಜೂ.11 ರಂದು ಸಸಿ ನೆಡುವ ಕಾರ್ಯಕ್ರಮ, ಜೂ.12 ರಂದು ಬೀದಿ ನಾಟಕ(ಸಾಮಾಜಿಕ ಕಳಕಳಿ), ಜೂ.13 ರಂದು ಉಚಿತ ತಪಾಸಣೆ, ಶಸ್ತ್ರಚಿಕಿತ್ಸೆ (ನಗರದ ನುರಿತ ವೈದ್ಯರಿಂದ ತಮ್ಮ ಆಸ್ಪತ್ರೆಗಳಲ್ಲಿ ತಮ್ಮ ವೈಯಕ್ತಿಕ ಸಾಮರ್ಥ್ಯಕ್ಕನುಸಾರ ಅರ್ಹ ರೋಗಿಗಳಿಗೆ), ಜೂ.14 ರಂದು ಬೃಹತ್ ರಕ್ತದಾನ ಶಿಬಿರ (ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಪ್ರಾಂಗಣ) ಮತ್ತು ಜೂ.15 ರಂದು ರಾಷ್ಟ್ರೀಯ ಶಸ್ತ್ರಚಿಕಿತ್ಸಾ ದಿನಾಚರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಗಳಲ್ಲಿ ಬಿಎಂಸಿಆರ್‌ಸಿಯ ನಿರ್ದೇಶಕ ಡಾ.ಗಂಗಾಧರ ಗೌಡ, ಎಎಸ್‌ಐ ನ ರಾಷ್ಟ್ರೀಯ ಕಾರ್ಯದರ್ಶಿ ಡಾ.ಗಡ್ಡಿ ದಿವಾಕರ, ಕೆಎಸ್‌ಸಿಎಎಸ್‌ಐ ಖಜಾಂಚಿ ಡಾ.ವೈ.ಗುರುಬಸವನ ಗೌಡ, ಬಿಎಂಸಿಆರ್‌ಸಿ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಕಾಸಾ ಸೋಮಶೇಖರ್ ಹಾಗೂ ಶಸ್ತ್ರಚಿಕಿತ್ಸಾ ವಿಭಾಗದ ಸಿಬ್ಬಂದಿಗಳು, ಸೂಪರ್ ಸ್ಪೆಷಾಲಿಟಿ ವೈದ್ಯರುಗಳು ಮತ್ತು ನಗರದ ನುರಿತ ಶಸ್ತ್ರಚಿಕಿತ್ಸಾ ತಜ್ಞರುಗಳು, ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸುವರು ಎಂದು ತಿಳಿಸಿದ್ದಾರೆ.

# ಪರಿಸರ ಸಂರಕ್ಷಣೆ ಜಾಗೃತಿ ಅಗತ್ಯ: ಡಾ.ಟಿ.ಗಂಗಾಧರ ಗೌಡ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಪ್ರಸ್ತುತದಲ್ಲಿ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಬದ್ಧ ಪ್ರಯತ್ನವಾಗಬೇಕಿದೆ ಎಂದು ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ ಹೇಳಿದರು. ಕೆಎಸ್‌ಸಿಎಎಸ್‌ಐ ಬಳ್ಳಾರಿ ಶಾಖೆ ವತಿಯಿಂದ ರಾಷ್ಟ್ರೀಯ ಶಸ್ತ್ರಚಿಕಿತ್ಸಕ ವಾರಾಚರಣೆ ಅಂಗವಾಗಿ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಸಸಿ ನೆಟ್ಟು ನೀರೂಣಿಸಿ ಬಳಿಕ ಅವರು ಮಾತನಾಡಿದರು. ಪ್ರತಿಯೊಬ್ಬರೂ ತಮ್ಮ ಸುತ್ತ–ಮುತ್ತಲಿನ ಪರಿಸರ ರಕ್ಷಣೆ ಮಾಡುವ ಕಾಳಜಿ ವಹಿಸುವ ಮೂಲಕ ಪರಿಸರ ಹಾನಿ ಮಾಡದಂತೆ ನೋಡಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ವೈದ್ಯಕೀಯ ಅಧೀಕ್ಷಕರಾದ ಡಾ.ಇಂಧುಮತಿ, ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಕಾಸಾ ಸೋಮಶೇಖರ್, ಎಎಸ್‌ಐ ರಾಷ್ಟ್ರೀಯ ಕಾರ್ಯದರ್ಶಿ ಡಾ.ದಿವಾಕರ ರೆಡ್ಡಿ, ಖಜಾಂಚಿ ಡಾ.ವೈ.ಗುರುಬಸವನ ಗೌಡ, ಶಾಖಾ ಅಧ್ಯಕ್ಷ ಡಾ.ಶೇಖಪ್ಪ ಮಾಳಗಿಮನಿ, ನಗರದ ಹಿರಿಯ ವೈದ್ಯರುಗಳಾದ ಡಾ.ಸೋಮೇಶ್ವರ ಗಡ್ಡಿ, ಡಾ.ಅರುಣ್ ಎಸ್.ಕೆ., ಡಾ.ಅರುಣಾ ಕಾಮಿನೇನಿ, ಡಾ.ಅರವಿಂದ್ ಪಾಟೀಲ್ ಸೇರಿದಂತೆ ಜಿಲ್ಲಾ ಶಾಖೆಯ ಸದಸ್ಯರು, ಕೇಂದ್ರದ ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.11–ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ವತಿಯಿಂದ 2025–26ನೇ ಸಾಲಿಗೆ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯಕ್ಕಾಗಿ ಅರ್ಹರಿಂದ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ಯೋಜನೆಗಳು:** ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು–ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯ ನೀಡಲಾಗುವುದು. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಪ್ರವರ್ಗ–1ರ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಕ್ಕೆ ಸೇರಿದವರಾಗಿರಬೇಕು.

ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್‌ನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ:08392–267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂಬಾಕು ಉತ್ಪನ್ನಗಳ ಮಾರಾಟಕ್ಕೆ ವ್ಯಾಪಾರಿಗಳು ಪ್ರತ್ಯೇಕವಾಗಿ ಪರವಾನಿಗೆ ಪಡೆಯುವುದು ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂನ್.11–ರಾಜ್ಯದ ಮಹಾನಗರಪಾಲಿಕೆ, ಎಲ್ಲಾ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡಲು ಪ್ರತ್ಯೇಕ ಪರವಾನಿಗೆ ಪಡೆಯುವುದು ಕಡ್ಡಾಯಗೊಳಿಸಿದ್ದು, ಇದರ ಹಿನ್ನೆಲೆಯಲ್ಲಿ ಕಲಬುರಗಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ಕಡ್ಡಾಯವಾಗಿ ಪ್ರತ್ಯೇಕವಾಗಿ ಪರವಾನಿಗೆ ಪಡೆಯಲು ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕೆಂದು ಕಲಬುರಗಿ ಮಹಾನಗರಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.


ಇದರ ಹಿನ್ನೆಲೆಯಲ್ಲಿ ಕಲಬುರಗಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಿಂದ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳಾದ ಆಧಾರ್ ಕಾರ್ಡ್, ಬಾಡಿಗೆ ಕರಾರು ಪತ್ರ, ಉದ್ಯಮ ಪರವಾನಿಗೆ ಹಾಗೂ ಫೋಟೋವನ್ನು ಲಗತ್ತಿಸಿ 2025ರ ಜೂನ್ 16 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಅರ್ಜಿ ಶುಲ್ಕ 500 ರೂ. ಇದ್ದು, ಒಂದು ವರ್ಷ ಚಾಲ್ತಿಯಲ್ಲಿರುತ್ತದೆ. 2025ರ ಜೂನ್ 30ರ ದಿನಾಂಕದ ನಂತರ ಪ್ರತ್ಯೇಕ ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳ ಮಾರಾಟ ಮಾಡುವ ವ್ಯಾಪಾರಸ್ಥರ ವಿರುದ್ಧ ಕಾನೂನಿನನ್ವಯ ಕ್ರಮಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಶಾಸಕ ಪಾಟೀಲ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.11–ತಾಲೂಕಿನ ಕಲಾದಗಿಗ್ರಾಮದಮಂದಿರವೊಂದರ ಬಳಿ ಪ್ರಾಣಿಯೊಂದರ ದೇಹದ ಅವಶೇಷಗಳನ್ನುಇಟ್ಟುಹೋಗಿರುವುದು ನಿಜಕ್ಕೂ ಹೇಯ ಕೃತ್ಯ ಇದನ್ನು ಯಾವ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ ಎಂದು ಬೀಳಗಿ ಶಾಸಕ ಜೆ.ಟಿ.ಪಾಟೀಲ ಹೇಳಿದ್ದಾರೆ.



ಕಲಾದಗಿಯಬಾಲಾಜಿಮಂದಿರದ ಮುಂದೆ ಗೋವಿನದ್ದು ಎಂದು ಹೇಳಲಾಗುವ ಪ್ರಾಣಿಯ ಅವಶೇಷಗಳನ್ನು ಇಟ್ಟುಹೋಗಿರುವ ಘಟನೆಯನ್ನುಖಂಡಿಸಿರುವಅವರು, ಇದು ಹಿಂದೂಗಳ ಮನಸ್ಸನ್ನು ಘಾಸಿಗೊಳಿಸುವ ಕೃತ್ಯ. ಈ ಕೃತ್ಯ ಎಸಗಿದವರು ಯಾರೇ ಇರಲಿ ಅವರನ್ನು ಪತ್ತೆ ಹಚ್ಚಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಹೇಳಿದ್ದಾರೆ. ತಾವು ಈ ಬಗ್ಗೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಅವರ ಜೊತೆ ಮಾತನಾಡಿರುವುದಾಗಿ ತಿಳಿಸಿದ ಶಾಸಕರು, ದೇವಸ್ಥಾನದ ಮುಂದೆ ಇಡಲಾಗಿದ್ದ ಪ್ರಾಣಿಯ ಅವಶೇಷಗಳನ್ನು ಪರೀಕ್ಷೆಗೆ ಕಳಿಸಲು ತಿಳಿಸಲಾಗಿದೆ. ಜೊತೆಗೆ ಗ್ರಾಮದ ಸೌಹಾರ್ದತೆಗೆ ಧಕ್ಕೆ ಬಾರದಂತೆ ಕ್ರಮ ಕೈಗೊಳ್ಳಲು ಕೂಡಲೇ ಎಲ್ಲ ಸಮಾಜದ ಪ್ರಮುಖರ ಶಾಂತಿಪಾಲನಾ ಸಭೆ ಕರೆಯಲು ತಿಳಿಸಲಾಗಿದೆ ಎಂದರು.

# ಮೋದಿ ಆಡಳಿತದ 11 ವರ್ಷದ ಸಾಧನೆ

## ನರೇಗಾ ಗುರಿ: ಜಿಲ್ಲೆಯಲ್ಲಿ ಶೇ.84 ರಷ್ಟು ಸಾಧನೆ–ಶಾಂತಗೌಡ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.11–ಮಹಾತ್ಮಾಗಾಂಧಿ ಗ್ರಾಮೀಣ ಉದ್ಯೋಗಖಾತರಿಯೋಜನೆಯಡಿ (ಮನರೇಗಾ)ಜಿಲ್ಲೆಯಲ್ಲಿ 50 ಲಕ್ಷ ಮಾನವ ದಿನಗಳ ಅಂದಾಜಿತ ಗುರಿಯಲ್ಲಿ ಪ್ರತಿಶತ 84.33ರಷ್ಟು ಸಾಧನೆಯಾಗಿದೆ ಎಂದು ಬಿಜೆಪಿ ಜಿಲ್ಲಾಅಧ್ಯಕ್ಷಶಾಂತಗೌಡಪಾಟೀಲ ತಿಳಿಸಿದರು.

ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ 11ವರ್ಷಗಳ ಸಾಧನೆಯ ಕುರಿತು ವಿವರನೀಡಿದ ಅವರು, ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಅನೇಕ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಂಡಿವೆ ಎಂದರು.

ಚತುಷ್ಪಥ ಹೆದ್ದಾರಿ 24.8 ಕಿ.ಮೀ. ಹಾಗೂ ದ್ವಿಪಥ ಹೆದ್ದಾರಿ 26.08 ಕಿ.ಮೀ. ರಸ್ತೆಗಳ ಅಭಿವೃದ್ಧಿ ನಡೆಯುತ್ತಿದೆ. ಪ್ರಧಾನಮಂತ್ರಿಗ್ರಾಮ ಸಡಕ್ ಯೋಜನೆಯಡಿಯಲ್ಲಿ 208.76 ಕಿ.ಮೀ. ರಸ್ತೆನಿರ್ಮಾಣಕ್ಕೆ ಮಂಜೂರಾತಿದೊರೆತಿದೆ. ಬದಾಮಿ, ಕಟಗೇರಿ, ಬಾಗಲಕೋಟೆ ರೈಲು ನಿಲ್ದಾಣಗಳು ಮೇಲ್ದರ್ಜೆಗೇರಿವೆ. ಅಲ್ಪಸಂಖ್ಯಾತರಿಗೆ ಸಂಬಂಧಿಸಿದ ವಿವಿಧ ಯೋಜನೆಗಳಿಗೆ ಒಟ್ಟು ರೂ.11.44 ಕೋಟಿ ಬಿಡುಗಡೆ–ಯಾಗಿದೆ ಎಂದು ಹೇಳಿದ ಶಾಂತಗೌಡ ಪಾಟೀಲ, 257 ರೈತರಿಂದ 2,285 ಕ್ವಿಂಟಾಲ್ ಸೂರ್ಯಕಾಂತಿ ಖರೀದಿಸಿ 1.66 ಕೋಟಿ ರೂ. ಪಾವತಿಸಲಾಗಿದೆ. 82,365 ಕ್ವಿಂಟಲ್ ತೊಗರಿ ಖರೀದಿಸಿ 65.89 ಕೋಟಿ ಪಾವತಿಸಲಾಗಿದೆ. ಪ್ರಧಾನಿ ಆವಾಸ್ ಯೋಜನೆಯಡಿ 2,386 ಮನೆಗಳಿಗೆ ಮಂಜೂರಾತಿ ದೊರೆತಿದೆ. 195 ಗ್ರಾಮ ಪಂಚಾಯತಿಗಳಲ್ಲಿ 84 ಪಂಚಾಯತಿಗಳಲ್ಲಿ ಸ್ವಚ್ಛ ಭಾರತ ಯೋಜನೆ ಪೂರ್ಣಗೊಂಡಿದೆ ಎಂದು ವಿವರಿಸಿದರು.

4,84,095 ಪಡಿತರ ಚೀಟಿ–ದಾರರಿಗೆ 83,402 ಕ್ವಿಂಟಲ್ ಅಕ್ಕಿ ಪೂರೈಕೆಮಾಡಲಾಗಿದೆ. ಜಲಜೀವನ ಮಿಷನ್ ಯೋಜನೆಯ 676 ಯೋಜನೆಗಳಲ್ಲಿ 627 ಪೂರ್ಣವಾಗಿ 346.5 ಕೋಟಿ ಬಿಡುಗಡೆಯಾಗಿದೆ. ಉಜ್ವಲ ಯೋಜನೆಯಡಿ 1,96,876 ಗ್ಯಾಸ್ ಸಂಪರ್ಕ ಕಲ್ಪಿಸಲಾಗಿದೆ. ಮುದ್ರಾ ಯೋಜನೆಯಡಿ 80,344 ಖಾತೆಗಳಿಗೆ 922.47 ಕೋಟಿ ಸಾಲ ಮಂಜೂರು ಮಾಡಲಾಗಿದೆ. ಸುಕನ್ಯಾ ಸಮೃದ್ಧಿ ಯೋಜನೆಯಲ್ಲಿ 83,124 ಖಾತೆಗಳು, 100 ಗ್ರಾಮಗಳು ಸಂಪೂರ್ಣ ಸುಕನ್ಯಾ ಸಮೃದ್ಧಿ ಗ್ರಾಮಗಳಾಗಿವೆ. ಪಿಎಂ ಸುರಕ್ಷ ಭೀಮಾ ಯೋಜನೆಯಡಿ 10,255 ಜನರಿಗೆ ಪರಿಹಾರ. ಪಿಎಂ ಜೀವನ ಜ್ಯೋತಿ ಭೀಮಾ ಯೋಜನೆಯಡಿ 517 ಜನರಿಗೆ ಪರಿಹಾರ ದೊ–ರೆತಿದೆ. ಜಿಲ್ಲೆಯಲ್ಲಿ ಸರಾಸರಿ ಪ್ರತಿ ತಿಂಗಳು 357 ಜನ ಪಾಸ್‌ಪೋರ್ಟ್ ಪಡೆಯುತ್ತಿದ್ದಾರೆ ಎಂದು ಬಿಜೆಪಿ ಜಿಲ್ಲಾ ಅಧ್ಯಕ್ಷರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಈಶ್ವರ ಆದ್ಯಪ್ಪಗೋಳ, ಜಿಲ್ಲಾ ವಕ್ತಾರ ಸತ್ಯನಾರಾಯಣ ಹೇಮಾದ್ರಿ, ಬಸವರಾಜ ಅವರಾದಿ, ಮುತ್ತಣ್ಣ ಬೆಣ್ಣೂರ, ಶಿವು ಸುರಪುರ ಇತರರು ಇದ್ದರು.

# ಪ್ರತಿಯೊಬ್ಬ ವಿದ್ಯಾರ್ಥಿ ಹತ್ತು ಗಿಡ ನೆಡಲು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:–ಕೇವಲ ವರ್ಷಕ್ಕೆ ಒಂದು ದಿನದ ಪರಿಸರ ರಕ್ಷಣೆ ಎಂಬುದು ಸೀಮಿತವಾಗಬಾರದು. ಪ್ರತಿ ದಿನವು ನಮಗೆ ಪರಿಸರ ದಿನವಾಗಬೇಕು. ಏಕೆಂದರೆ ಪರಿಸರ ನಮ್ಮ ಜೀವನದ ಅವಿಭಾಜ್ಯ ಅಂಶವಾಗಿದೆ ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆಗಾರಿಕೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರಬೆಲ್ದಾಳೆಅವರು ಹೇಳಿದರು. ಬೀದರ ದಕ್ಷಿಣ ಕ್ಷೇತ್ರದ ಮನ್ನಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಬೀದರ ಅರಣ್ಯ ವಿಭಾಗ, ಬೀದರ್ ಪ್ರಾದೇಶಿಕ ಹಾಗೂ ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ಆಯೋಜಿಸಿದ್ದ ವನಮಹೋತ್ಸವ ಹಾಗೂ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪರಿಸರ ಎಂಬ ಜೀವಜಾಲದಲ್ಲಿ ಜೀವಿಗಳು ಒಂದನೊಂದು ರೂಪದಲ್ಲಿ ಅಂದರೆ ಪ್ರತ್ಯಕ್ಷ ಅಥವ ಪರೋಕ್ಷವಾಗಿ ಅವಲಂಬಿಸಿ ಪರಸ್ಪರ ಪ್ರಭಾವಿಸುತ್ತ ಇರುತ್ತಿದೆವೆ. ಈ ರೀತಿಯ ಪರಸ್ಪರ ಅವಲಂಬನೆಯು ಸಕಲ ಜೀವಿಗಳನ್ನೂ ಆಹಾರ ಸರಪಳಿಯ ರೂಪದಲ್ಲಿ ಬೆಸೆದು, ಅವುಗಳ ಪರಸ್ಪರ ಪ್ರಭಾವಗಳನ್ನು ಇನ್ನು ನಿಕಟಗೊಳಿಸಿಜೀವಜಾಲವನ್ನಾಗಿಸಿದೆ. ಹಿಂದಿನ ದಿನಗಳಲ್ಲಿದ್ದ ಪರಿಸರ ಕಾಳಜಿ ಇಂದಿನ ಯುವಕರಲ್ಲಿ ಉಳಿದಿಲ್ಲ. ವರ್ಷದಿಂದ ವರ್ಷಕ್ಕೆ ಮಳೆ ಕಡಿಮೆಯಾಗುತ್ತಿದ್ದು ಯುವಕರು ಪರಿಸರದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕಿದೆ ಎಂದರು. ಇಂದಿನ ದಿನಗಳಲ್ಲಿ ಗಿಡಗಳನ್ನು ನೆಟ್ಟರೆ ಮುಗಿಯುವುದಿಲ್ಲ, ಪ್ರತಿ ದಿನ ಅವುಗಳನ್ನು ಮಕ್ಕಳಂತೆ ನೋಡಿಕೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯೂ ಸಹ ಗಿಡಗಳ



ಬಗ್ಗೆ ಜಾಗೃತಿ ವಹಿಸಿ ಪಾಲನೆ ಪೋಷಣೆ ಮಾಡಿದರೆ ಮಾತ್ರ ಪರಿಸರ ದಿನಾಚರಣೆ ಸಾರ್ಥಕ ಎಂದು ಸಲಹೆ ನೀಡಿದರು. ಪರಿಸರವು ಎರಡು ಮುಖದ ನಾಣ್ಯದ ಹಾಗೆ. ಪ್ರೀತಿ, ಮಮತೆ, ವಾತ್ಸಲ್ಯವು ಒಂದು ಶಾಂತತೆ–ಯ ಮುಖವಾದರೆ. ಸುನಾಮಿ, ಭೂಕಂಪ, ಚಂಡಮಾರುತ ಹೀಗೆ ಮುಂತಾದ ಪ್ರಕೃತಿವಿಕೋಪಗಳು ಹಾನಿ ಮಾಡಿದ ಮನುಕುಲಕ್ಕೆ ತಕ್ಕ ಪಾಠ ಕಲಿಸುವ ಇನ್ನೊಂದು ರೌದ್ರ ಮುಖವಾಗಿದೆ. ನಾವು ಒಂದು ಕೈಯಲ್ಲಿ ಏನನ್ನು ಕೋಡುತ್ತೇವೋ ಅದೇ ನಮಗೆ ಮರಳಿ ಬರುವುದು. ಅಂದರೆ, ನಾವು ಪರಿಸರಕ್ಕೆ ಒಳಿತು ಮಾಡಿದರೆ, ಶಾಂತವಾಗಿರುವ ಪಕೃತಿಯು ನಮಗೊಲಿಯುತ್ತದೆ. ಕೇಡು ಬಯಸಿದರೆ, ಅದೇ ಪ್ರಕೃತಿಯ ರೌದ್ರಾವತಾರವನ್ನು ಕಾಣಬಹುದಾಗಿದೆ. ಆಯ್ಕೆ ನಮ್ಮದೇ. ಪರಿಸರ, ಅರಣ್ಯ ಪ್ರದೇಶ, ವನ್ಯಜೀವಿಗಳನ್ನು ರಕ್ಷಿಸಲು ಹಲವಾರು ಅಭಿಯಾನಗಳನ್ನು ಸರಕಾರ ಹಮ್ಮಿಕೊಳ್ಳುತ್ತಿದೆ ಆದರೂ, ಅದರಲ್ಲಿ ನಮ್ಮ ಪಾಲು ಸಹ ಅತ್ಯಗತ್ಯ. ಹನಿ ಹನಿ ಕೂಡಿದ–ರೆ ಹಳ್ಳ ಎಂಬಂತೆ ನಮ್ಮಿಂದ ಅಳಿಲುಸೇವೆಯಾದರೆ ಪರಿಸರವನ್ನು ಉಜ್ವಲ ರೀತಿಯಲ್ಲಿ ಕಾಣಬಹುದು. ಹೀಗೆ ಪರಿಸರವನ್ನು ನಾವು ನಾಶ ಮಾಡುತ್ತಹೋದರೆ, ಮುಂದೊಂದು ದಿನ ನಮ್ಮ ಜೀವಕ್ಕೆ ತೊಂದರೆ–ಯಾಗಿ, ಮನುಕುಲವೇ ನಾಶವಾಗಿ, ಮನುಷ್ಯನಿಲ್ಲದ ಭೂಮಿಯಾಗುತ್ತದೆ. ಪರಿಸರವನ್ನು ತಾಯಿಯಂತೆ ಪೂಜಿಸಿ, ಮಗುವಿನಂತೆ ಪಾಲನೆ ಮಾಡಬೇಕು ಎನ್ನುವುದೇ ಪರಿಸರ ದಿನಾಚರಣೆಯ ನಿಲುವು ಎಂದರು. ಈ ಸಂದರ್ಭದಲ್ಲಿ ಬೀದರ್ ಪ್ರಾದೇಶಿಕ ವಲಯ ಅರಣ್ಯ ಅಧಿಕಾರಿ ವಿಜಯಕುಮಾರ್ ವಿ ಜಾಧವ್, ಬೀದರ್ ಸಾಮಾಜಿಕ ವಲಯ ಅರಣ್ಯ ಅಧಿಕಾರಿ ಶಿವಕುಮಾರ್ ಗೋಪಾಲ್ ಸಿಂಗ್ ರಾಥೋಡ್, ಉಪ ವಲಯ ಅರಣ್ಯ ಅಧಿಕಾರಿ ರಘುನಾಥ್ ರಾಥೋಡ್, ಬಗ್ದಲ್ ಉಪ ವಲಯ ಅರಣ್ಯ ಅಧಿಕಾರಿ ರಾಜಶೇಖರ್, ಗಸ್ತು ಅರಣ್ಯ ಪಾಲಕರು ಪರಶುರಾಮ್ ಶಾಪುರ, ಮುಖಂಡರಾದ ಅನೀಲಕುಮಾರ ಪನ್ನಾಳೆ, ಸುರೇಶ ಮಾಶೆಟ್ಟಿ, ಚಂದು ಮಡಕಿ, ಚಂದ್ರಯ್ಯಾ ಸ್ವಾಮಿ, ಅನೀಲ್ ಗುನ್ನಳ್ಳಿ, ವಿಜಯಕುಮಾರ ಗಣಪೂರ, ದೀಪಕ ಮನ್ನಳ್ಳಿ, ಶಮದ ಶಾ, ಮಲ್ಲಿಕಾರ್ಜುನ ಮುಲಗಿ, ನಾಗಶೆಟ್ಟಿ ಚಟ್ಟನಳ್ಳಿ, ಬಕ್ಕಪ್ಪ ಲಾಲಚಡಿ, ರಮೇಶ ಕೋಳಿ, ಜಗನ್ನಾಥ ಮೂಲಗಿ, ಸಂಗಮೇಶ ಗೌಶಪುರ, ಕಾಲೇಜ್ ಪ್ರಾಂಶುಪಾಲರಾದ ಧನರಾಜ ಬೀರಾದರ, ಪ್ರೊ ಶರಣಪ್ಪ ಪರಿಸರ ಪ್ರೇಮಿ ಶೈಲೇಂದ್ರ ಕಾವಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಂದಿರದ ಎದುರು ಪ್ರಾಣಿ ಮಾಂಸ ಕ್ರಮಕ್ಕೆ ಅಂಜುಮನ್ ಕಮೀಟಿ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.11–ಕಲಾದಗಿ ಗ್ರಾಮದ ಮಂದಿರವೊಂದರ ಮುಂದೆ ಪ್ರಾಣಿಯ ದೇಹದ ಅವಶೇಷವನ್ನು ಕಿಡಿಗೇಡಿಗಳು ತಂದಿಟ್ಟುಹೋಗಿರುವ ಘಟನೆಯನ್ನು ಸ್ಥಳಿಯ ಅಂಜುಮನ್ ಕಮೀಟಿ ಖಂಡಿಸಿದ್ದು, ಗ್ರಾಮದ ಸಾಮರಸ್ಯವನ್ನು ಹಾಳು ಮಾಡಲು ಹೊರಟಿರುವ ಇಂಥಹ ದುಷ್ಕರ್ಮಿಗಳು ಯಾರೇ ಇರಲಿ ಅವರ ಮೇಲೆ ಪೋಲಿಸ್ ಇಲಾಖೆ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಗ್ರಾಮದ ಅಂಜುಮನ್ ಕಮೀಟಿ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಮೀಟಿಯ ಪ್ರಮುಖ ಎಂ.ಬಿ.ಸೌದಾಗರ, ಗ್ರಾಮದಲ್ಲಿ ಯಾವುದೇ ಕಾರ್ಯಕ್ರಮವಿದ್ದರೂ ಎಲ್ಲರೂ ಸೇರಿ ಮಾಡುತ್ತೇವೆ. ಹಿಂದೂ–ಮುಸ್ಲಿಂ ಬಾಂಧವರೆಲ್ಲರೂ ಸೌಹಾರ್ದತೆಯಿಂದ ಬಾಳುತ್ತಿರುವ ಗ್ರಾಮದಲ್ಲಿ ಇಂಥಹ ಸಲ್ಲದ ಬೆಳವಣಿಗೆ ನಡೆದಿರುವುದನ್ನು ಕಮೀಟಿ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದರು.

ಘಟನೆಗೆ ಕಾರಣರಾದವರನ್ನು ಬಂಧಿಸಬೇಕು ಹಾಗೂ ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಇದಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ ಎಂದು ಹೇಳಿದ ಸೌದಾಗರ, 35 ವರ್ಷದ ಹಿಂದೆಯೇ ಸ್ಥಳೀಯ ಗುರುಲಿಂಗೇಶ್ವರ ಮಠದ ಪೂಜ್ಯರಾದ ಪಡದಪ್ಪಜ್ಜನವರು ಮುಸ್ಲಿಂ ಬಾಂಧವರ ಮಕ್ಕಳ ಶಿಕ್ಷಣ–ಕ್ಕೆ ತೊಂದರೆಯಾಗದಿರಲೆಂದು ತಮ್ಮ ಗುರುಲಿಂಗೇಶ್ವರ ವಿದ್ಯಾ ಸಂಸ್ಥೆಯಲ್ಲಿ ಉರ್ದು ಶಿಕ್ಷಣದ ವಿಭಾಗವನ್ನು ತಂದಿರುವುದು ಎಂದಿಗೂ ಮರೆಯಲಾರದ ಕೆಲಸ. ಅಂಥಹ ಭಾವೈಕ್ಯತೆಯ ಊರಿನಲ್ಲಿ ಇಂತಹ ಘಟನೆಗೆ ಅವಕಾಶವೇ ಇಲ್ಲ ಎಂದು ಹೇಳಿದರು.

ಅಂಜುಮನ್ ಕಮೀಟಿಯ ಅಧ್ಯಕ್ಷ ಅಲಹಾಜ್ ಶಫೀಕಅಹ್ಮದ್ ಬೇಪಾರಿ, ಉಪಾಧ್ಯಕ್ಷ ಚಾಂದಸಾಬ ಕಲಾದಗಿ, ಕಾರ್ಯದರ್ಶಿ ಹಾರೂನಖಾನ ಪಠಾಣ, ಸದಸ್ಯರಾದ ಬಂದೇನವಾಜ್ ಸೌದಾಗರ, ಉಸ್ಮಾನಸಾಬ ರೋಣ, ಅಬ್ದುಲರಜಾಕ ಮಾಲ್ದಾರ, ಮಜೀಜ ಗೋರಿಪಠಾಣ, ಗೈಬುಸಾಬ ಬದಾಮಿ, ಸೈಫುದ್ದಿನ ಹುಬ್ಬಳ್ಳಿ, ಎಂ.ಎಚ್. ತೋಟದ, ಆರ್.ಡಿ.ಆದವಾನಿ, ಎಂ.ಬಿ.ಮಾಲ್ದಾರ ಹಾಗೂ ಎಂ.ಎ.ತೇಲಿ ಇದ್ದರು.

# ತಾಂಡಾಗಳು ಕಂದಾಯ ಗ್ರಾಮಗಳಾಗಲಿವೆ : ಜೆ.ಟಿ.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.11–ಜಿಲ್ಲೆಯ ಎಲ್ಲಾ ತಾಂಡಾಗಳು ಇನ್ನು ಮುಂದೆ ಕಂದಾಯ ಗ್ರಾಮಗಳಾಗಲಿವೆ ಎಂದು ಬೀಳಗಿ ಮತಕ್ಷೇತ್ರದ ಶಾಸಕ ಜೆ.ಟಿ.ಪಾಟೀಲ ಹೇಳಿದರು.

ಬುಧವಾರ ಗದ್ದನಕೇರಿ ತಾಂಡಾದ ದುರ್ಗಾದೇವಿ ಮಂದಿರದ ಸಭಾಭವನದಲ್ಲಿ ಬಾಗಲಕೋಟೆ ತಾಲೂಕಾ ಆಡಳಿತ, ತಾಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ ಗದ್ದನಕೇರಿ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ತಾಂಡಾ ಅಭಿವೃದ್ಧಿಗಾಗಿ ಎರಡು ಎಕರೆ ಜಮೀನು, ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ, ಮಾಸಾಶನ, ಕಂದಾಯ ಇಲಾಖೆ ಸಿಬ್ಬಂದಿಗಳಿಗೆ ಲ್ಯಾಪ್‌ಟಾಪ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇನ್ನು ಮುಂದೆ ಪ್ರತಿ ಗ್ರಾಮ ಹಾಗೂ ಪಟ್ಟಣ ಪ್ರದೇಶಗಳಿಗೆ ದೊರಕಬಹುದಾದ ಎಲ್ಲ ಸೌಲಭ್ಯಗಳು ತಾಂಡಾಗಳಿಗೂ ದೊರೆಯಲಿವೆ. ಮುಂಬರುವ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳ ಜಮೀನು ಪೋಡಿ ಮುಕ್ತಾಯವಾಗಲಿದ್ದು, ಒತ್ತುವರಿ ಮಾಡುವ ಯಾವ ಕಾರ್ಯಗಳು ನಡೆಯುವುದಿಲ್ಲ ಎಂದು ಪಾಟೀಲ ಹೇಳಿದರು.

ರೈತರು ತಮ್ಮ ಜಮೀನಿಗೆ ಸಂಬಂಧಿಸಿದ ಯಾವುದೇ ಕೆಲಸಗಳಿಗೆ ತಮ್ಮ ಬಳಿ ಬಂದಾಗ ವಿಳಂಬ ಮಾಡದೇ ಗೌರವದಿಂದ ಅವರ ಕೆಲಸ ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಶಾಸಕರು, ಹಿಂದಿನಂತೆ ಇಂದು ತಾಂಡಾಗಳು ಇಲ್ಲ, ಪ್ರತಿಯೊಬ್ಬರೂ ಸುಧಾರಣೆಗೊಳ್ಳುತ್ತಿದ್ದಾರೆ. ಕೇವಲ ಮನೆ, ವಾಹನಗಳಿಂದ ಸುಧಾರಿಸದೇ ಪ್ರತಿಯೊಬ್ಬ ತಂದೆ ತಾಯಿಯರು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು. ಯಶವಂತ ರಾಥೋಡ ಇಲ್ಲಿಯ ಗ್ರಂಥಾಲಯ ಅಭಿವೃದ್ಧಿಗಾಗಿ ಒಂದು ಲಕ್ಷ ಹಣ ನೀಡಿದ್ದಾರೆ, ಇದರಿಂದ ಇನ್ನು ಮುಂದೆ ನಿಮ್ಮ ತಾಂಡಾ ಸುಧಾರಿಸಲಿದೆ ಎಂದು ಹೇಳಿದರು.

ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ್ ಪ್ರಾಸ್ತಾವಿಕವಾಗಿ ಮಾತನಾಡಿ, ಗದ್ದನಕೇರಿ ತಾಂಡಾದ ಒಟ್ಟು 478 ಫಲಾನುಭವಿಗಳು ಹಕ್ಕುಪತ್ರ ಪಡೆದಿದ್ದಾರೆ. ಸರ್ವೆ ಪೂರೈಸಿದ ಫಲಾನುಭವಿಗಳು 448, ಜಿ.ಪಿ.ಎಸ್.ಪೂರೈಸಿದ ಫಲಾನುಭವಿಗಳು 448 ಇದ್ದು, ಸರಕಾರಕ್ಕೆ ಶುಲ್ಕ ಪಾವತಿ ಮಾಡಿದ 360 ಜನರಿದ್ದು, ಸದ್ಯ ಹಕ್ಕುಪತ್ರ ಪಡೆದುಕೊಳ್ಳುತ್ತಿರುವವರ ಸಂ–ಖ್ಯೆ 185 ಇದೆ. ಬಾಕಿ ಇರುವ ಮತ್ತು ಇನ್ನೂ ಸರ್ವೆ ಮಾಡದ ಫಲಾನುಭವಿಗಳು 30 ಜನರಿದ್ದಾರೆ ಎಂದು ತಿಳಿಸಿದರು.

ಕಲಾದಗಿ ಹೋಬಳಿ ವ್ಯಾಪ್ತಿಯ ಖಜ್ಜಿಡೋಣಿ, ಶಾರದಾಳ, ತುಳಸಿಗೇರಿ, ಗೋವಿಂದಕೊಪ್ಪ, ಯಡಹಳ್ಳಿ, ಛಬ್ಬಿ, ಸಿಂದಗಿ, ಸೋರಕೊಪ್ಪ, ಹೊನ್ನರಹಳ್ಳಿ, ಗದ್ದನಕೇರಿ ಗ್ರಾಮಗಳ ಜನರಿಗೆ ಪಾವತಿ ಖಾತಾ ಮಾಡಿದ ಪಹಣಿಗಳನ್ನು ವಿತರಿಸಲಾಗಿದೆ ಎಂದರು.

ಬಾಗಲಕೋಟ ತಹಸೀಲ್ದಾರ್ ಅಮರೇಶ ಪಮ್ಮಾರ ಸ್ವಾಗತಿಸಿದರು. ಗ್ರೇಡ್–2 ತಹಸೀಲ್ದಾರ್ ಮಲ್ಲನಗೌಡ ಬಿರಾದಾರ ವಂದಿಸಿದರು. ಕಾರ್ಯಕ್ರಮದಲ್ಲಿ ಗದ್ದನಕೇರಿ ಗ್ರಾ.ಪಂ. ಅಧ್ಯಕ್ಷ ವೆಂಕಟೇಶ ಹಿರೇಮಠ, ಉಪಾಧ್ಯಕ್ಷೆ ಜಯಶ್ರೀ ದೊಡಮನಿ, ತಾಪಂ. ಇ.ಓ. ಸುಭಾಸ ಸಂಪಗಾವಿ, ಶಿವು ರಾಠೊಡ, ಸಿದ್ದಣ್ಣ ಛಬ್ಬಿ, ಜಿಪಂ. ಮಾಜಿ ಸದಸ್ಯ ಪಾಂಡು ಪೋಲಿಸ್, ವಿಠ್ಠಲ್ ಲಮಾಣಿ, ಮಾನಪ್ಪ ಲಮಾಣಿ, ಬಿ.ಟಿ.ಡಿ.ಎ. ಸಹಾಯಕ ಅಭಿಯಂತರ ಸೋಮಲಿಂಗಪ್ಪ ನೋಟಗಾರ, ಚಂದ್ರು ಕುರಿ, ಸಿದ್ದಣ್ಣ ಜಕ್ಕನಗೌಡರ ಇತರರು ಇದ್ದರು.

# ಜಾನಪದ ಕೃತಿಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.11–ಕರ್ನಾಟಕ ಜಾನಪದ ಅಕಾಡೆಮಿಯು 2024ನೇ ಸಾಲಿನಲ್ಲಿ ದಿನಾಂಕ:01–01–2024 ರಿಂದ 31–12–2024ರವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ) ಕನಿಷ್ಠ 150 ಪುಟಗಳಿಗೂ ಮೇಲ್ಪಟ್ಟಿರುವಂತೆ ಈ ಕೆಳಕಂಡ ನಾಲ್ಕು ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನ ನೀಡುವ ಯೋಜನೆಯಡಿ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿಯ ರಜಿಸ್ಟ್ರಾರ್ ಅವರು ತಿಳಿಸಿದ್ದಾರೆ.

# ಕೃಷಿ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್,11–"ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಮತ್ತು ಹಸಿರು ನಾಳೆಯ ಕಡೆಗೆ" ಎಂಬ ಶೀರ್ಷಿಕೆಯಡಿ ನಗರದಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಅರಣ್ಯ ಇಲಾಖೆ ಪ್ರಾದೇಶಿಕ ವಿಭಾಗ ಇವರ ಸಹಯೋಗದೊಂದಿಗೆ ಜೂನ್ 5ರಂದು ವಿಶ್ವ ವಿದ್ಯಾಲಯದ ಆವರಣದಲ್ಲಿ ಸುಸ್ಥಿರ ಜೀವನವನ್ನು ಪ್ರೇರೇಪಿಸಲು ದೊಡ್ಡ ಪ್ರಮಾಣದ ಸಸಿಗಳನ್ನು ನೆಡುವ ಅಭಿಯಾನ, ವಿಶ್ವ ಪರಿಸರ ದಿನಾಚರಣೆ ಮತ್ತು ಹಸಿರು ಪದವಿ ಕಾರ್ಯಕ್ರಮವು ಅರ್ಥಪೂರ್ಣವಾಗಿ ನಡೆಯಿತು.

ಕೃಷಿ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಡಾ.ಶಹಬಾಜ್ ನೂರಿ ಅವರು ಸ್ಥಾಪಿಸಿದ "ಫಾರೆಸ್ಟ್ ವುಡ್ ಮ್ಯೂಸಿಯಂನ್ನು ಇದೆ ವೇಳೆ ಗೌರವಾನ್ವಿತ ಕುಲಪತಿಗಳು ಉದ್ಘಾಟಿಸಿದರು. ಇದೆ ವೇಳೆ ವಾಣಿಜ್ಯಕ್ಕೆ ಸಂಬಂಧಿಸಿದಂತೆ ಪ್ರಮುಖವಾದ 36 ಮರದ ಮಾದರಿಗಳು, 42 ಅರಣ್ಯ ಬೀಜ ಮಾದರಿಗಳು, ಪರಿಸರ ಸ್ನೇಹಿ ವಿವಿಧ ಮರ ಆಧಾರಿತ ಉತ್ಪನಗಳ ಪ್ರದರ್ಶನ ನಡೆಯಿತು. ಗೌರವಾನ್ವಿತ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಮಾತನಾಡಿ, ಏಕ ಬಳಕೆಯ ಪ್ಲಾಸ್ಟಿಕಗಳನ್ನು ತೆಗೆದು ಹಾಕುವ ತುರ್ತು ಅಗತ್ಯವಿದೆ. ಜೀವವೈವಿಧ್ಯತೆ, ಪರಿಸರ ಉಸ್ತುವಾರಿ ಮತ್ತು ಹವಾಮಾನ ಸ್ಥಿತಿ ಸ್ಥಾಪಕತ್ವಕ್ಕೆ ವಿಶ್ವವಿದ್ಯಾಯದ ಬದ್ಧತೆಯನ್ನು ಬಲಪಡಿಸುವನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ ಸಸಿಗಳನ್ನು ನೆಡುವ ಮೂಲಕ ಪ್ರತಿಯೊಬ್ಬ ವಿದ್ಯಾರ್ಥಿಯು ಪದವಿ ಪಡೆಯುವರೆಗೂ ಒಂದು ಸಸಿಯನ್ನು ದತ್ತು ತೆಗೆದುಕೊಂಡು ಅದನ್ನು ಪಾಲನೆ ಪೋಷಣೆ ಸಂರಕ್ಷಣೆಯನ್ನು ನೋಡಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಲು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ಕುಲಸಚಿವರಾಧ ಡಾ.ದುರ್ಗೇಶ್, ಡೀನ್ ಡಾ.ನಾರಾಯಣರಾವ್ ಕೆ., ಕೃಷಿ ಎಂಜಿನಿಯರಿಂಗ್ ಡೀನ್ ಡಾ.ಎಂ.ಎಸ್.ಅಯ್ಯನಗೌಡರು, ಪರಿಸರ ವಿಜ್ಞಾನ ಮತ್ತು ಅರಣ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಬಸವರಾಜ ಹಾಗೂ ವಿಶ್ವವಿದ್ಯಾಲಯದ ಹಲವಾರು ಪ್ರಮುಖ ಅಧಿಕಾರಿಗಳು, ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕ–ಶಿಕ್ಷೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಸಭೆ:

# ಸಂಘಟನೆ ಬಲಪಡಿಸುವಿಕೆ, ಪತ್ರಿಕಾ ದಿನಾಚರಣೆ, ಸದಸ್ಯತ್ವ ಅಭಿಯಾನಕ್ಕೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ್,ಜೂ.11:–ಬುಧವಾರ ಬೀದರ್ ಜಿಲ್ಲಾ ಘಟಕದ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ವತಿಯಿಂದ ಪತ್ರಿಕಾ ಭವನದಲ್ಲಿ ಇಂದು ಸಭೆ ನಡೆದು ಸದಸ್ಯತ್ವ ನವೀಕರಣ ಮತ್ತು ಸಂಘಟನೆ ಬಗ್ಗೆ ಚರ್ಚಿಸಲಾಯಿತು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಘಟಕದ ವತಿಯಿಂದ ಇದುವರೆಗೆ ಕೈಗೊಂಡಿರುವ ಕೆಲಸ ಕಾರ್ಯಗಳ ಬಗ್ಗೆ ಸಭೆಯಲ್ಲಿ ಸಂಘದ ಅಧ್ಯಕ್ಷ ವಿಜಯಕುಮಾರ ಪಾಟೀಲ ಅವರು ಸುದೀರ್ಘವಾಗಿ ವಿವರಿಸಿದರು. ಕೆಕೆಆರ್‌ಡಿಬಿಯಿಂದ ಪತ್ರಿಕೆಗಳಿಗೆ ಜಾಹೀರಾತು ಪಡೆಯಲು ಮಾಡಿರುವ ಪ್ರಯತ್ನ ಸ್ಥಳೀಯ ಪತ್ರಿಕೆಗಳಿಗೆ ಜಾಹೀರಾತು ಒದಗಿಸಿರುವ ಬಗ್ಗೆ. ಟೆಂಡರ್ ಜಾಹೀರಾತುಗಳನ್ನು ವಾರ್ತಾ ಇಲಾಖೆ ಮೂಲಕ ನೀಡಬೇಕೆಂಬ ಸಿಇಒ ಆದೇಶ ಮತ್ತು ಎಲ್ಲಾ ತಾಲೂಕ ಪಂಚಾಯತ್ ಪಿಡಿಓಗಳ ಆದೇಶ, ಭೂ ಸ್ವಾಧೀನ ಪೆಂಡಿಂಗ್ ಬಿಲ್ಲುಗಳು ಇಲಿಯವರಿಗೆ ಬೆಂಗಳೂರಿನ ಕರ್ನಾಟಕ ನೀರಾವರಿ ನಿಗಮ ನಿಯಮಿತ ಎಂಡಿ ಅವರಿಂದ ಹೊಸ ಆದೇಶ ಹೊರಡಿಸಲು ಸಿದ್ಧವಾಗಿದೆ ಎಂಬ ಮಾಹಿತಿ ಸಭೆಗೆ ತಿಳಿಸಲಾಯಿತು. ನಮ್ಮ ಸಂಘದ ಮನವಿ ಪತ್ರದ ಮೇಲೆ ಪೊಲೀಸ ವರಿಷ್ಠಾಧಿಕಾರಿಗಳು ಇತ್ತೀಚಿಗೆ ನೀಡಿರುವ ಐಡಿ ಕಾರ್ಡ್ಗಳ ವಿತರಣೆ ನಮ್ಮ ಸಂಘದ ಹೆಮ್ಮೆಯ ಕೆಲಸಗಳಲ್ಲಿ ಒಂದಾಗಿದೆ. ಬೇರೆ ಸಂಘಟನೆಯಿಂದ ನಮ್ಮ ಸಂಘದ ಸದಸ್ಯರುಗಳಿಗೆ, ಪದಾಧಿಕಾರಿಗಳಿಗೆ ಬೆದರಿಕೆ ಹಾಗೂ ಸದಸ್ಯತ್ವಗೊಂದಲದ ಬಗ್ಗೆ ಮಾಡುತ್ತಿರುವ ವಿಚಾರ ಸಭೆಯಲ್ಲಿ ವ್ಯಾಪಕವಾಗಿ ಚರ್ಚಿಸಲಾಯಿತು. ಇದಕ್ಕೆ ಸಭೆಯಲ್ಲಿ ಉಪಸ್ಥಿತರಿದ್ದ ಪ್ರಾದೇಶಿಕ ಪತ್ರಿಕೆಗಳ ಅಧ್ಯಕ್ಷ ಬಾಬು ವಾಲಿಯವರು ಮಾತನಾಡಿ ಈ ಸಮಸ್ಯೆ ಬಗೆಹರಿಸೋಣ ಎಲ್ಲರೂ ಕೂಡಿ ಹೋಗೋಣ ಎಂಬ ವಿಚಾರ ವ್ಯಕ್ತಪಡಿಸಿದರು.

ಇದಕ್ಕೆ ಇನ್ನೊಬ್ಬರು ಹಿರಿಯ ಪತ್ರಕರ್ತರಾದ ಮಾಳಪ್ಪ ಅಡಸಾರೆ ಸಹ ಈ ಸಮಸ್ಯೆ ದೊಡ್ಡದಲ್ಲ ಈ ತರಹ ಯಾರೇ ಮಾಡಿದರು ಅದು ಒಪ್ಪುವಂತದ್ದಲ್ಲ ಇದನ್ನು ಖಂಡಿಸಿ ಸರಿ ಮಾಡಿಸೋಣ ಎಂದು ತಿಳಿಸಿದರು. ಇಂಥ ಕೆಲಸ ಆ ಸಂಘದ ಕಾರ್ಯದರ್ಶಿಗಳಿಂದ ನಡೆಯುತ್ತಿದೆ ಇದು ನಿಲ್ಲಬೇಕೆಂದು ಮತ್ತೊಬ್ಬ ಹಿರಿಯ ಹಾಗೂ ಕೆಡಬ್ಲ್ಯೂಜೆ ಮಾಜಿ ಅಧ್ಯಕ್ಷ ಅಶೋಕ್ ಕುಮಾರ್ ಕರಂಜಿ ತಿಳಿಸಿದರು. ಸಂಘಟನೆ ಬಲವಾಗಿ ಬೆಳೆಯಬೇಕು ಸಂಪಾದಕರ ಸಂಘ ಬಲಿಷ್ಠಗೊಳಿಸಬೇಕು ಇದರಲ್ಲಿ ಎರಡು ಮಾತಿಲ್ಲ ಎಂದು ಸಂಘಟನಾ ಕಾರ್ಯದರ್ಶಿ ರಮೇಶ್ ರೆಡ್ಡಿ, ಸುನಿಲ್ ಕುಲಕರ್ಣಿ, ಪ್ರದೀಪ ಬಿರಾದಾರ, ಬಸವರಾಜ ಪವಾರ, ಅಜಯ್ ಭೋಸ್ಲೆ, ನಂದಕುಮಾರ, ಅಬ್ದುಲ್ ಖದೀರ್ ಅವರುಗಳು ಸಭೆಯಲ್ಲಿ ಎಲ್ಲರೂ ಒಕ್ಕುರಲಿನಿಂದ ತಿಳಿಸಿದರು. ಪತ್ರಿಕಾ ದಿನಾಚರಣೆ ಬಗ್ಗೆ ಚರ್ಚೆಯಾಗಿ ಸಂಪಾದಕರ ಸಂಘದಿಂದ ನಡೆಸುವ ಬಗ್ಗೆ ಹಾಗೂ ಮೂರು ಸಂಘಗಳಿಂದ ಒಟ್ಟಿಗೆ ನಡೆಸುವ ಬಗ್ಗೆ ಕೆಲವರು ಸಭೆಯಲ್ಲಿ ಸಲಹೆ ನೀಡಿದರು. ಹೀಗಾಗಿ ಮುಂದಿನ ಸಭೆಯಲ್ಲಿ ತೀರ್ಮಾನಿಸಲು ನಿರ್ಧರಿಸಲಾಯಿತು. ಮೂರು ಸಂಘದ ಜಂಟಿಯಾಗಿ ಹಾಗೂ ಮೂರು ಅಧ್ಯಕ್ಷರು ಒಗ್ಗಟ್ಟಾಗಿ ದಿನಾಚರಣೆ ಆಚರಿಸಬೇಕು ತಿಳಿಸಿದರು. ಯಾವುದಕ್ಕೂ ಇನ್ನೊಂದು ಸಭೆಯಲ್ಲಿ ನಿರ್ಧಾರ ಮಾಡೋಣ ಎಂದು ಸಭೆಗೆ ತಿಳಿಸಲಾಯಿತು.

ಮಾಧ್ಯಮ ಪಟ್ಟಿಯಲ್ಲಿರುವ ಹಾಗೂ ಮಾನ್ಯತೆ ಪಡೆದ ಪತ್ರಿಕರ್ತರ ಕಷ್ಟ ಸುಖ ಹಾಗೂ ಜಾಹಿರಾತು ಬಗ್ಗೆ ನಮ್ಮ ಸಂಘ ಸದಾ ಹೋರಾಡಲಿದೆ ಹಾಗೂ ಈ ಸವಲತ್ತಿಗಾಗಿ ನಮ್ಮ ಸಂಘ ಏಕಾಂಗಿಯಾಗಿ ಮನವಿ ಪತ್ರಗಳನ್ನು ಮುಂದುವರಿಯುತ್ತದೆ ಎಂಬ ವಿಚಾರ ಸಂಘದ ಸಭೆಯಲ್ಲಿ ಚರ್ಚೆಗೆ ಬಂತು ಎಲ್ಲರೂ ಒಪ್ಪಿಗೆಯು ದೊರೆಯಿತು. ಪ್ರಮುಖ ವಿಷಯವಾಗಿ ಸಂಘಕ್ಕೆ ಸದಸ್ಯರಾಗಲು ಮೊದಲು ಬಾಬು ವಾಲಿಯವರು ಸದಸ್ಯತ್ವ ಪಡೆದು–ಕೊಂಡರು. ನಂತರ ಸಂಘದ ರಾಜ್ಯ ನಾಮ ನಿರ್ದೇಶಿತ ಸದಸ್ಯರಾದ ಮಾಜಿ ಕೆಡಬ್ಲ್ಯೂಜೆ ಬೀದರ್ ಅಧ್ಯಕ್ಷ ಅಶೋಕ್ ಕುಮಾರ್ ಕರಂಜಿ, ಮಾಜಿ ಕೆಡಬ್ಲ್ಯೂಜೆ ಅಧ್ಯಕ್ಷರಾದ ಮಾಳಪ್ಪ ಅಡಸಾರೆ ಹಾಗೂ ಬೀದರ್ ಟೈಮ್ಸ್ ಪತ್ರಿಕೆ ಸಂಪಾದಕರಾದ ಜಾರ್ಜ್ ಫರ್ನಾಂಡಿಸ್ ಅವರುಗಳು ಸಾಂಕೇತಿಕವಾಗಿ ಇಂದು ಸದಸ್ಯತ್ವ ಪಡೆಯುವುದರ ಮೂಲಕ ಸದಸ್ಯತ್ವ ಅಭಿಯಾನ ಮತ್ತು ನವೀಕರಣಕ್ಕೆ ಚಾಲನೆ ದೊರೆಯಿತು. ಇಂದಿನ ಸಭೆಗೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ವಿಜಯಕುಮಾರ್ ಪಾಟೀಲ, ಪ್ರಾದೇಶಿಕ ಪತ್ರಿಕೆಗಳ ಅಧ್ಯಕ್ಷ ಬಾಬು ವಾಲಿ, ರಾಜ್ಯ ಸಂಘಟನಾ ಕಾರ್ಯದರ್ಶಿ ರಮೇಶ್ ರೆಡ್ಡಿ, ರಾಜ್ಯ ಪ್ರತಿನಿಧಿ ಹಾಗೂ ಕೆಡಬ್ಲ್ಯೂಜೆ ಜಿಲ್ಲಾಧ್ಯಕ್ಷ ಅಶೋಕಕುಮಾರ್ ಕರಂಜಿ, ರಾಜ್ಯ ಪ್ರತಿನಿಧಿಗಳಾಗಿರುವ ಮಾಳಪ್ಪ ಅಡಸಾರೆ, ಅಜಯ್ ಬೋಸ್ಲೆ, ಬಸವರಾಜ್ ಪವಾರ್, ಉಪಾಧ್ಯಕ್ಷರಾದ ರಾಮಚಂದ್ರ ಬೋಸ್ಲೆ, ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ್ ಚೌದರಿ, ಕಾರ್ಯದರ್ಶಿ ಪ್ರದೀಪ್ ಬಿರಾದರ್, ಜಂಟಿ ಕಾರ್ಯದರ್ಶಿ ಅಬ್ದುಲ್ ಖದೀರ್, ಶರತ್‌ಕುಮಾರ್ ಘಂಟೆ, ಸಹ ಕಾರ್ಯದರ್ಶಿಗಳಾದ ಸುನಿಲ್ ಕುಲಕರ್ಣಿ, ಅಮರೇಶ್ ಚಿದ್ರೆ, ಸ್ವಾಮಿದಾಸ್, ಕಾರ್ಯಕಾರಿ ಸಮಿತಿ ಸದಸ್ಯ ಜೈ ಕುಮಾರ್ ಮತ್ತು ಸಂಪಾದಕರಾದ ನಂದಕುಮಾರ್, ಜಾರ್ಜ್ ಫರ್ನಾಂಡಿಸ್, ಉದಯಕುಮಾರ ಸೋನಿ ಇವರುಗಳು ಸಭೆಯಲ್ಲಿ ಭಾಗವಹಿಸಿದರು.

# 11 ವರ್ಷದಲ್ಲಿ ಮೋದಿ ಎಷ್ಟು ಭರವಸೆ ಈಡೇರಿಸಿದ್ದಾರೆ ಲೆಕ್ಕ ನೀಡಲಿ:ಖರ್ಗೆ ಪ್ರಶ್ನೆ


ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.11: ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ರಾಜ್ಯಸಭೆ ವಿರೋಧ ಪಕ್ಷದ ನಾಯಕರೂ ಆಗಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು,ಪ್ರಧಾನಿ ನರೇಂದ್ರಮೋದಿ ಅವರು 11 ವರ್ಷಗಳಲ್ಲಿ ಎಷ್ಟು ಭರವಸೆಗಳನ್ನು ಈಡೇರಿಸಿದ್ದಾರೆ ಎಂದು ಹೇಳಲಿ ಎಂದರು.

ಇಂದುನಗರದಲ್ಲಿಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಪ್ರಧಾನಿ ನರೇಂದ್ರಮೋದಿ ಅವರು ಚುನಾವಣೆ ವೇಳೆ ಎಷ್ಟು ಭರವಸೆಗಳನ್ನು ನೀಡಿದ್ದಾರೆ ಮತ್ತು ಅವುಗಳಲ್ಲಿ ಎಷ್ಟು ಭರವಸೆಗಳನ್ನು ಈಡೇರಿಸಿದ್ದಾರೆ ಎಂಬದನ್ನು ದೇಶದ ಜನತೆಗೆ ತಿಳಿಸಬೇಕು ಎಂದರು.

ನರೇಂದ್ರಮೋದಿ ಒಬ್ಬ ಸುಳ್ಳುಗಾರ ಮತ್ತು ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ನಂಬಿಕೆಯಿಲ್ಲದ ವ್ಯಕ್ತಿ ಎಂದು ಟೀಕಿಸಿದ ಖರ್ಗೆ, ಇಷ್ಟೊಂದು ಸುಳ್ಳು ಹೇಳುವ ಮತ್ತು ಜನರನ್ನು ತನ್ನ "ಬಲೆಗೆ ಬೀಳಿಸುವ" ಹಾಗೂ ಯುವಕರನ್ನು ವಂಚಿಸುವ ಪ್ರಧಾನಿಯನ್ನು ನಾನು ಎಂದಿಗೂ ನೋಡಿಲ್ಲ ಎಂದರು.

ಯುಪಿಎ ಮತ್ತು ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದ್ದಾಗ, ವಿರೋಧ ಪಕ್ಷಗಳ ನಾಯಕರಿಗೆ ಲೋಕಸಭೆಯಲ್ಲಿ ಉಪಸಭಾಪತಿ ಹುದ್ದೆಯನ್ನು ನೀಡಲು ಅವಕಾಶ ನೀಡುತ್ತಿತ್ತು. ಆದರೆ ಪ್ರಸ್ತುತ ಎನ್‌ಡಿಎ ಸರ್ಕಾರವು ಕಳೆದ 11 ವರ್ಷಗಳಿಂದ ಲೋಕಸಭೆಯಲ್ಲಿ ಉಪಸಭಾಪತಿ ಹುದ್ದೆಯನ್ನು ಖಾಲಿ ಇರಿಸಿದೆ ಮತ್ತು



ವಿರೋಧ ಪಕ್ಷಗಳ ನಾಯಕರಿಗೆ ಆ ಹುದ್ದೆಗೆ ಅವಕಾಶ ನೀಡುವ ಹಿಂದಿನ ಸ್ಪೀಕರ್ ಆದೇಶವನ್ನು ಮುರಿದಿದೆ ಎಂದರು.ವಾಜಪೇಯಿ ಸರ್ಕಾರ ಮಾಡಿದ ಕೆಲಸಗಳನ್ನು ಯುಪಿಎ ಹಲವಾರು ಬಾರಿ ಶ್ಲಾಘಿಸಿತು, ಆದರೆ ಮನಮೋಹನ್ ಸಿಂಗ್ ಅವರ ಅವಧಿಯಲ್ಲಿ ನಮ್ಮ ಸರ್ಕಾರ ಮಾಡಿದ ಉತ್ತಮ ಕೆಲಸಗಳನ್ನು ಶ್ಲಾಘಿಸುವ ಬದಲು, ಪ್ರಸ್ತುತ ಎನ್‌ಡಿಎ ಸರ್ಕಾರ ನಮ್ಮನ್ನು ದೂಷಿಸಿತು ಮತ್ತು ನಮ್ಮ ಸರ್ಕಾರವು ಹಿಂದೆ ಮಾಡಿದ ಅನೇಕ ಕೆಲಸಗಳನ್ನು ನಿಲ್ಲಿಸಿದೆ ಎಂದು ಖರ್ಗೆ ಆರೋಪಿಸಿದರು."ಮೋದಿ ಆಡಳಿತದ 11 ವರ್ಷಗಳಲ್ಲಿ 33 ತಪ್ಪುಗಳು ನಡೆದಿವೆ. ನಿಮಗೆ ತಿಳಿದಿದೆ ಮತ್ತು ನಾನು ಸಂಸತ್ತಿನಲ್ಲಿಯೂ ಇದನ್ನು ಹೇಳುತ್ತಿದ್ದೇನೆ – ಇಷ್ಟೊಂದು ಸುಳ್ಳು ಹೇಳುವ, ಇಷ್ಟೊಂದು ತಪ್ಪುಗಳನ್ನು ಮಾಡುವ, ಜನರನ್ನು ವಂಚಿಸುವ, ಯುವಕರನ್ನು ವಂಚಿಸುವ, ಬಡವರನ್ನು ವಂಚಿಸಿ ಮತಗಳನ್ನು ಪಡೆಯುವ ಪ್ರಧಾನಿಯನ್ನು ಎಂದಿಗೂ ನೋಡಿಲ್ಲ. ನಾನು 55 ವರ್ಷಗಳ ಕಾಲ ಅಧಿಕಾರದಲ್ಲಿದ್ದೇನೆ ಮತ್ತು 65 ವರ್ಷಗಳಿಂದ ರಾಜಕೀಯದಲ್ಲಿದ್ದೇನೆ. ಆದರೆ ಇಂತಹ ಪ್ರಧಾನಿಯನ್ನು ಯಾವತ್ತೂ ನೋಡಿಲ್ಲ" ಎಂದು ಖರ್ಗೆ ಹೇಳಿದರು.ಪ್ರಧಾನಿಯವರು ಎಲ್ಲದಕ್ಕೂ ಸುಳ್ಳು ಹೇಳುತ್ತಾರೆ ಮತ್ತು ಅವರು ಹೇಳುವ ಯಾವುದನ್ನೂ ಜಾರಿಗೆ ತರುವುದಿಲ್ಲ ಮತ್ತು ಪ್ರಶ್ನಿಸಿದಾಗ ಅವರ ಬಳಿ ಅದಕ್ಕೆ ಯಾವುದೇ ಉತ್ತರ ಇರುವುದಿಲ್ಲ. "ಅದು ನೋಟು ರದ್ದತಿಯಾಗಿರಲಿ, ಉದ್ಯೋಗ ಸೃಷ್ಟಿಯಾಗಿರಲಿ ಅಥವಾ ಒಋಕ ಆಗಿರಲಿ, ಇಂತಹ ಹಲವು ವಿಷಯಗಳಿವೆ. ಅವರು ಜನರಿಗೆ ಸುಳ್ಳು ಹೇಳಿದ್ದೇನೆ ಮತ್ತು ತಪ್ಪು ಮಾಡಿದ್ದೇನೆ ಎಂದು ಎಂದಿಗೂ ಒಪ್ಪಿಕೊಂಡಿಲ್ಲ ಮತ್ತು ಅದಕ್ಕಾಗಿ ಎಂದಿಗೂ ಕ್ಷಮೆಯಾಚಿಸಿಲ್ಲ. ಅವರು ಒಂದರ ನಂತರ ಒಂದರಂತೆ ಸುಳ್ಳುಗಳನ್ನು ಹೇಳುತ್ತಲೇ ಇದ್ದಾರೆ" ಎಂದು ಖರ್ಗೆ ವಾಗ್ದಾಳಿ ನಡೆಸಿದರು.

# ರೆಡ್ಡಿಗೆ ಬಿಗ್ ರಿಲೀಫ್: ಫಲಿಸಿತು ಪತ್ನಿಯ ಪೂಜಾಫಲ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಜೂ.11:ತಮ್ಮ ಪತಿಗೆ ವಿಧಿಸಿದ್ದ ಶಿಕ್ಷೆನ್ಯಾಯಾಲಯದಿಂದ ಮುಕ್ತಿ ದೊರೆಯುವಂತೆ ಆಗಲಿ ಎಂದು ಜನಾರ್ಧನರೆಡ್ಡಿ ಅವರ ಪತ್ನಿ ಲಕ್ಷ್ಮೀ ಅರುಣಾ ಅವರು ರಾಜ್ಯದ ಮತ್ತು ಹೊರ ರಾಜ್ಯದ ವಿವಿಧ ದೇವಾಲಯಗಳಲ್ಲಿ ಸಲ್ಲಿಸಿದ ಪೂಜೆಗೆ ಫಲ ದೊರೆತಿದೆ.

ತಮ್ಮಪತಿಗೆ ಶಿಕ್ಷೆಯಿಂದ ಬಿಡುಗಡೆ ದೊರೆಯಲಿ ಎಂದು ಲಕ್ಷ್ಮಿ ಅರುಣಾ ಜನಾರ್ಧನ್‌ರೆಡ್ಡಿಯವರು ಆನೆಗುಂದಿಯ ಅಂಜನಾದ್ರಿ ಬೆಟ್ಟದ ಆಂಜನೇಯನಿಗೆ ಪೂಜೆ ಸಲ್ಲಿಸಿ, ಪಟ್ಟಾನಬಿರಾಮನ ದೇವಸ್ಥಾನದಲ್ಲಿ ರಾಮಾಯಣದ ಸುಂದರಕಾಂಡದ ಕೋಟಿ ಬರಹಕ್ಕೆ ಸಂಕಲ್ಪ ಮಾಡಿದ್ದರು.

ಉಡುಪಿಯ ಕೃಷ್ಣನ ದರ್ಶನವನ್ನು ಪಡೆದು,ಪುತ್ತಿಗೆಶ್ರೀಗಳ ಆಶೀರ್ವಾದವನ್ನು ಪಡೆದಿದ್ದಾರೆ. ಅಷ್ಟೇ ಅಲ್ಲದೆ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದಲ್ಲಿ ಶತ್ರು ಹಾಗೂ ಸಂಕಷ್ಟಗಳ ನಿವಾರಣೆಗಾಗಿ ಹೋಮ ಮಾಡಿಸಿದ್ದಾರೆ. ಬ್ರಹ್ಮಲಿಂಗೇಶ್ವರ ದೇವಸ್ಥಾನಕ್ಕೂ ಭೇಟಿ ನೀಡಿ ಆಶೀರ್ವಾದ ಪಡೆದಿದ್ದರು.

ಇಷ್ಟಾರ್ಥವನ್ನು ಪೂರೈಸುವ ಅಸ್ಸಾಂನ ಕಾಮಾಖೀನಿ ದೇವಿಯ ದೇವಸ್ಥಾನಕ್ಕೆ



ತೆರಳಿ ಪೂಜೆ ಸಲ್ಲಿಸಿದ್ದರು.

ಜೂ. 10ನೇ ರಂದು ನಡೆಯುವ ವಿಚಾರಣೆಯಲ್ಲಿ ನ್ಯಾಯ ದೇವತೆ ಕೃಪಾಕಟಾಕ್ಷ ದೊರೆಯಲಿ ಎಂಬ ಆಶಯದೊಂದಿಗೆ ದೈವಗಳ ಮೊರೆಹೋಗಿದ್ದ ಅವರಿಗೆ ದೇವರು ವರ ಕೊಟ್ಟಿದ್ದು, ಇಂದು ತೆಲಂಗಾಣ ಹೈಕೋರ್ಟ್ ಶಿಕ್ಷೆಗೆ ತಡೆಯಜ್ಞೆ ನೀಡಿದೆ. ಕುಟುಂಬದ ಸದಸ್ಯರು ಮತ್ತು ಆತ್ಮೀಯ ಸ್ನೇಹಿತರು ಅಂತರನ್ನು ಕಾಯ್ದುಕೊಂಡಿರುವ ಈ ಸಂದರ್ಭದಲ್ಲಿ ಶ್ರೀಮತಿ ಲಕ್ಷ್ಮಿ ಅರುಣ ಜನಾರ್ದನ್ ರೆಡ್ಡಿ ಅವರು ಎದೆಗುಂದದೆ ಕಾರ್ಯಕರ್ತರಲ್ಲಿ ಹುಮ್ಮಸ್ಸನ್ನು ಮೂಡಿಸಿ, ಸ್ವತಹ ಪ್ರತಿಯೊಂದು ದೇವಸ್ಥಾನಕ್ಕೆ ಹೋಗಿ ಪೂಜೆ ಹವನಗಳನ್ನು ಮಾಡಿ ಪತಿಯ ಬಿಡುಗಡೆಗಾಗಿ ದೇವರಲ್ಲಿ ಪ್ರಾರ್ಥಿಸಿಕೊಂಡಿದ್ದರು.

ಸಾವಿರಾರು ಕಾರ್ಯಕರ್ತರ ಆಶಯ, ಹಾಗೂ ದೇವರ ಕೃಪೆಯಿಂದ ಇಂದು ಜನಾರ್ದನ್ ರೆಡ್ಡಿ ಅವರಿಗೆ ನೀಡಿರುವ ಶಿಕ್ಷೆಗೆ ಹೈಕೋರ್ಟ್ ತಡೆ ಆಜ್ಞೆಯನ್ನು ನೀಡಿದ್ದು ಕಾರ್ಯಕರ್ತರಲ್ಲಿ ಹುಮ್ಮಸ್ಸು ಏರ್ಪಟ್ಟಿದೆ, ಅನೇಕ ಕಡೆಗಳಲ್ಲಿ ಅವರ ಅಭಿಮಾನಿಗಳು ಪಟಾಕಿ ಸಿಡಿಸಿ ಸಂಭ್ರಮಿಸುತ್ತಿದ್ದಾರೆ.

ಒಟ್ಟಾರೆಯಾಗಿ ಏಕಾಂಗಿ ಹೋರಾಟ ನಡೆಸಿದ ಶ್ರೀ ಲಕ್ಷ್ಮಿ ಜನಾರ್ದನ್ ರೆಡ್ಡಿ ಅವರ ಪೂಜಾ ಫಲ ಮತ್ತು ಕಾರ್ಯಕರ್ತರ ಆಶಯ ದೇವರು ಈಡೇರಿಸಿದ್ದಾನೆ ಎಂದು ಹೇಳಬಹುದು.

# ಮುಂದಿನ 3 ವರ್ಷದಲ್ಲಿ 60 ಸಾವಿರ ಮೆವ್ಯಾ ವಿದ್ಯುತ್ ಉತ್ಪಾದಿಸಿ ತೋರಿಸುತ್ತೇವೆ : ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

ಮಲ್ಲಮ್ಮ ನುಡಿ ವಾರ್ತೆ

ಚಿಕ್ಕಬಳ್ಳಾಪುರ/ಬೆಂಗಳೂರು,ಜೂ. 11 :ಸರ್ಕಾರದಿಂದ ಪ್ರತೀ ವರ್ಷ 19000 ಕೋಟಿ ರೂಪಾಯಿ ಪಂಪ್ ಸೆಟ್ ಸಬ್ಸಿಡಿ ಹಣ ನೀಡುತ್ತಿದ್ದೇವೆ. 4 ಸಾವಿರ ಮೆ.ವ್ಯಾ ವಿದ್ಯುತ್ ಉತ್ಪಾದನೆ ಹೆಚ್ಚಿಸಲಾಗಿದೆ. ಮುಂದಿನ 3 ವರ್ಷದಲ್ಲಿ 60 ಸಾವಿರ ಮೆ.ವ್ಯಾ ವಿದ್ಯುತ್ ಉತ್ಪಾದಿಸಿ ತೋರಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಇಂದು ಗೌರಿಬಿದನೂರಿನಲ್ಲಿ ಇಂಧನ ಇಲಾಖೆ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಮತ್ತು ಜಿಲ್ಲಾಡಳಿತ ಹಾಗೂ ಡಾ.ಎಚ್.ನರಸಿಂಹಯ್ಯ ಸಾಂಸ್ಕೃತಿಕ ಕೇಂದ್ರ, ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕುಸುಮ್ ಸೌರೀಕರಣ ಯೋಜನೆಗೆ ಚಾಲನೆಗೆ ನೀಡಿ, 'ಲಿಪಿ–ಮನೆ' ಕಟ್ಟಡ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಇಂದು ನಾನು ಉದ್ಘಾಟನೆ ಮಾಡಿರುವ, 70 ಮೆ.ವ್ಯಾ ವಿದ್ಯುತ್ ಉತ್ಪಾದನೆಯ ಸೌರೀಕರಣ ಘಟಕದಿಂದ ರೈತರಿಗೆ ಹಗಲಿನಲ್ಲೇ 3 ಫೇಸ್ ವಿದ್ಯುತ್ ಅನ್ನು



5 ಗಂಟೆಗಳ ಕಾಲ ಒದಗಿಸಲಾಗುತ್ತಿದೆ ಎಂದರು.

ಸಂಪೂರ್ಣ ಗುಣಮಟ್ಟದ ವಿದ್ಯುತ್ ರೈತರ ಪಂಪ್ ಸೆಟ್‌ಗಳಿಗೆ ಸಿಗುತ್ತಿರುವುದರಿಂದ ವಿದ್ಯುತ್ ಅಪವ್ಯಯ ಆಗುವುದು ತಪ್ಪಿದೆ ಎಂದು ಮೆಚ್ಚುಗೆ ಸೂಚಿಸಿದರು.

ಹೆಸರಿಗೆ ಇದು ಕೇಂದ್ರದ ಯೋಜನೆ. ಆದರೆ ರಾಜ್ಯ ಸರ್ಕಾರ ಶೇ50 ರಷ್ಟು ಹಣ ಕೊಡುತ್ತದೆ. ಶೇ.20 ರಷ್ಟು ಹಣ ಹೂಡಿಕೆದಾರರದ್ದು. ಕೇಂದ್ರ ಸರ್ಕಾರ ಕೊಡುವುದು ಕೇವಲ ಶೇ.30 ರಷ್ಟು ಹಣ ಮಾತ್ರ. ಆದರೂ ಇದಕ್ಕೆ ಕೇಂದ್ರದ ಯೋಜನೆ ಎಂದು ಹೆಸರಿಟ್ಟಿದ್ದಾರೆ ಎಂದರು.

ಒಂದು ಮೆ.ವ್ಯಾ. ವಿದ್ಯುತ್ ಉತ್ಪಾದನೆಗೆ 3 ಕೋಟಿ ಖರ್ಚಾದರೆ ಒಂದು ಕೋಟಿ ಮಾತ್ರ ಕೇಂದ್ರ ಸರ್ಕಾರದ್ದು. ಉಳಿದದ್ದಷ್ಟನ್ನೂ ನಾವು ಕೊಡ್ತೇವೆ ಎಂದು ವಿವರಿಸಿದರು.

ನಾವು ಅಧಿಕಾರಕ್ಕೆ ಬಂದು 4 ಸಾವಿರ ಮೆ.ವ್ಯಾ ವಿದ್ಯುತ್ ಉತ್ಪಾದನೆ ಹೆಚ್ಚಿಸಿದ್ದೇವೆ. ಈಗ ಒಟ್ಟು 30 ಸಾವಿರ ಮೆವ್ಯಾ ಉತ್ಪಾದನೆ ಆಗುತ್ತಿದೆ. ಮುಂದಿನ ಮೂರು ವರ್ಷಗಳಲ್ಲಿ 60 ಸಾವಿರ ಮೆ.ವ್ಯಾ. ಗೆ ಉತ್ಪಾದನೆ ಹೆಚ್ಚಿಸುವ ಗುರಿ ಹೊಂದಿದ್ದೇವೆ ಎಂದು ವಿವರಿಸಿದ ಮುಖ್ಯಮಂತ್ರಿಗಳು, ಇದರ ಮೂಲಕ ರೈತರ ಬಹು ದೊಡ್ಡ ಸಂಕಷ್ಟಕ್ಕೆ ಪರಿಹಾರ ಒದಗಿಸಿಕೊಡುತ್ತಿದ್ದೇವೆ ಎಂದರು.

ನಾವು ಚುನಾವಣೆಗೂ ಮೊದಲು ಕೊಟ್ಟಿದ್ದ ಭರವಸೆಗಳಲ್ಲಿ ಬಹುಪಾಲನ್ನು ಈಗಾಗಲೇ ಈಡೇರಿಸಿ ರಾಜ್ಯದ ಜನರ ಮನೆ ಬಾಗಿಲಿಗೆ ತಲುಪಿಸಿದ್ದೇವೆ. ಮುಂದಿನ ಮೂರು ವರ್ಷಗಳಲ್ಲಿ ಉಳಿದ್ದದ್ದೆಲ್ಲವನ್ನೂ ಈಡೇರಿಸಿ ನುಡಿದಂತೆ ನಡೆಯುವ ನಮ್ಮ ಪರಂಪರೆಯನ್ನು ಮುಂದುವರೆಸುತ್ತೇವೆ ಎಂದರು.

ಗೌರಿಬಿದನೂರಿಗೆ ಬಂಪರ್ : ಮುಂದಿನ ಬಜೆಟ್ ನಲ್ಲಿ ಗೌರಿಬಿದನೂರಿಗೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಅಲ್ಲದೇ, ಅಲಿಪುರ ಗ್ರಾಮ ಪಂಚಾಯ್ತಿಯನ್ನು ಪಟ್ಟಣ ಪಂಚಾಯ್ತಿಗೆ ಮೇಲ್ದರ್ಜೆಗೆ ಏರಿಸಲಾಗುವುದು ಮತ್ತು ಶಾಸಕ ಪುಟ್ಟಸ್ವಾಮಿಗೌಡರು ಮತ್ತು ಶಿವಶಂಕರ ರೆಡ್ಡಿಯವರು ಮುಂದಿಟ್ಟಿರುವ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಇಲಾಖೆ ಸಚಿವರಾದ ಡಾ. ಎಂ.ಸಿ. ಸುಧಾಕರ್, ಇಂಧನ ಇಲಾಖೆಯ ಸಚಿವರಾದ ಕೆ.ಜೆ. ಜಾರ್ಜ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮ್ಮದ್, ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಜೇಗೌಡ, ಡಾ.ಹೆಚ್.ನರಸಿಂಹಯ್ಯ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್.ಶಿವಶಂಕರ ರೆಡ್ಡಿ, ಶಾಸಕರಾದ ಪ್ರದೀಪ್ ಈಶ್ವರ್, ಎಸ್. ಎನ್.ಸುಬ್ಬಾರೆಡ್ಡಿ, ಕೆ.ಹೆಚ್.ಪುಟ್ಟಸ್ವಾಮಿಗೌಡ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಎಂ.ಶಿವಶಂಕರ್ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾಲಿಪಾಟೀಲ್ ನಿವಾಸಕ್ಕೆ ಮಾಜಿ ಸಚಿವ ಪಾಟೀಲ್ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ :ಜೂ.11: ಕಾಂಗ್ರೆಸ್ ಹಿರಿಯ ಮುಖಂಡ ರಾಜಶೇಖರ ಮಾಲಿಪಾಟೀಲ್ ಅನಾರೋಗ್ಯದಿಂದ ಬಳಲುತ್ತಿದ್ದ, ಹಿನ್ನಲೆ ತಾಲೂಕಿನ ಮುಸ್ತರಿ ಗ್ರಾಮದ ರಾಜಶೇಖರ ಮಾಲಿಪಾಟೀಲ್ ನಿವಾಸಕ್ಕೆ ಬುಧವಾರ ಮಾಜಿ ಸಚಿವ ರಾಜಶೇಖರ ಪಾಟೀಲ್ ಭೇಟಿ ನೀಡಿ ಅವರ ಆರೋಗ್ಯ ಕುರಿತು ವಿಚಾರಿಸಿದರು.

ಹೃದಯಾಘತಕ್ಕೆ ಒಳಗಾಗಿದ್ದ ಕಾಂಗ್ರೆಸ್ ಮುಖಂಡ ರಾಜಶೇಖರ ಮಾಲಿಪಾಟೀಲ್‌ಗೆ ಊಟೋಪಚಾರದ ಶೈಲಿ ಬದಲಾವಣೆ ಕುರಿತು ತಿಳಿಸಿ, ಯಾವುದಕ್ಕೂ ಭಯಪಡದೇ ವೈದ್ಯರ ಸಲಹೆ ಸೂಚನೆಗಳನ್ನು ಸೂಕ್ತ ರೀತಿಯಲ್ಲಿ ಪಾಲಿಸುವಂತೆ ಸಲಹೆ ನೀಡಿ, ಧೈರ್ಯವಾಗಿರಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಪಂ. ಮಾಜಿ ಸದಸ್ಯ ವೀರಣ್ಣ ಪಾಟೀಲ್, ಜಿಪಂ. ಮಾಜಿ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ,

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ್ ಮಾಶಟ್ಟಿ, ಪ್ರಭುರಾವ ತುಗಾಂವ, ವೀರೇಶ ತುಗಾಂವ, ಸಿದ್ದು ಅಡಕ್ಕೈ, ಈಶ್ವರ ಜಕ್ಕಾ, ಗುಂಡಪ್ಪ ಹಳ್ಳಿ, ರವಿ ಬಿರಾದಾರ್, ಭೀಮಶಟ್ಟಿ, ಬಾವಿಕಟ್ಟಿ, ರಾಜು ಹೈಬತ್ತಿ, ನಾಗಶಟ್ಟಿ ಸಾಂಗಳಿಕರ್, ಸಿದ್ದು ಬಾಳಿಗಿಡ, ರವಿಚಂದ್ರನ್ ಸಂಗಮ್ ಇದ್ದರು.

# ಹಾಲು ಉತ್ಪಾದಕರ ಸಹಕಾರ ಸಂಘಗಳು ಆರ್ಥಿಕವಾಗಿ ಬಲವರ್ಧನೆಗೊಳ್ಳಬೇಕು:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.11 : ಖಖ ಹಾಲಿನ ಕ್ಯಾನ್ ಮತ್ತು ಆಕಒಅಗ ಗಳನ್ನು ಒದಗಿಸಿಕೊಡುವುದರಿಂದ ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘದ ಸದಸ್ಯರಿಗೆ ಬಹಳಷ್ಟು ಉಪಯುಕ್ತವಾಗಲಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ತಿಳಿಸಿದರು.ಅವರು ಬುಧವಾರದಂದು ಜಿಲ್ಲಾಡಳಿತ ಬೀದರ ಸಂಯುಕ್ತಾಶ್ರಯದಲ್ಲಿ ಬೀದರನ ಕೆ.ಎಮ್.ಎಫ್.ಡೈರಿ ಚಿಕ್ಕಪೇಟದಲ್ಲಿ ಹಮ್ಮಿಕೊಂಡಿದ್ದ ಶ್ರೀ ವೀರೇಂದ್ರ ಹೆಗ್ಗಡೆ ಸಂಸದರು (ದಕ್ಷಿಣ ಕನ್ನಡ) ಇವರ 2023–24ನೇ ಸಾಲಿನ ಸಂಸದರ ಅನುದಾನದಲ್ಲಿ ಬೀದರ ಜಿಲ್ಲೆಯ ಹಾಲು ಉತ್ಪಾದಕರ



ಸಹಕಾರ ಸಂಘಗಳಿಗೆ ಖಖ ಹಾಲಿನ ಕ್ಯಾನಗಳು ಹಾಗೂ ಆಕಒಅಗ ಗಳನ್ನು ಒದಗಿಸಿಕೊಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.ಆಕಳ ಹಾಲು ಮತ್ತು ಎಮ್ಮೆಯ ಹಾಲನ್ನು ಹಾಲಿನ ಈಚಿಣ & SNF Test ಮಾಡುವುದರ ಮೂಲಕ 35 ರೂ. ರಿಂದ 65 ರೂ. ಪ್ರತಿ ಲೀಟರ ದೊರಕಲಿದ್ದು, ಅವರ ಆರ್ಥಿಕ ಆದಾಯ ಹೆಚ್ಚಲಿರುವುದರಿಂದ ಈ ಯೋಜನೆಯ ಸದುಪಯೋಗ ಪಡೆದುಕೊಂಡು ಹಾಲು ಉತ್ಪಾದಕರ ಸಹಕಾರ ಸಂಘಗಳು ಆರ್ಥಿಕವಾಗಿ ಬಲವರ್ಧನೆಗೊಳ್ಳಬೇಕೆಂದು ತಿಳಿಸಿದರು.ಜಿಲ್ಲೆಯ 192 ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲಿನ ಕ್ಯಾನ್‌ಗಳನ್ನು 51 ಲಕ್ಷ ರೂ. ಅನುದಾನದಲ್ಲಿ ಹಾಗೂ 89 ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ತಲಾ ಒಂದು DPMCUಗಳನ್ನು 97 ಲಕ್ಷ ರೂ. ಅನುದಾನದಲ್ಲಿ ಒದಗಿಸಿಕೊಡಲಾಗಿರುತ್ತದೆಂದು ತಿಳಿಸಿದರು.ಈ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಬಿರಾದಾರ, ನಾಗರಾಜ ಪಾಟೀಲ್, ಸಂಗೋಷ ಪಾಟೀಲ್, ಡಾ. ಎಸ್.ಎಸ್. ಹಿರೇಮಠ

ಡಾ. ನರಸಪ್ಪಾ ಉಪ ನಿರ್ದೇಶಕರು ಬೀದರ, ಡಾ. ಅಂಕಿತಾ, ಡಾ. ಪ್ರವೀಣ, ಕೆಎಂಎಫ್

ಅಧಿಕಾರಿಗಳು, ಸಿಬ್ಬಂದಿಗಳು ಸೇರಿದಂತೆ ಹಾಲು ಉತ್ಪಾದಕರ ಸಹಕಾರ ಸಂಘಗಳ

ಅಧ್ಯಕ್ಷರು, ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

# ಬಿಲ್‌ಕೆರೂರಿನಲ್ಲಿ ವೈಭವದ ರಥೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.12–ತಾಲೂಕಿನ ಬಿಲ್‌ಕೆರೂರಿನ ಬಿಲ್ವಾಶ್ರಮ ಹಿರೇಮಠದಲ್ಲಿ ಮಂಗಳವಾರ ಲಿಂ.ರುದ್ರಮುನಿ ಶಿವಾಚಾರ್ಯರ ನೂತನ ರಥೋತ್ಸವ ಭಕ್ತರ ಹರ್ಷೋದ್ಗಾರದ ಮಧ್ಯೆಬವೈಭವಯುತವಾಗಿ ಜರುಗಿತು.

ಪ್ರಥಮ ಬಾರಿಗೆ ನಡೆದ ಅದ್ದೂರಿ ರಥೋತ್ಸವಕ್ಕೆ ಉಜ್ಜೈನಿ, ಕಾಶೀ ಜಗದ್ಗುರುಗಳು ಸೇರಿ ಅನೇಕ ಜನ ಮಠಾಧೀಶರು, ಅಪಾರ ಸಂ–ಖ್ಯೆಯ ಜನಸ್ತೋಮ ಸಾಕ್ಷಿಯಾದರು.

ರಥವನ್ನು ಉಜ್ಜೈನಿ ಪೀಠದ ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯರು, ಕಾಶೀ ಪೀಠದ ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಲೋಕಾರ್ಪಣೆಗೊಳಿಸಿದರು.ಶ್ರೀಮಠದ ಸಿದ್ಧಲಿಂಗ ಶಿವಾಚಾರ್ಯರು, ಗಿರಿಸಾಗರದ ರುದ್ರಮುನಿ ಶಿವಾಚಾರ್ಯರು, ಶಿವಗಂಗೆ, ಮುತ್ತತ್ತಿ, ನಿಡಗುಂದಿ, ಬೀಳಗಿ, ಬಾಗೇವಾಡಿ ಶ್ರೀಗಳು, ಹುನಗುಂದ ಶಾಸಕ ವಿಜಯಾನಂದ



ಕಾಶಪ್ಪನವರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ವಿವಿಧ ಗ್ರಾಮಗಳಿಂದ ರಥದ ಹಗ್ಗ, ಕಳಸ, ಬಾಜಾ ಭಜಂತ್ರಿ, ಬಾಳೆಕಂಬ, ನಂದಿಕೋಲುಗಳನ್ನು ಮೆರವಣಿಗೆ ಮೂಲಕ ಶ್ರೀಮಠಕ್ಕೆ ತರಲಾಯಿತು. ಸಾಯಂಕಾಲ 5–30 ಗಂಟೆಗೆ ಶ್ರೀಮಠದ ಆವರಣದಲ್ಲಿ ನಿರ್ಮಿಸಲಾದ ನೂತನ ರಥ ಬೀದಿಯಲ್ಲಿ ರಥೋತ್ಸವ ಜರುಗಿತು. ಭಕ್ತ ಸಮೂಹ ತೇ–ೇರು ಸಾಗಿ ಬರುತ್ತಿದ್ದಂತೆ ಉತ್ತತ್ತಿ, ಹೂವು, ಹಣ್ಣು ಎಸೆದು ಹರಕೆ ತೀರಿಸಿದರು. ಬಿಲ್‌ಕೆರೂರ, ಭಗವತಿ, ನಾಯನೇಗಲಿ, ವಿಜಯಪುರ, ಬೇವೂರ, ಹಳ್ಳೂರ, ರಾಂಪುರ, ಬೆನಕಟ್ಟಿ, ಬೋಡನಾಯಕದಿನ್ನಿ, ಬಾಗಲಕೋಟೆ ಮತ್ತಿತರ ಗ್ರಾಮಗಳ ಭಕ್ತ ಸಮೂಹ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಮಾರಕಾಸ್ತ್ರಗಳಿಂದ ಕೊಚ್ಚಿ ರೌಡಿಶೀಟರ್ ಕೊಲೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.11–ರೌಡಿ ಶೀಟರ್ ಒಬ್ಬನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆ ಮಾಡಿರುವ ಘಟನೆ ಆಳಂದ ತಾಲ್ಲೂಕಿನ ಸಾವಳೇಶ್ವರ ಕ್ರಾಸ್ ಬಳಿ ಮಂಗಳವಾರ ತಡರಾತ್ರಿ ನಡೆದಿದೆ.

ಸುಧಾಕರ್ (32) ಕೊಲೆಯಾದ ವ್ಯಕ್ತಿ ಎಂದು ತಿಳಿದು ಬಂದಿದೆ.

ಮಂಗಳವಾರ ತಡರಾತ್ರಿ ಸಹೋದರನ ಜೊತೆ ಬೈಕ್ ಮೇಲೆ ತೆರಳುವಾಗ ದುಷ್ಕರ್ಮಿಗಳು ದಾಳಿ ನಡೆಸಿ ಮಾರಾಕಾಸ್ತ್ರಗಳಿಂದ ಕೊಚ್ಚಿ



ಕೊಲೆ ಮಾಡಿದ್ದಾರೆ ಎನ್ನಲಾಗಿದೆ. ಈ ಘಟನೆಯಲ್ಲಿ ಸುಧಾಕರನ ಸಹೋದರನಿಗೆ ಗಂಭೀರ ಗಾಯವಾಗಿದ್ದು, ಆತನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.ಹಳೆ ವೈಷಮ್ಯದ ಹಿನ್ನೆಲೆಯಲ್ಲಿ ಕೊಲೆ ಮಾಡಿರುವ ಶಂಕೆ ಪೊಲೀಸರು ವ್ಯಕ್ತಪಡಿಸಿದ್ದಾರೆ. ಘಟನಾ ಸ್ಥಳಕ್ಕೆ ಆಳಂದ ಪೊಲೀಸರು ಭೇಟಿ ನೀಡಿ ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

# ಯುವಕ ಹೃದಯಾಘಾತಕ್ಕೆ ಬಲಿ

ಹಾಸನ:ಜೂ.11: ಬೆಂಗಳೂರಿನ ಜೆಪಿ ನಗರದಲ್ಲಿ ಹಾಸನ ಮೂಲದ ಯುವಕರೊಬ್ಬರು ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ನಿಶಾಂತ್ (19) ಮೃತಪಟ್ಟ ಯುವಕ. ಹೊಳೆನರಸೀಪುರ ಪಟ್ಟಣದ ಚನ್ನಕೇಶವ ಹಾಗೂ ಜ್ಯೋತಿ ದಂಪತಿ ಪುತ್ರ ನಿಶಾಂತ್ ಡಿಪ್ಲೋಮಾ ಮುಗಿಸಿ ಕೈಗಾರಿಕಾ ತರಬೇತಿ ಸಲುವಾಗಿ 15 ದಿನದ ಹಿಂದೆ ಬೆಂಗಳೂರಿಗೆ ತೆರಳಿದ್ದರು.

ಇಂದು ರೂಂನಲ್ಲಿದ್ದಾಗ ತೀವ್ರ ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಮೃತದೇಹವನ್ನು ಬೆಂಗಳೂರಿನ ಸೆಂಟ್ ಜಾನ್ ಆಸ್ಪತ್ರೆಗೆ ರವಾನೆ ಮಾಡಲಾಗಿದ್ದು ಮರಣೋತ್ತರ ಪರೀಕ್ಷೆ ಬಳಿಕ ಹಾಸನಕ್ಕೆ ತರಲಾಗುತ್ತದೆ.

ಎರಡು ತಿಂಗಳ ಅಂತರದಲ್ಲಿ ಹಾಸನ ಮೂಲದ ನಾಲ್ವರು ಹೃದಯಾಘಾತಕ್ಕೆ ಮೃತಪಟ್ಟಿದ್ದಾರೆ. ಹೊಳೆನರಸೀಪುರ ಪಟ್ಟಣದ ಓರ್ವ ಯುವಕ, ಯುವತಿ, ಅರಕಲಗೂಡು ತಾಲ್ಲೂಕಿನ ಓರ್ವ ಯುವಕ, ಹಾಸನ ತಾಲ್ಲೂಕಿನ ಓರ್ವ ಯುವತಿ ಹೃದಯಾಘಾತದಿಂದ ಮೃತಪಟ್ಟಿದ್ದರು.

# ವಾರ್ತಾ ಇಲಾಖೆ ಆಯುಕ್ತ ನಿಂಬಾಳ್ಕರ ವಿದೇಶಕ್ಕೆ

ಬೆಂಗಳೂರು:ಜೂ.11:ವಾರ್ತಾ ಇಲಾಖೆ ಆಯುಕ್ತರು ಹಾಗೂ ಎಡಿಜಿಪಿಗಳಾದ ಹೇಮಂತ ಎಂ ನಿಂಬಾಳ್ಕರರು ಜೂ.12 ರಿಂದ 29 ರವರೆಗೆ ವಿದೇಶ ಪ್ರವಾಸ ಕೈಗೊಳ್ಳುತ್ತಿರುವದರಿಂದ ಸರ್ಕಾರ ರಜಾ ಅವಧಿಯಲ್ಲಿ ನಾಗೇಂದ್ರಪ್ರಸಾದ ಕೆ ನಿರ್ದೇಶಕರು ಕರ್ನಾಟಕ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಮತ್ತು ಪದನಿಮಿತ್ಯ ಜಂಟಿ ಕಾರ್ಯದರ್ಶಿ ಪಂಚಾಯತರಾಜ್ ಹಾಗೂ

ಗ್ರಾಮೀಣಾಭಿವೃದ್ಧಿ ಇಲಾಖೆ ಇವರನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಹುದ್ದೆಯ ಸಮವರ್ತಿತ ಪ್ರಭಾರದಲ್ಲಿರಿಸಲಾಗಿದೆ ಎಂದು ಸರ್ಕಾರದ ಆಧೀನ ಕಾರ್ಯದರ್ಶಿ ನಾಗಪ್ಪ ಎಸ್ ಪರೀಟ್ ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.